ಸಂಪುಟ: 05 ಸಂಚಿಕೆ: 172 ಪುಟಗಳು: 08 ಶುಕ್ರವಾರ 05 ಸೆಪ್ಟೆಂಬರ್ 2025 www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**
ಸಾಧ್ಯವೇ ಇಲ್ಲ ಎಂದುಕೊಂಡರೆ ಏನನ್ನೂ ಸಾಧಿಸಲಾಗದು. ಪ್ರಯತ್ನಿಸುವುದರಿಂದ ನಷ್ಟವೇನಿದೆ ಗೆದ್ದರೆ ಸಂತೋಷ, ಸೋತರೆ ಅನುಭವ.

## ಧರ್ಮಸ್ಥಳ ಪ್ರಕರಣ ಎನ್‌ಐಎಗೆ ವಹಿಸಿ: ಸಂತರಿಂದ ಅಮಿತ್‌ಶಾಗೆ ಮನವಿ

• ಉದಯವಾಹಿನಿ, ಬೆಂಗಳೂರು

ದೇಶದದ್ಯಾಂತ ಭಾರೀ ಸದ್ದು ಮಾಡಿರುವ ಧರ್ಮಸ್ಥಳ ಪ್ರಕರಣದ ತನಿಖೆಯನ್ನು ರಾಷ್ಟ್ರೀಯ ತನಿಖಾ ಸಂಸ್ಥೆಗೆ ವಹಿಸಬೇಕೆಂದು ಒತ್ತಾಯಿಸಿ, ಕರ್ನಾಟಕದ ಸನಾತನ ಸಂತರ ನಿಯೋಗವು ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರನ್ನು ದೆಹಲಿಯಲ್ಲಿ ಭೇಟಿಯಾಗಿ ಮನವಿ ಸಲ್ಲಿಸಿದೆ.

ಪಂಚಮಸಾಲಿ ಲಿಂಗಾಯತ ಮಠದ ವಚನಾನಂದ ಸ್ವಾಮೀಜಿ ನೇತೃತ್ವದ ಈ ನಿಯೋಗದಲ್ಲಿ, ಮಂಗಳೂರಿನ ಗುರುಪುರ ವಜ್ರದೇಹಿ ಮಠದ ಶ್ರೀ ರಾಜಶೇಖರಾನಂದ ಸ್ವಾಮೀಜಿ ಸೇರಿದಂತೆ ವಿವಿಧ ಪೀಠಗಳ ಒಟ್ಟು ಎಂಟು ಸ್ವಾಮೀಜಿಗಳು ಭಾಗವಹಿಸಿದ್ದರು.

ಈ ಭೇಟಿಯ ಸಂದರ್ಭದಲ್ಲಿ, ಧರ್ಮಸ್ಥಳದ ವಿರುದ್ಧ ನಡೆಯುತ್ತಿರುವ ಷಡ್ಯಂತ್ರ ಮತ್ತು ಅಪಪ್ರಚಾರದ ಕುರಿತು ಸುದೀರ್ಘ ಚರ್ಚೆ ನಡೆದಿವೆ.

ಧರ್ಮಸ್ಥಳದಲ್ಲಿ ನಡೆದಿದೆ ಎನ್ನಲಾದ ಶವ ಹೂತ ಪ್ರಕರಣಕ್ಕೆ ಸಂಬಂಧಿಸಿದಂತೆ, ಕರ್ನಾಟಕ ಸರ್ಕಾರವು ರಚಿಸಿರುವ ವಿಶೇಷ



ತನಿಖಾ ತಂಡ ತನಿಖೆಯ ಬಗ್ಗೆ ಸ್ವಾಮೀಜಿಗಳಿಗೆ ಯಾವುದೇ ಆಕ್ಷೇಪವಿಲ್ಲ. ಆದರೆ, ಈ ಪ್ರಕರಣವನ್ನು ಎನ್‌ಐಎಗೆ ವಹಿಸಿದರೆ ಹೆಚ್ಚು ಪಾರದರ್ಶಕವಾಗಿ ಮತ್ತು ಸಮಗ್ರವಾಗಿ ತನಿಖೆ ನಡೆಯಲಿದೆ ಎಂದು ಸ್ವಾಮೀಜಿಗಳ ತಂಡ ಒತ್ತಾಯಿಸಿದೆ. ಧರ್ಮಸ್ಥಳದ ಬಾಹುಬಲಿ ಬೆಟ್ಟದವರೆಗೆ ತಲುಪಿರುವ ಉತ್ಖನನ ಕಾರ್ಯಾಚರಣೆಯ ಬಗ್ಗೆ ಸ್ವಾಮೀಜಿಗಳು ಬೇಸರ ವ್ಯಕ್ತಪಡಿಸಿದ್ದಾರೆ.

ಈ ಉತ್ಖನನವು ಶ್ರೀ ಕ್ಷೇತ್ರ ಧರ್ಮಸ್ಥಳದ ಆಧ್ಯಾತ್ಮಿಕ ಮಹತ್ವವನ್ನು ಕೆಡವುತ್ತಿದೆ ಎಂದು ಅವರು ಆತಂಕ ವ್ಯಕ್ತಪಡಿಸಿದ್ದಾರೆ. ಜೊತೆಗೆ, ಈ ಪ್ರಕರಣದ ಹಿಂದೆ ದೊಡ್ಡ ಷಡ್ಯಂತ್ರವಿದೆ ಎಂದು ಆರೋಪಿಸಿದ ಸ್ವಾಮೀಜಿಗಳು, ಈ ಷಡ್ಯಂತ್ರದ ಸತ್ಯಾಂಶವನ್ನು ಬಯಲಿಗೆ ತರಬೇಕೆಂದು ಒತ್ತಾಯಿಸಿದ್ದಾರೆ.

**ಧರ್ಮಸ್ಥಳದ ವಿರುದ್ಧ ಷಡ್ಯಂತ್ರ**

ಸುಮಾರು ಒಂದು ಗಂಟೆಗೂ ಹೆಚ್ಚು ಕಾಲ ನಡೆದ ಚರ್ಚೆಯಲ್ಲಿ, ಸ್ವಾಮೀಜಿಗಳು ಧರ್ಮಸ್ಥಳದ ವಿರುದ್ಧ ನಡೆಯುತ್ತಿರುವ ಅಪಪ್ರಚಾರದ ಕುರಿತು ವಿವರವಾಗಿ ಮಾಹಿತಿ ನೀಡಿದ್ದಾರೆ. ಧರ್ಮಸ್ಥಳವು ಲಕ್ಷಾಂತರ ಭಕ್ತರ ಆಧ್ಯಾತ್ಮಿಕ ಕೇಂದ್ರವಾಗಿದ್ದು, ಇದರ ವಿರುದ್ಧ ಯೋಜಿತ ರೀತಿಯಲ್ಲಿ ಷಡ್ಯಂತ್ರ ನಡೆಯುತ್ತಿದೆ ಎಂದು ಅವರು ಆರೋಪಿಸಿದ್ದಾರೆ. ಶಬರಿಮಲೆ ಮತ್ತು ತಿರುಪತಿಯಂತಹ ಇತರ ಪವಿತ್ರ ಧಾರ್ಮಿಕ ಕ್ಷೇತ್ರಗಳ ಬಳಿಕ, ಈಗ ಧರ್ಮಸ್ಥಳವನ್ನು ಗುರಿಯಾಗಿಸಲಾಗಿದೆ ಎಂದು ಸ್ವಾಮೀಜಿಗಳು ಗೃಹ ಸಚಿವರ ಮುಂದೆ ಬೇಸರ ವ್ಯಕ್ತಪಡಿಸಿದ್ದಾರೆ. ಹಿಂದೂ ಧರ್ಮ ಕ್ಷೇತ್ರಗಳನ್ನು ಸಂಶಯದಿಂದ ನೋಡುವಂತೆ ಮಾಡುವ ಷಡ್ಯಂತ್ರವಿದು.

ಜನರು ದೇವಸ್ಥಾನಗಳಿಗೆ ಹೋಗದಂತೆ ತಡೆಯುವ ದುರುದ್ದೇಶ ಇದರ ಹಿಂದಿದೆ ಎಂದು ನಿಯೋಗವು ಆರೋಪಿಸಿದೆ. ಸ್ವಾಮೀಜಿಗಳ ನಿಯೋಗವು ಈ ಪ್ರಕರಣವನ್ನು ಎನ್‌ಐಎಗೆ ವಹಿಸಬೇಕೆಂದು ಮನವಿ ಮಾಡಿದೆ. ಈ ಆರೋಪಗಳ ಹಿಂದೆ ರಾಷ್ಟ್ರವಿರೋಧಿ ಶಕ್ತಿಗಳ ಕೈವಾಡವಿದೆ ಎಂದು ಸ್ವಾಮೀಜಿಗಳು ಆರೋಪಿಸಿದ್ದಾರೆ. ಎಲ್ಲವನ್ನೂ ಸೂಕ್ಷ್ಮವಾಗಿ ಗಮನಿಸುತ್ತಿದ್ದೇನೆ ಎಂದು ಗೃಹ ಸಚಿವ ಅಮಿತ್ ಶಾ ಭರವಸೆ ನೀಡಿದ್ದಾರೆ.

ಈ ಪ್ರಕರಣದ ಗಂಭೀರತೆಯನ್ನು ಅರಿತಿರುವ ಶಾ, ಕೇಂದ್ರ ಸರ್ಕಾರವು ಈ ವಿಷಯದಲ್ಲಿ ಗಂಭೀರವಾಗಿ ಕ್ರಮ ಕೈಗೊಳ್ಳಲಿದೆ ಎಂದು ಸೂಚಿಸಿದ್ದಾರೆ. ಸ್ವಾಮೀಜಿಗಳು ಈ ಷಡ್ಯಂತ್ರವು ಕೇವಲ ಧರ್ಮಸ್ಥಳಕ್ಕೆ ಸೀಮಿತವಾಗಿಲ್ಲ, ಬದಲಿಗೆ ಇತರ ಹಿಂದೂ ಧಾರ್ಮಿಕ ಕ್ಷೇತ್ರಗಳನ್ನೂ ಗುರಿಯಾಗಿಸುತ್ತಿದೆ ಎಂದು ಅಮಿತ್ ಶಾ ಮುಂದೆ ಬೇಸರ ವ್ಯಕ್ತಪಡಿಸಿದ್ದಾರೆ. ಈ ಪ್ರಕರಣವು ರಾಜಕೀಯ ವಲಯದಲ್ಲಿ ತೀವ್ರ ಚರ್ಚೆಗೆ ಕಾರಣವಾಗಿದೆ.

ಬಿಜೆಪಿಯು ಈ ಆರೋಪಗಳನ್ನು ಧರ್ಮಸ್ಥಳದ ವಿರುದ್ಧ ಷಡ್ಯಂತ್ರ ಎಂದು ಕರೆದು, ಎನ್‌ಐಎ ತನಿಖೆಗೆ ಒತ್ತಾಯಿಸಿದೆ.

## ಜಾಗತಿಕ ಮಾದರಿಯ ಏಕರೂಪ ಜಿಎಸ್‌ಟಿಗೆ ಗೃಹ ಸಚಿವ ಪರಂ ಆಗ್ರಹ

• ಉದಯವಾಹಿನಿ, ಬೆಂಗಳೂರು

ಜೀವನಾವಶ್ಯಕ ವಸ್ತುಗಳ ಮೇಲಿನ ತೆರಿಗೆಯನ್ನು ಕಡಿಮೆ ಮಾಡುವ ಮೂಲಕ, ಜಾಗತಿಕ ಮಾದರಿಯ ಆಧಾರದಲ್ಲಿ ಏಕರೂಪ ಜಿಎಸ್‌ಟಿಯನ್ನು ಜಾರಿಗೊಳಿಸುವ ಅಗತ್ಯವಿದೆ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ಹೇಳಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಮ್ಮಲ್ಲಿ ದೈನಂದಿನ ಬಳಕೆಯ ಸರಕು ಸೇವೆಗಳಿಗೆ ಶೇ.18, 22, 28ರಷ್ಟು ತೆರಿಗೆ ವಿಧಿಸಲಾಗಿದೆ. ಅದನ್ನು ಕಡಿಮೆ ಮಾಡಬೇಕು. ಎಲ್ಲಾ ಪದಾರ್ಥಗಳ ಮೇಲೂ ಶೇ. 5ರಿಂದ 6ರ ಒಳಗೆ ಜಿಎಸ್‌ಟಿ ಮಿತಿಗೊಳಿಸಬೇಕು. ಜನಸಾಮಾನ್ಯರ ಬಳಕೆಯ ವಸ್ತುಗಳಿಗೆ ಜಿಎಸ್‌ಟಿ ವಿನಾಯಿತಿ ನೀಡಬೇಕೆಂದು ಆಗ್ರಹಿಸಿದರು. ಜಿಎಸ್‌ಟಿ ಕಡಿಮೆ ಮಾಡುವಂತೆ ಕಾಂಗ್ರೆಸ್ ಪಕ್ಷ ಸದನದ ಹೊರಗೆ ಮತ್ತು ಒಳಗೆ ಆಗ್ರಹಿಸಿತ್ತು. ಕೇಂದ್ರ ಸರ್ಕಾರಕ್ಕೆ ಈಗ ಅರಿವಾದಂತಿದೆ. ಕೆಲ ವಸ್ತುಗಳ ಮೇಲೆ ತೆರಿಗೆ ಕಡಿತ ಮಾಡಿರುವುದನ್ನು ನಾನು ಸ್ವಾಗತಿಸುತ್ತೇನೆ ಎಂದರು. ಬೇರೆ ಬೇರೆ ದೇಶಗಳಲ್ಲಿರುವ ಜಿಎಸ್‌ಟಿ ತೆರಿಗೆ ಪ್ರಮಾಣವನ್ನು ಗಣನೆಗೆ ತೆಗೆದುಕೊಳ್ಳಬೇಕು. ಬಹುತೇಕ ದೇಶಗಳಲ್ಲಿ ಶೇ. 10ಕ್ಕಿಂತ ಹೆಚ್ಚಿನ ತೆರಿಗೆಯಿಲ್ಲ. ಆದರೆ ನಮ್ಮಲ್ಲಿ ಶೇ.28ರ ವರೆಗೂ ದುಬಾರಿಯಾಗಿದೆ ಎಂದರು. ಅಭಿವೃದ್ಧಿ ಕಾರ್ಯಗಳಿಗೆ ಹಣ ಬೇಕು. ಆ ಸಂಪನೂಲವನ್ನು ಎಲ್ಲಿಂದ ಕ್ರೋಡೀಕರಿಸಬೇಕು ಎಂಬುದನ್ನು ಹಣಕಾಸು ಇಲಾಖೆ ಪರಿಶೀಲನೆ ಮಾಡಬೇಕು.

## ಜಿಎಸ್‌ಟಿ ಕಡಿತಗೊಳಿಸಿ ರಾಷ್ಟ್ರಕ್ಕೆ ಐತಿಹಾಸಿಕ ದೀಪಾವಳಿ ಉಡುಗೊರೆ

• ಉದಯವಾಹಿನಿ, ಬೆಂಗಳೂರು

ಪ್ರಧಾನಿ ನರೇಂದ್ರ ಮೋದಿ ಅವರು ಜಿಎಸ್‌ಟಿ ಕಡಿತಗೊಳಿಸುವ ಮೂಲಕ ರಾಷ್ಟ್ರಕ್ಕೆ ಐತಿಹಾಸಿಕ ದೀಪಾವಳಿ ಉಡುಗೊರೆ ನೀಡಿದ್ದಾರೆ ಎಂದು ಕೇಂದ್ರದ ಬೃಹತ್ ಕೈಗಾರಿಕೆ, ಉಕ್ಕು ಖಾತೆ ಸಚಿವ ಹೆಚ್.ಡಿ.ಕುಮಾರಸ್ವಾಮಿ ಪ್ರಶಂಸಿಸಿದ್ದಾರೆ. ಈ ಸಂಬಂಧ ತಮ ಎಕ್ಸ ಖಾತೆಯಲ್ಲಿ ಪೋಸ್ಟ್ ಮಾಡಿರುವ ಅವರು, ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ನಡೆದ ಸಚಿವ ಸಂಪುಟ ಸಭೆಯು ಮುಂದಿನ ಪೀಳಿಗೆಯ ಸುಧಾರಣೆಯನ್ನು ಅನುಮೋದಿಸಿದೆ. ಇದು ಜನಜೀವನ ಸುಲಭಗೊಳಿಸುವುದು ಮತ್ತು ಆತ್ಮನಿರ್ಭರ ಭಾರತ್ ಅನ್ನು ಬಲಪಡಿಸುವ ಒಂದು ಪರಿವರ್ತನಾತಕ ಹೆಜ್ಜೆಯಾಗಿದೆ ಎಂದು ಬಣ್ಣಿಸಿದ್ದಾರೆ. ಹೊಸ ಸುಧಾರಣೆಯೊಂದಿಗೆ ಜಿಎಸ್‌ಟಿ ಈಗ ಕೇವಲ 2 ಸ್ಲ್ಯಾಬ್‌ಗಳನ್ನು ಹೊಂದಿದ್ದು, ಅದು ಶೇ. 5 ಮತ್ತು ಶೇ.18 ರಷ್ಟಾಗಿರುತ್ತದೆ. ದೈನಂದಿನ ಜೀವನದ ಅಗತ್ಯ ವಸ್ತುಗಳು, ಆರೋಗ್ಯ ರಕ್ಷಣೆ, ಶಿಕ್ಷಣ, ಕೃಷಿ ಮತ್ತು ವಾಹನಗಳು ಸಹ ಸುಲಭವಾಗಿ ಕೈಗೆಟುಕುವಂತಾಗುತ್ತವೆ. ಜತೆಗೆ, ಉದ್ಯಮಗಳು, ಎಂಎಸ್‌ಎಂಇಗಳು ಭಾರೀ ಉತ್ತೇಜನವನ್ನು ಪಡೆಯುತ್ತವೆ ಎಂದು ಅವರು ಹೇಳಿದ್ದಾರೆ.

## ಸಮೀರ್ ನಿವಾಸದ ಮೇಲೆ ಬೆಳ್ತಂಗಡಿ ಪೊಲೀಸರ ದಾಳಿ

• ಉದಯವಾಹಿನಿ, ಬೆಂಗಳೂರು

ಯೂ ಟ್ಯೂಬರ್ ಸಮೀರ್ ವಾಸವಾಗಿದ್ದ ಬನ್ನೇರುಘಟ್ಟದ ಹುಲ್ಲಹಳ್ಳಿಯ ಬಾಡಿಗೆ ಮನೆ ಮೇಲೆ ಬೆಳ್ತಂಗಡಿ ಪೊಲೀಸರು ಇಂದು ಮಧ್ಯಾಹ್ನ ದಾಳಿ ಮಾಡಿದ್ದಾರೆ. ಯೂ ಟ್ಯೂಬರ್ ಎಂಡಿ ಸಮೀರ್ ಬೆಳ್ತಂಗಡಿ ಪೊಲೀಸರಿಗೆ ಸರಿಯಾಗಿ ತನಿಖೆಗೆ ಸಹಕರಿಸದ ಹಿನ್ನೆಲೆಯಲ್ಲಿ ನ್ಯಾಯಾಲಯದಿಂದ ಸರ್ಚ್ ವಾರೆಂಟ್ ಪಡೆದು ಇನ್ಸ್‌ಪೆಕ್ಟರ್ ನಾಗೇಶ್ ಖದ್ರಿ ಮತ್ತು ಅವರ ತಂಡ ಎಫ್‌ಎಸ್ ಎಲ್ ವಿಭಾಗದ ಸೋಕೋ ಸಿಬ್ಬಂದಿ ಜತೆ ಇಂದು ಮಧ್ಯಾಹ್ನ 1.30ರ ಸುಮಾರಿನಲ್ಲಿ ನಗರಕ್ಕೆ ಆಗಮಿಸಿ ಆತನ ಮನೆಯನ್ನು ಮಹಜರು ನಡೆಸಿದೆ. ಪ್ರಕರಣದ ವಿಡಿಯೋ ಮಾಡಲು ಬಳಸಿದ ಕಂಪ್ಯೂಟರ್ ಮತ್ತು ಮೊಬೈಲ್‌ಅನ್ನು ಈಗಾಗಲೇ ಪೊಲೀಸರು ವಶಕ್ಕೆ ಪಡೆದಿದ್ದಾರೆ. ಬೆಳ್ತಂಗಡಿ ಪೊಲೀಸರು ಈಗಾಗಲೇ ಆತನನ್ನು ಎರಡು ಬಾರಿ ವಿಚಾರಣೆಗೊಳಪಡಿಸಿ ಮಾಹಿತಿ ಪಡೆದುಕೊಂಡಿದ್ದಾರೆ.

## ಧರ್ಮಸ್ಥಳಕ್ಕೆ ಭೇಟಿಕೊಟ್ಟ ವಿಜಯೇಂದ್ರ ವಿರುದ್ಧ ಯತ್ನಾಳ್ ಕಿಡಿ



• ಉದಯವಾಹಿನಿ, ಬೆಂಗಳೂರು

ಧರ್ಮಸ್ಥಳ ಗ್ರಾಮದಲ್ಲಿ ಅನಾಥ ಶವ ಹೂಳಲಾಗಿದೆ ಎಂದು ಅಪಪ್ರಚಾರ ಮಾಡಿ, ಕ್ಷೇತ್ರದ ವಿರುದ್ಧ ಅಪಪ್ರಚಾರ ಮಾಡುತ್ತಿರುವ ವಿರುದ್ಧ ಬಿಜೆಪಿ ಧರ್ಮಸ್ಥಳ ಚಲೋ ಯಾತ್ರೆ ಮಾಡಿತ್ತು. ಧರ್ಮಸ್ಥಳಕ್ಕೆ ಭೇಟಿ ಮಾಡಿ ವೀರೇಂದ್ರ ಹೆಗಡೆ ಅವರನ್ನು ಭೇಟಿ ಮಾಡಿದ್ದರು ಈ ಬಗ್ಗೆ ಶಾಸಕ ಯತ್ನಾಳ್ ಬೆಂಗಳೂರಿನಲ್ಲಿ ಮಾತನಾಡಿದ್ದಾರೆ.

ಧರ್ಮಸ್ಥ ಪ್ರಕರಣದ ಬಗ್ಗೆ ಕರ್ನಾಟಕದ ಸ್ವಾಮೀಜಿಗಳ ನಿಯೋಗ ದೆಹಲಿಯಲ್ಲಿ ಕೇಂದ್ರ ಗೃಹ ಸಚಿವ ಭೇಟಿಯಾಗಿ ಧರ್ಮಸ್ಥಳ ಗ್ರಾಮ ಮತ್ತು ಕ್ಷೇತ್ರ, ಶವ ಹೂತಿರುವ ವಿಚಾರವಾಗಿ ಕೇಂದ್ರ ಗೃಹ ಸಚಿವ ಅಮಿತ್ ಶಾ ಭೇಟಿ ಮಾಡಿ ವಿಚಾರ ಮುಟ್ಟಿಸಿರುವ ಬಗ್ಗೆ ಯತ್ನಾಳ್ ಮಾತನಾಡಿ, ಭೇಟಿ ಮಾಡಿದ ಸ್ವಾಮಿಗಳು ಯಾರ್ಯಾರು ಇದ್ದಾರೆ? ಜೈನ ಧರ್ಮದವರು ಇದ್ದರೆ ಸರಿ.

**ಸಾಮೀಜಿ ಭೇಟಿ ಬಿವೈವಿ ಕೈವಾಡ:** ವಚನಾನಂದ ಸ್ವಾಮೀಜಿ ತನ್ನ ಜಾತಿಗೇ ಏನೂ ಮಾಡಲಾರದವ ಇನ್ನು ಧರ್ಮಸ್ಥಳದ ಬಗ್ಗೆ ಏನು ಮಾತಾಡುವುದು?. ಸುಮ್ಮನೆ ಇದು ನಾಟಕ. ಸ್ವತಃ ಪಂಚಮಸಾಲಿ ಸಮುದಾಯವೇ ದಿವಾಳಿ ಆಗಿ ಹೋಗಿದೆ. ಈಗ ಹಿಂದೂ ಸಮಾಜ, ಸನಾತನ ಧರ್ಮ ಅಂತಾ ಹೊಸ ನಾಟಕ ಎಬ್ಬಿಸಿದ್ದಾರೆ. ವಚನಾನಂದರನ್ನ ದೆಹಲಿಗೆ ತೆಗೆದುಕೊಂಡು ಹೋಗಿದ್ದಾರೆ ಅಂದರೆ ಇದು ಸುಮ್ಮನೆ ವಿಜಯೇಂದ್ರನ ಕಂಪನಿ ಅಂತಾ ಅನ್ನಿಸುತ್ತದೆ ಎಂದು ವಿಧಾನಸೌಧದಲ್ಲಿ ವಿಜಯಪುರ ನಗರ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಹೇಳಿದರು.

### ಸೌಜನ್ಯ ಕೇಸ್‌ಗೆ ನ್ಯಾಯ ಯಾವಾಗ?

- ಸೌಜನ್ಯ ಪ್ರಕರಣದಲ್ಲಿ ಹೈಕೋರ್ಟ್‌ವರೆಗೆ ಆಗಿರುವ ಆದೇಶಗಳು ಎಲ್ಲವೂ ಚಿಂತನೆ ಆದ ಮೇಲೆ ಎನ್‌ಐಎ ಗಾದರೂ ಕೊಡಲಿ
- ರಾಜ್ಯ ಸರ್ಕಾರವೇ ಎನ್ ಐಎಗೆ ಕೊಡಬಹುದಲ್ಲ?. ರಾಜ್ಯ ಸರ್ಕಾರವೇ ಸಿಬಿಐ, ಎನ್‌ಐಎ ಏನಾದರೂ ಕೊಡಲಿ
- ವಿಜಯೇಂದ್ರ ಸುಪ್ರೀಂ ಕೋರ್ಟ್ ಖರ್ಚು ನೋಡಿ ಕೊಳ್ಳುವ ಅವಶ್ಯಕತೆ ಇಲ್ಲ. ಅವರಿಗೆ ಸೌಜನ್ಯ ಪ್ರಕರಣದ ಮೂಲಕ ಯಾರನ್ನೋ ಟಾರ್ಗೆಟ್ ಮಾಡಬೇಕಿದೆ. ನಾವೇನೂ ಸೌಜನ್ಯ ಪ್ರಕರಣದಲ್ಲಿ ಯಾರನ್ನೂ ಉಳಿಸಬೇಕು ಅಂತಾ ಇಲ್ಲ


## ವಿಜಯಣ್ಣನಿಗೆ ಯತ್ನಾಳ್ ಓಪನ್ ಚಾಲೆಂಜ್!

**ಧರ್ಮಸ್ಥಳದಲ್ಲಿ ವಿಜಯೇಂದ್ರಗೇನು ಕೆಲಸ?**

**ಮಂಜುನಾಥನ ಬಳಿ ಭ್ರಷ್ಟಾಚಾರ ಮಾಡಲ್ಲ ಅಂತ ಪ್ರತಿಜ್ಞೆ ಮಾಡ್ಲಿ**

**ದೆಹಲಿಗೆ ಸ್ವಾಮೀಜಿಗಳು ಭೇಟಿ ನೀಡಿರುವ ಹಿಂದೆ ವಿಜಯೇಂದ್ರ ಕೈವಾಡ**

**ವಂಶಪಾರಂಪರ್ಯ ಆಡಳಿತ ಮಾಡೋಲ್ಲ ಎಂದು ಪ್ರತಿಜ್ಞೆ ಮಾಡಲಿ**



**ಭ್ರಷ್ಟನಾಗಲ್ಲ ಅಂತ ಪ್ರತಿಜ್ಞೆ ಮಾಡಲಿ**

ಹೇಗಿದ್ದರು ವಿಜಯೇಂದ್ರ, ಧರ್ಮಸ್ಥಳಕ್ಕೆ ಹೋಗಿದ್ದಾರೆ, ಸೌಜನ್ಯರ ಮನೆಗೆ ಭೇಟಿ ನೀಡಿದ್ದಾರೆ. ಮಂಜುನಾಥ ಸ್ವಾಮಿ ಬಳಿ ಬೇಡಿಕೊಳ್ಳಲಿ ಇನ್ಮುಂದೆ ನಾವು ಭ್ರಷ್ಟಾಚಾರ ಮಾಡಲ್ಲ, ಒಂದೇ ವಂಶದವರು ಆಡಳಿತ ಮಾಡಲ್ಲ ಅಂತಾ ಮಂಜುನಾಥ ಸ್ವಾಮಿ ಬಳಿ ಪ್ರತಿಜ್ಞೆ ಮಾಡಬೇಕಿತ್ತು. ನಮ್ಮಪ್ಪ ನಾಲ್ಕು ಸಲ ಸಿಎಂ ಆಗಿದ್ದಾನೆ, ನನಗೂ ರಾಜ್ಯಾಧ್ಯಕ್ಷ ಸ್ಥಾನ ಕೊಟ್ಟಿದ್ದಾರೆ, ಬೇಡಪ್ಪಾ ಸಾಕು. ಮಂಜುನಾಥೇಶ್ವರ ಬಿಜೆಪಿಯ ಸಾಮಾನ್ಯ ಕಾರ್ಯಕರ್ತನಿಗೆ ಸಿಎಂ ಆಗುವ ಅವಕಾಶ ಕೊಡು ನಮ್ಮ ನಾಲ್ಕು ತಲೆ ತಿನ್ನುವಷ್ಟು ನಾವು ಮಾಡಿಕೊಂಡಿದ್ದೇವೆ ನಿನ್ನ ಆಶೀರ್ವಾದದಿಂದ ಅಂತಾ ಮುಗಿಸಬೇಕಿತ್ತು. ಅದು ಬಿಟ್ಟು ಎರಡನೇ ಹಂತದ ಲೂಟಿ ಪ್ರಾರಂಭ ಮಾಡಿದ್ದಾರೆ ಎಂದು ಲೇವಡಿ ಮಾಡಿದರು.

### ಎಲ್ಲಾ ಬ್ರದರ್ಸ್ ಕೇಸ್ ತನಿಖೆಯಾಗಲಿ





ಮಂಗಳೂರು ಕುಕ್ಕರ್ ಬಾಂಬ್ ಪ್ರಕರಣದಲ್ಲಿ ಡಿ.ಕೆ. ಶಿವಕುಮಾರ್ ನಮ್ಮ ಬ್ರದರ್ಸ್ ಎಂದಿದ್ದರು. ಇದನ್ನೆಲ್ಲಾ ಒಂದು ಸಲ ತನಿಖೆ ಮಾಡಿ ಮುಗಿಸಿಬಿಡಿ.

ಆ ಬ್ರದರ್‌ನದ್ದು ಏನು, ಈ ಬ್ರದರ್‌ದು ಏನು ಎಲ್ಲವೂ ಗೊತ್ತಾಗುತ್ತದೆ ಕಾಂಗ್ರೆಸ್ ನಾಯಕರಿಂದ ಧರ್ಮಸ್ಥಳ ಚಲೋ ವಿಚಾರ ಕಾಂಗ್ರೆಸ್‌ನವರು ಹಿಂದೂ ಧರ್ಮ, ಮಂಜುನಾಥನ ನಂಬುತ್ತಿದ್ದಾರೆ ಅಂದರೆ ಒಳ್ಳೆಯದೇ. ಅವರು ಮಸೀದಿ, ದರ್ಗಾಕ್ಕೆ. ಹೋಗಿ ಅಲ್ಲೇ ನಮಾಜ್ ಮಾಡುತ್ತಿದ್ದರು. ಇದೇ ರೀತಿ ಸಿದ್ದರಾಮಯ್ಯ, ಡಿ.ಕೆ. ಶಿವಕುಮಾರ್, ಸೋನಿಯಾ ಗಾಂಧಿ, ರಾಹುಲ್ ಗಾಂಧಿಗೂ ಬುದ್ಧಿ ಬರಲಿ. ಸನಾತನ ಧರ್ಮ ಜಾಗೃತ ಆದರೆ ಶರ್ಟ್ ಮೇಲೆ ಜನಿವಾರ ಹಾಕಿಕೊಳ್ಳುತ್ತಾರೆ ಅಂತಾ ಸಾವರ್ಕರ್ ಹೇಳಿದ್ದರು ಹಾಗೆ ದೇಶದಲ್ಲಿ ಕಾಲ ಬದಲಾಗಲು ಆರಂಭವಾಗಿದೆ. ಸಾವರ್ಕರ್ ಮಾತು ಇವತ್ತು ಸತ್ಯ ಆಗಲಾರಂಭಿಸಿದೆ. ಸಿದ್ದರಾಮಯ್ಯ ಸೇರಿ ಕಾಂಗ್ರೆಸ್ ನಾಯಕರು ಮಾಂಸಾಹಾರ ಸೇವಿಸದೇ ಧರ್ಮಸ್ಥಳಕ್ಕೆ ಹೋಗಿ ದರ್ಶನ ಪಡೆಯಲಿ.


ಯಾರೇ ಆದರೂ ಶಿಕ್ಷೆ ಆಗಲೇಬೇಕು ಯಾವುದೇ ತನಿಖೆಗೂ ನಮ್ಮದು ಯಾವುದೇ ತಕರಾರು ಇಲ್ಲ ಎಂದು ಯತ್ನಾಳ್ ಹೇಳಿದರು. 12-13 ವರ್ಷದಿಂದ ಸೌಜನ್ಯ ಪ್ರಕರಣಕ್ಕೆ ನ್ಯಾಯ ಕೇಳುತ್ತಿದ್ದೇವೆ, ಅದಕ್ಕೊಂದು ಅಂತ್ಯ ಬೇಕಲ್ವಾ? ಎನ್‌ಐಎ, ಎಫ್ ಬಿಐ, ಕೊಡುವುದು ಕೊಟ್ಟುಬಿಡಿ. ಧರ್ಮಸ್ಥಳದ ವಿಷಯವೇ ಮುಗಿದು ಹೋಗಿರುವಾಗ ಅಲ್ಲಿ ಹೋಗಿ ಬಿಜೆಪಿ ಏನು ಮಾಡುವುದು? ಅಲ್ಲಿ ಏನೂ ಸಿಕ್ಕಿಲ್ಲ, ಸಿಕ್ಕಿಲ್ಲ ಅಂದರೆ ಎಸ್‌ಐಟಿ ಏನು ವರದಿ ಕೊಡುತ್ತದೋ ಕೊಡಲಿ. ಸುಮ್ಮನೆ ಕಾಟಾಚಾರಕ್ಕೆ ನಾವು ಧರ್ಮಸ್ಥಳದ ಭಕ್ತರು ಅಂತಾ ತೋರಿಸಲು ಹೋದ ಯಾಕೆ? ಎಂದು ವಿಜಯೇಂದ್ರ ವಿರುದ್ಧ ಕಿಡಿಕಾರಿದರು.

## ಪಿಎಂಎಫ್‌ಎಂಇ ಯೋಜನೆಯಲ್ಲಿ ಕರ್ನಾಟಕದ ಅಭೂತಪೂರ್ವ ಪ್ರಗತಿ

• ಉದಯವಾಹಿನಿ, ಬೆಂಗಳೂರು

ಪ್ರಧಾನ ಮಂತ್ರಿಗಳ ಕಿರು ಆಹಾರ ಸಂಸ್ಕರಣಾ ಉದ್ದಿಮೆಗಳ ನಿಯಮ ಬದ್ಧಗೊಳಿಸುವಿಕೆ (ಪಿಎಂಎಫ್‌ಎಂಇ) ಯೋಜನೆಯು ಕರ್ನಾಟಕದ ಗ್ರಾಮೀಣ ಆರ್ಥಿಕತೆಯನ್ನು ಬಲಪಡಿಸುವಲ್ಲಿ ಮಹತ್ವದ ಪಾತ್ರ ವಹಿಸುತ್ತಿದೆ. ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಸಹಭಾಗಿತ್ವದ ಈ ಯೋಜನೆಯಡಿ, ರಾಜ್ಯ ಸರ್ಕಾರವು ಹೆಚ್ಚುವರಿ ಶೇ.15ರಷ್ಟು ಸಹಾಯಧನ ನೀಡುತ್ತಿದ್ದು, ಕಿರು ಉದ್ದಿಮೆದಾರರಿಗೆ ಶೇ.50ರಷ್ಟು ಅಥವಾ ಗರಿಷ್ಠ ರೂ.15 ಲಕ್ಷ ಸಾಲ ಸಂಪರ್ಕಿತ ಸಹಾಯಧನ ಲಭ್ಯವಾಗುತ್ತಿದೆ. ಇದರಲ್ಲಿ ಕೇಂದ್ರದ ರೂ.6 ಲಕ್ಷ ಹಾಗೂ ರಾಜ್ಯದ ರೂ.9 ಲಕ್ಷ ಸಹಾಯಧನ ಸೇರಿದೆ.

ಈ ಯೋಜನೆಯ ಯಶಸ್ಸಿಗೆ ಕಾರಣರಾದ ಕರ್ನಾಟಕದ ಕೃಷಿ ಸಚಿವ ಎನ್. ಚಲುವರಾಯಸ್ವಾಮಿ ಅವರ ನಾಯಕತ್ವ ಹಾಗೂ ಕರ್ನಾಟಕ ರಾಜ್ಯ ಕೃಷಿ ಉತ್ಪನ್ನಗಳ ಸಂಸ್ಕರಣೆ ಹಾಗೂ ರಫ್ತು ನಿಗಮ ನಿಯಮಿತ (ಕೆಪೆಕ್) ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕ ಸಿ.ಎನ್. ಶಿವಪ್ರಕಾಶ್ ಅವರ ಅವಿರತ ಶ್ರಮವನ್ನು ಉದ್ಯಮಿಗಳು ಮತ್ತು ರೈತರು ವ್ಯಾಪಕವಾಗಿ ಮೆಚ್ಚಿದ್ದಾರೆ..



**ವಾರ್ಷಿಕ ಸಾಲ ಮಂಜೂರಾತಿಯ ಪ್ರಗತಿ:** ಪಿಎಂಎಫ್ ಎಂಇ ಯೋಜನೆಯಡಿ ಕಳೆದ ಐದು ಸಾಲುಗಳಲ್ಲಿ ಸಹಾಯ ಧನದಡಿಯಲ್ಲಿ ಸಾಲ ಮಂಜೂರಾತಿಯಲ್ಲಿ ಗಣನೀಯ ಏರಿಕೆಯಾಗಿದೆ. 2021-22 ಸಾಲಿನಲ್ಲಿ ಒಟ್ಟು 259 ಸಾಲಗಳು ಮಂಜೂರಾಗಿದ್ದವು, ಇದು 2022-23ರಲ್ಲಿ 1813ಗೆ, 2023-24ರಲ್ಲಿ 1,997ಗೆ, 2024-25ರಲ್ಲಿ 2321ಗೆ ಮತ್ತು 2025-26ರ ಮೊದಲ ತ್ರೈಮಾಸಿಕದಲ್ಲಿ 314 ಹಾಗೂ 2ನೆ ತ್ರೈಮಾಸಿಕದ ಆಗಸ್ಟ್ ಅಂತ್ಯದವರೆಗೆ 390 ಸಾಲಗಳು ಮಂಜೂರಾಗಿವೆ.

ಇದು ಗ್ರಾಮೀಣ ಯುವಕ-ಯುವತಿಯರಿಗೆ ಉದ್ಯೋಗಾವಕಾಶಗಳನ್ನು ಸೃಷ್ಟಿಸಿ, ವಲಸೆಯನ್ನು ತಡೆಗಟ್ಟಿ, ರೈತರ ಉತ್ಪನ್ನಗಳಿಗೆ ಮೌಲ್ಯವರ್ಧನೆ ಮಾಡುವಲ್ಲಿ ನಿರ್ಣಾಯಕ ಪಾತ್ರ ವಹಿಸಿದೆ..

ಮಾನ್ಯ ಮುಖ್ಯಮಂತ್ರಿಗಳು 2025-26ನೇ ಸಾಲಿನ ಆಯವ್ಯಯ ಭಾಷಣದಲ್ಲಿ ರಾಜ್ಯದಲ್ಲಿ ಹೆಚ್ಚುವರಿ 5000 ಕಿರು ಆಹಾರ ಸಂಸ್ಕರಣಾ ಉದ್ದಿಮೆಗಳನ್ನು ಸ್ಥಾಪಿಸುವ ಗುರಿ ಘೋಷಿಸಿದ್ದು, ಇದಕ್ಕಾಗಿ ರೂ.206 ಕೋಟಿ ಅನುದಾನ ಒದಗಿಸಿದ್ದಾರೆ. ಈ ಗುರಿ ಸಾಧನೆಯತ್ತ ರಾಜ್ಯವು ಭರದಿಂದ ಸಾಗುತ್ತಿದ್ದು, ಕೃಷಿ ಸಚಿವ ಚೆಲುವರಾಯಸ್ವಾಮಿ ಅವರ ಮಾರ್ಗದರ್ಶನದಲ್ಲಿ ಕೆಪೆಕ್ ಸಂಸ್ಥೆಯು ಯೋಜನೆಯನ್ನು ಸಮರ್ಥವಾಗಿ ಅನುಷ್ಠಾನಗೊಳಿಸುತ್ತಿದೆ. ಕೆಪೆಕ್ ಸಂಸ್ಥೆಯು ಯೋಜನೆಯ ರಾಜ್ಯ ನೋಡಲ್ ಏಜೆನ್ಸಿಯಾಗಿ ಕಾರ್ಯನಿರ್ವಹಿಸುತ್ತಿದ್ದು, ವ್ಯವಸ್ಥಾಪಕ ನಿರ್ದೇಶಕ ಸಿ.ಎನ್. ಶಿವಪ್ರಕಾಶ್ ಅವರ ನೇತೃತ್ವದಲ್ಲಿ ಅನೇಕ ನವೀನ ಕ್ರಮಗಳನ್ನು ಕೈಗೊಂಡಿದೆ.

## ಕಾನೂನು ಚೌಕಟ್ಟಿನಲ್ಲಿ ರೈತರಿಗೆ ನೆರವಾಗಲು ಪ್ರಾಮಾಣಿಕ ಪ್ರಯತ್ನ

■ ಕುಮಾರಸ್ವಾಮಿ ಧರ್ಮಪತ್ನಿ, ಮಗ ಕೂಡ ಪರಿಹಾರಕ್ಕೆ ಅರ್ಜಿ ■ ರಾಮನಗರದಲ್ಲಿ ಪ್ರತಿಭಟನೆ ನಿರತ ರೈತರ ಜತೆ ಡಿಸಿಎಂ ಮಾತುಕತೆ

• ಉದಯವಾಹಿನಿ, ಬೆಂಗಳೂರು

ಬಿಡದಿ ಟೌನ್ ಶಿಪ್ ನಿರ್ಮಾಣಕ್ಕೆ ತೀರ್ಮಾನ ಮಾಡಿದ್ದು ಕುಮಾರಸ್ವಾಮಿ ಅವರು. ಸದ್ಯ ಅವರ ಧರ್ಮಪತ್ನಿಯವರುಹಾಗೂ ಮಗ ಸೇರಿದಂತೆ ಶೇಕಡಾ 70 ರಷ್ಟು ಮಂದಿ ಪರಿಹಾರ ನೀಡಿ ಎಂದು ಭೂಸ್ವಾಧೀನಕ್ಕೆ ಒಪ್ಪಿಗೆ ಸೂಚಿಸಿದ್ದಾರೆ ಎಂದು ಡಿಕೆ ಶಿವಕುಮಾರ್ ಮಾಹಿತಿ ನೀಡಿದ್ದಾರೆ.

ಭೂಸ್ವಾಧೀನ ವಿರೋಧಿಸಿ ರಾಮನಗರದ ಜಿಲ್ಲಾಧಿಕಾರಿ ಕಚೇರಿ ಪ್ರತಿಭಟನಾ ನಿರತ ರೈತರನ್ನು ಉದ್ದೇಶಿಸಿ ಗುರುವಾರ ಮಾತನಾಡಿದರು.

**ಬಿಡದಿ ಟೌನ್‌ಶಿಪ್ ನಿರ್ಮಾಣ**



ಕುಮಾರಸ್ವಾಮಿ ಅವರ ಧರ್ಮಪತ್ನಿಯವರು ಹಾಗೂ ಮಗ ಸೇರಿದಂತೆ ಶೇಕಡಾ 70 ರಷ್ಟು ಮಂದಿ ಪರಿಹಾರ ನೀಡಿ ಎಂದು ಭೂಸ್ವಾಧೀನಕ್ಕೆ ಒಪ್ಪಿಗೆ ಸೂಚಿಸಿದ್ದಾರೆ. ಶೇ.30 ರಷ್ಟು ಮಂದಿ ಮಾತ್ರ ಒಪ್ಪಿಗೆ ನೀಡಿಲ್ಲ. ಆದರೆ ನಾನು ನಿಮ್ಮ ಪರವಾಗಿ ಏನು ತೀರ್ಮಾನ ತೆಗೆದುಕೊಳ್ಳಬೇಕು. ಯಾವ ರೀತಿ ಸಹಾಯ ಮಾಡಬೇಕು ಎಂದು ಚರ್ಚೆ ನಡೆಸುತ್ತೇನೆ ಎಂದು ತಿಳಿಸಿದರು.

ನಾನು ಕೇವಲ ಬಿಡದಿ ಪ್ರದೇಶಕ್ಕೆ ಮಾತ್ರ ವಿಶೇಷವಾಗಿ ತೀರ್ಮಾನ ತೆಗೆದುಕೊಳ್ಳಲು ಕಾನೂನಿನಲ್ಲಿ ಸಾಧ್ಯವಿಲ್ಲ. ತೀರ್ಮಾನ ತೆಗೆದುಕೊಂಡರೆ ಇಡೀ ರಾಜ್ಯದ ಎಲ್ಲಾ ಭೂ ಸ್ವಾಧೀನಗಳ ಮೇಲೆ ಪರಿಣಾಮ ಬೀರಲಿದೆ. ಈ ಪ್ರದೇಶವನ್ನು ಕೈ ಬಿಡಬೇಕು ಎನ್ನುವ ಒತ್ತಡ ಕೂಡ ಇತ್ತು. ಆದರೆ ಕಾನೂನಿನ ಚೌಕಟ್ಟಿನಲ್ಲಿ ಡಿನೋಟಿಫಿಕೇಷನ್ ಮಾಡಲು ಆಗುವುದಿಲ್ಲ ಎನ್ನುವ ಅಭಿಪ್ರಾಯಗಳು ಬಂದಿವೆ ಎಂದರು. ಬಿಡದಿಯ ರೈತರಿಗೆ ಸಹಾಯ ಮಾಡಬೇಕು ಎಂದು ಮಾಜಿ ಸಂಸದರಾದ ಡಿ.ಕೆ. ಸುರೇಶ್ ಅವರು, ಶಾಸಕರಾದ ಬಾಲಕೃಷ್ಣ ಅವರು ಹಲವಾರು ಸಭೆಗಳನ್ನು ನಡೆಸಿದ್ದಾರೆ. ನಿಮ್ಮ ಪರವಾಗಿ ಅವರಿಗೂ ಜವಾಬ್ದಾರಿಯಿದೆ ಎಂದರು.

**ನಾನು ಯಡಿಯೂರಪ್ಪನವರಂತೆ ಜೈಲಿಗೆ ಹೋಗಲ್ಲ:** ನಾನು ಡಿನೋಟಿಫಿಕೇಷನ್ ಮಾಡಿ ಯಡಿಯೂರಪ್ಪ ಅವರಂತೆ ಜೈಲಿಗೆ ಹೋಗಲು ತಯಾರಿಲ್ಲ. ಕಾನೂನು ಚೌಕಟ್ಟಿನಲ್ಲಿ ರೈತರಿಗೆ ನೆರವಾಗಲು ಪ್ರಾಮಾಣಿಕವಾಗಿ ಪ್ರಯತ್ನಿಸುತ್ತೇನೆ.

ನಾನು ಹೊರಗಡೆಯಿಂದ ಬಂದವನಲ್ಲ. ನಾನು ಕೂಡ ನಿಮ್ಮ ಜಿಲ್ಲೆಯವನೇ. ಬಿಡದಿ ಕೈಗಾರಿಕಾ ಪ್ರದೇಶ ಮಾಡಿದಾಗ ಯಾವ ಸರ್ಕಾರ ಅಧಿಕಾರದಲ್ಲಿತ್ತು ಎಂಬುದು ರೈತರಿಗೆ ತಿಳಿದಿದೆ. ಇದರಿಂದ 16 ಸಾವಿರ ಎಕರೆ ಭೂಮಿ ಹೋಯಿತು.

### ಪೆರಿಫೆರಲ್ ರಿಂಗ್ ರಸ್ತೆಗೆ 27 ಸಾವಿರ ಕೋಟಿ

ಬಿಡದಿಯ ಭೂಸ್ವಾಧೀನದ ಬಗ್ಗೆ ಮಾತ್ರ ನಾವು ಯೋಚನೆ ಮಾಡುತ್ತಿಲ್ಲ. ಕೃಷ್ಣಾ ಮೇಲ್ದಂಡೆ ಯೋಜನೆ, ಮೇಕೆದಾಟು ಯೋಜನೆಯ ಭೂಸ್ವಾಧೀನದ ಬಗ್ಗೆಯೂ ನಾವು ಆಲೋಚನೆ ಮಾಡುತ್ತಿದ್ದೇವೆ. ಭೂಸ್ವಾಧೀನಕ್ಕೆ ಅಧಿಸೂಚನೆ ಹೊರಡಿಸಿದ ದಿನಾಂಕದ ಅನ್ವಯದಂತೆ ಪರಿಹಾರ ನೀಡಬೇಕು ಎಂದು ಸುಪ್ರೀಂಕೋರ್ಟ್ ಆದೇಶ ನೀಡಿದೆ. ಆದರೆ ಇತ್ತೀಚೆಗೆ ನೈಸ್ ರಸ್ತೆಯ ಉತ್ತರ ಭಾಗದಲ್ಲಿ ಹೋಗಿರುವ ಪೆರಿಫೆರಲ್ ರಿಂಗ್ ರಸ್ತೆಗೆ ಭೂಮಿ ನೀಡಿರುವವರಿಗೆ ನ್ಯಾಯಾಲಯದ ಆದೇಶವನ್ನೂ ಮೀರಿ ಪರಿಹಾರ ನಿಗದಿ ಮಾಡಲಾಗಿದೆ. ವಾಣಿಜ್ಯ ಉದ್ದೇಶಕ್ಕೆ ಇಂತಿಷ್ಟು, ವಾಸಸ್ಥಾನಗಳಿಗೆ ಪ್ರತ್ಯೇಕ ದರ ನಿಗದಿ ಮಾಡಿ ಸುಮಾರು 27 ಸಾವಿರ ಕೋಟಿ ಹಣವನ್ನು ಸಾಲ ತೆಗೆದುಕೊಂಡು ಯೋಜನೆ ಕಾರ್ಯಗತಗೊಳಿಸಲಾಗಿದೆ. ಈಗಾಗಲೇ ಸಂತ್ರಸ್ತರು ಪರಿಹಾರದ ಹಣ ಪಡೆದುಕೊಳ್ಳುತ್ತಿದ್ದಾರೆ ಎಂದು ವಿವರಿಸಿದರು. ಕುಮಾರಸ್ವಾಮಿ ಅವರು ಕೃಷ್ಣಾದಲ್ಲಿ ಸಭೆ ನಡೆಸಿ ಭೂಸ್ವಾಧೀನ ಕೈ ಬಿಡುವುದಾಗಿ ತಿಳಿಸಿದ್ದರು, ಅದರಂತೆ ನೀವು ಮಾಡಿ ಎಂದು ರೈತರು ಹೇಳಿದಾಗ, ಅವೆಲ್ಲ ಸುಳ್ಳು. ಯಾರೂ ಸಹ ಭೂಸ್ವಾಧೀನ ಕೈಬಿಡಲಿಲ್ಲ. ಈಗ ಅವರು ದೊಡ್ಡ ಸ್ಥಾನದಲ್ಲಿ ಇದ್ದಾರೆ. ಅವರಿಂದಲೇ ಭೂಸ್ವಾಧೀನವನ್ನು ಬಿಡಿಸಿಕೊಳ್ಳಿ ಎಂದರು. ಬಿಡಿಎಗೆ ಎಂದು ಭೂಸ್ವಾಧೀನ ಮಾಡಿಕೊಳ್ಳಲಾಯಿತು. ಈ ಪ್ರಕರಣ ಸುಪ್ರೀಂ ಕೋರ್ಟ್‌ಗೆ ಹೋಗಿದೆ. ಆ ನಂತರ ಯಾವುದೇ ಬೆಳವಣಿಗೆ ಆಗಿಲ್ಲ. ನಾನು ಹೊಸದಾಗಿ ಭೂಸ್ವಾಧೀನ ಮಾಡಿಕೊಳ್ಳುತ್ತಿಲ್ಲ. ನೈಸ್ ಯೋಜನೆಯ ಭೂಮಿಯನ್ನು ಏಕೆ ವಜಾ ಮಾಡಲು ಆಗಲಿಲ್ಲ.? ಏಕೆಂದರೆ ಕಾನೂನಿನ ಪ್ರಕಾರವೇ ನಾವು ಮುಂದುವರೆಯಬೇಕಾಗುತ್ತದೆ ಎಂದು ಸ್ಪಷ್ಟಪಡಿಸಿದರು.

ಟೊಯೋಟೊ ಸೇರಿದಂತೆ ಒಂದಷ್ಟು ಕಂಪನಿಗಳು ಈ ಭಾಗಕ್ಕೆ ಬಂದವು. ಈ ಹಿಂದೆ ಕೈಗಾರಿಕಾ ಪ್ರದೇಶವಾದಾಗ ನನ್ನದೂ ಸಹ 12 ಎಕರೆ ಜಮೀನು ಹೋಗಿದೆ. ಆಗ ಪರಿಹಾರವನ್ನು 8 ಲಕ್ಷಕ್ಕೆ ಮೀರಿ ನೀಡಿಯೇ ಇಲ್ಲ ಎಂದರು.

ನಿಮಗೆ ಉತ್ತಮ ಪರಿಹಾರ ನೀಡಲು ಸುಮಾರು 10 ಸಾವಿರ ಕೋಟಿ ರೂ. ಸಾಲ ಮಾಡುವ ಬಗ್ಗೆ ಚರ್ಚೆ ನಡೆಸಲಾಗಿದೆ. ನಿಮ್ಮ ಒಂದು ಎಕರೆ ಭೂಮಿಯನ್ನು ಸ್ವಾಧೀನ ಪಡಿಸಿಕೊಳ್ಳುವ ಅವಶ್ಯಕತೆ ನಮಗಿಲ್ಲ. ಸ್ವಾಧೀನವಾಗಿರುವ ಭೂಮಿಯನ್ನು ಕಾನೂನು ಚೌಕಟ್ಟು ಮೀರಿ ಕೈ ಬಿಡುವ ಹಂತದಲ್ಲಿ ನಾನಿಲ್ಲ ಎಂದರು.

**ಶಾಸಕ ಬಾಲಕೃಷ್ಣ ನಿಮ್ಮ ಪರವಾಗಿದ್ದಾರೆ:** ಈ ವೇಳೆ ಶಾಸಕ ಬಾಲಕೃಷ್ಣ ಅವರು ರೈತರ ಪರವಿಲ್ಲ ಎಂದು ಪ್ರತಿಭಟನಾ ನಿರತ ರೈತರು ಆಕ್ಷೇಪ ವ್ಯಕ್ತಪಡಿಸಿದಾಗ, ಬಾಲಕೃಷ್ಣ ಅವರು ನಿಮ್ಮ ಪರವಾಗಿ ಎಷ್ಟು ಹೋರಾಟ ಮಾಡಿದ್ದಾರೆ ಎಂಬುದು ನನಗೆ ತಿಳಿದಿದೆ. ನನ್ನ ಹಿಂದೆ ಬಿದ್ದು ರೈತರ ಪರವಾಗಿ ಮಾತನಾಡಿದ್ದಾರೆ. ನಿಮ್ಮ ಭೂಮಿಗಳನ್ನು ಸ್ವಾಧೀನ ಪಡಿಸಿಕೊಳ್ಳಲು ಹಿಂದೆ ಸಹಿ ಹಾಕಿದವರು ನಿಮ್ಮ ಪರವಾಗಿದ್ದಾರಾ? ಬಿಜೆಪಿ ಸರ್ಕಾರ ಅಧಿಕಾರದಲ್ಲಿದ್ದಾಗ ರೂ.1 ಕೋಟಿ ಪರಿಹಾರ ನಿಗದಿ ಮಾಡಿದವರು ನಿಮ್ಮ ಪರವಾಗಿದ್ದಾರಾ? ಅವರುಗಳು ಯಾರೂ ನಿಮ್ಮ ಪರವಾಗಿಲ್ಲ. ರೈತರಿಗೆ ಉತ್ತಮ ಪರಿಹಾರ ದೊರೆಯಬೇಕು ಎಂದು ಹೋರಾಟ ಮಾಡುತ್ತಿರುವ ಶಾಸಕ ಬಾಲಕೃಷ್ಣ ನಿಮ್ಮ ಪರವಾಗಿದ್ದಾರೆ. ನಿಮ್ಮ ಪರವಾಗಿ ಇವರಷ್ಟು ಹೋರಾಟವನ್ನು ಬೇರೆ ಯಾರೂ ಸಹ ಮಾಡಿಲ್ಲ ಎಂದರು.

**ಈ ದಿನದ ದರ** ಪೆಟ್ರೋಲ್: 103.50 ₹/L | ಡೀಸೆಲ್ : 90.03 ₹/L | ಬಂಗಾರ: ₹10,686/Gram24ct ₹9,796/Gram22ct | ಬೆಳ್ಳಿ: ₹127.00/Gram

## ಸ್ಥಳೀಯ ಸಂಸ್ಥೆಗಳ ಚುನಾವಣೆಗಳಲ್ಲಿ ಇವಿಎಂ ಬದಲು ಬ್ಯಾಲೆಟ್ ಪೇಪರ್ ಬಳಕೆ

• ಉದಯವಾಹಿನಿ ಬೆಂಗಳೂರು

ಮುಂದೆ ಬರುವ ಸ್ಥಳೀಯ ಸಂಸ್ಥೆಗಳ ಚುನಾವಣೆಗಳಲ್ಲಿ ಇವಿಎಂ ಬದಲು ಬ್ಯಾಲೆಟ್ ಪೇಪರ್ ಮೂಲಕ ಚುನಾವಣೆ ನಡೆಸಲು ರಾಜ್ಯ ಸರ್ಕಾರ ಮಹತ್ವದ ತೀರ್ಮಾನ ತೆಗೆದುಕೊಂಡಿದೆ. ಸಿದ್ದರಾಮಯ್ಯ ನೇತೃತ್ವದಲ್ಲಿ ನಡೆದ ಸಂಪುಟ ಸಭೆಯಲ್ಲಿ ರಾಜ್ಯ ಚುನಾವಣಾ ಆಯೋಗ ನಡೆಸುವ ಚುನಾವಣೆಗಳಲ್ಲಿ ಬ್ಯಾಲೆಟ್ ಪೇಪರ್ ಬಳಕೆ ಜಾರಿಗೆ ನಿಯಮಗಳನ್ನು ರೂಪಿಸಲು ಚುನಾವಣಾ ಆಯೋಗಕ್ಕೆ ಸೂಕ್ತ ಶಿಫಾರಸ್ಸು ಮಾಡಲು ತೀರ್ಮಾನ ಕೈಗೊಂಡಿದೆ. ಸಭೆಯ ಬಳಿಕ ಮಾತನಾಡಿದ ಹೆಚ್‌ಕೆ ಪಾಟೀಲ್, ರಾಜ್ಯ ಚುನಾವಣಾ ಆಯೋಗಕ್ಕೆ ಸ್ಥಳಿಯ ಸಂಸ್ಥೆಗಳ ಚುನಾವಣೆಗೆ ಮತದಾರರ ಪಟ್ಟಿಯನ್ನು ತಯಾರಿಸಲು ಪರಿಷ್ಕರಣೆ ಮಾಡಲು ಅಗತ್ಯ ಕಾನೂನು ಮಾಡಲು ನಿಯಮಾವಳಿ ರೂಪಿಸಲು ಸೂಚನೆ ನೀಡಲು ಸಂಪುಟದ ತೀರ್ಮಾನ ತೆಗೆದುಕೊಂಡಿದೆ ಎಂದು ಹೇಳಿದರು. ಈ ಪ್ರಕ್ರಿಯೆಯಲ್ಲಿ ಅಗತ್ಯ ಕಾನೂನು ಮತ್ತು ನಿಯಮಾವಳಿಗಳಿಗೂ ಕೆಲವು ತಿದ್ದುಪಡಿ ಮಾಡಬೇಕಾಗುತ್ತದೆ. ತಿದ್ದುಪಡಿ ಮಾಡಲು ಅಗತ್ಯ ಕಾನೂನು ಮಾಡಲು ಕ್ಯಾಬಿನೆಟ್ ಶಿಫಾರಸು ಮಾಡಿದೆ. ರಾಜ್ಯ ಚುನಾವಣಾ ಆಯೋಗ ರಾಜ್ಯ ಮಾಡಿದ ಕಾನೂನಿನಂತೆ ಕಾರ್ಯ ನಿರ್ವಹಿಸಲಿದೆ ಎಂದು ತಿಳಿಸಿದರು.

## ಜಯದೇವ ಹೃದ್ರೋಗ ಆಸ್ಪತ್ರೆಗೆ ಸಂದರ್ಶನದ ಮೂಲಕ ನಿರ್ದೇಶಕರ ಆಯ್ಕೆ

• ಉದಯವಾಹಿನಿ ಬೆಂಗಳೂರು

ಜಯದೇವ ಹೃದ್ರೋಗ ಆಸ್ಪತ್ರೆಗೆ ನಿರ್ದೇಶಕರ ಆಯ್ಕೆ ಸಂಬಂಧ 20 ವರ್ಷಗಳ ಬಳಿಕ ವೈದ್ಯರ ಸಂದರ್ಶನ ನಡೆಯಿತು. 11 ವೈದ್ಯರನ್ನ ಸಿಎಂ ಸಿದ್ದರಾಮಯ್ಯ ನೇತೃತ್ವದ ಸಮಿತಿ ಸಂದರ್ಶನ ನಡೆಸಿತು. ವಿಧಾನಸೌಧದ ಸಮಿತಿ ಕೊಠಡಿಯಲ್ಲಿ ಸಂದರ್ಶನ ನಡೆಯಿತು.

11 ಜನ ವೈದ್ಯರ ಪೈಕಿ 10 ಜನ ವೈದ್ಯರು ಸಂದರ್ಶನದಲ್ಲಿ ಭಾಗಿಯಾಗಿದ್ದರು. ಅಂತಿಮವಾಗಿ ಸಿಎಂ ನೇತೃತ್ವದ ಸಮಿತಿ ನಿರ್ದೇಶಕರ ಆಯ್ಕೆ ಮಾಡಿದೆ. ನಿರ್ದೇಶಕರ ನೇಮಕ ಸಂಬಂಧ ಕೋರ್ಟ್‌ನಲ್ಲಿ ಕೇಸ್ ಇರುವುದರಿಂದ ಆಯ್ಕೆಯನ್ನ ಸರ್ಕಾರ ಘೋಷಣೆ ಮಾಡಿಲ್ಲ. ಸೆಪ್ಟೆಂಬರ್ 10ಕ್ಕೆ ಮುಚ್ಚಿದ ಲಕೋಟೆಯಲ್ಲಿ ಸರ್ಕಾರ ಕೋರ್ಟ್‌ಗೆ ವರದಿ ಸಲ್ಲಿಕೆ ಮಾಡಲಿದೆ. ಹೈಕೋರ್ಟ್ ಸೂಚನೆ ಮೇರೆಗೆ ಸರ್ಕಾರ ನಿರ್ದೇಶಕರ ಆಯ್ಕೆ ಘೋಷಣೆ ಮಾಡಲಿದೆ. ಮೈಸೂರು ಜಯದೇವದ ಡಾ.ದಿನೇಶ್.ಬಿ ಆಯ್ಕೆ ಬಹುತೇಕ ಅಂತಿಮ ಎನ್ನಲಾಗುತ್ತಿದೆ.

## ಟ್ರಾಫಿಕ್ ಫೈನ್ ಡಿಸ್ಕೌಂಟ್‌ಗೆ ಭರ್ಜರಿ ರೆಸ್ಪಾನ್ಸ್: 35.72 ಕೋಟಿ ದಂಡ ಪಾವತಿ

• ಉದಯವಾಹಿನಿ ಬೆಂಗಳೂರು

ಟ್ರಾಫಿಕ್ ಫೈನ್ ಕಟ್ಟಲು 50% ರಿಯಾಯಿತಿ ನೀಡಿದ್ದಕ್ಕೆ ಭರ್ಜರಿ ರೆಸ್ಪಾನ್ಸ್ ಬರುತ್ತಿದ್ದು, ಈಗಾಗಲೇ 35.72 ಕೋಟಿ ರೂ. ದಂಡ ಪಾವತಿಯಾಗಿದೆ.

ಬೆಂಗಳೂರು ಸಂಚಾರಿ ಪೊಲೀಸರು ವಾಹನ ಸವಾರರಿಗೆ ಆ.23ರಿಂದ ದಂಡ ಪಾವತಿಸಲು ರಿಯಾಯಿತಿ ನೀಡಿತ್ತು. ಅದರ ಬೆನ್ನಲ್ಲೇ ಬಾಕಿಯಿದ್ದ 12,70,950 ಕೇಸ್‌ಗಳ ದಂಡ ಪಾವತಿಯಾಗಿದ್ದು.

ಈವರೆಗೂ 35.72 ಕೋಟಿ ರೂ. ಸಂಗ್ರಹವಾಗಿದೆ. ಇನ್ನೂ ಸೆ.12ರವರೆಗೆ ದಂಡ ಪಾವತಿ ಮಾಡಲು ಕಾಲಾವಕಾಶವಿದ್ದು, ಕೇವಲ ಬೆಂಗಳೂರು ವ್ಯಾಪ್ತಿಯಲ್ಲಿ ನಿಯಮ ಉಲ್ಲಂಘಿಸಿದವರಿಗೆ ಮಾತ್ರ ದಂಡ ಪಾವತಿಸಲು ಅವಕಾಶವಿರುತ್ತದೆ.

ಈ ಕುರಿತು ರಾಜ್ಯ ಸಾರಿಗೆ ಇಲಾಖೆ ಅಧೀನ ಕಾರ್ಯದರ್ಶಿ ಪುಷ್ಪ ವಿ.ಎಸ್ ಅವರು ಆದೇಶ ಹೊರಡಿಸಿ, ದಂಡ ಬಾಕಿ ಉಳಿಸಿಕೊಂಡಿರುವ ವಾಹನ ಮಾಲೀಕರು ಆ.23ರಿಂದ ಸೆ.12ರವರೆಗೂ ದಂಡದ ಕೇವಲ ಶೇ.50ರಷ್ಟನ್ನು ಪಾವತಿಸುವಂತೆ ರಿಯಾಯಿತಿ ಘೋಷಿಸಿದ್ದರು. ಇದಕ್ಕೂ ಮುನ್ನ ರಾಜ್ಯ ಸರ್ಕಾರ ಇದೇ ರೀತಿ ರಿಯಾಯಿತಿ ಘೋಷಿಸಿ ಭಾರೀ ಮೊತ್ತದ ದಂಡ ಸಂಗ್ರಹಿಸಿತ್ತು

## ದೇಶದಲ್ಲೇ ಫಸ್ಟ್: ಲಿಂಗತ್ವ ಅಲ್ಪಸಂಖ್ಯಾತರ ಮೂಲ ಹಂತದ ಸಮೀಕ್ಷೆಗೆ ಚಾಲನೆ



• ಉದಯವಾಹಿನಿ ಬೆಂಗಳೂರು

ದೇಶದಲ್ಲೇ ಪ್ರಪ್ರಥಮ ಬಾರಿಗೆ ಕರ್ನಾಟಕ ರಾಜ್ಯಾದ್ಯಂತ ಲಿಂಗತ್ವ ಅಲ್ಪಸಂಖ್ಯಾತರ ಮೂಲ ಹಂತದ ಸಮೀಕ್ಷೆ ಹಾಗೂ ಮಾಜಿ ದೇವದಾಸಿಯರ ಮರು ಸಮೀಕ್ಷೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ್ ಅವರು ವಿಧಾನಸೌಧದಲ್ಲಿ ಗುರುವಾರ ಪೋಸ್ಟರ್ ಬಿಡುಗಡೆ ಮಾಡುವ ಮೂಲಕ ಚಾಲನೆ ನೀಡಿದರು. ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ವತಿಯಿಂದ ಸಮೀಕ್ಷೆ ನಡೆಯುತ್ತಿದ್ದು, ಮೊದಲ ಬಾರಿಗೆ ರಾಜ್ಯಾದ್ಯಂತ ಲಿಂಗತ್ವ ಅಲ್ಪಸಂಖ್ಯಾತರ ಮೂಲ ಹಂತದ ಸಮೀಕ್ಷೆ 15 ಜಿಲ್ಲೆಗಳಲ್ಲಿ ಮಾಜಿ ದೇವದಾಸಿಯರ ಮರು ಸಮೀಕ್ಷೆ ನಡೆಯಲಿದೆ. ಸಮೀಕ್ಷೆಯಲ್ಲಿ ಸಾಮಾಜಿಕ, ಆರ್ಥಿಕ ಸ್ಥಿತಿಗತಿ ಕುರಿತಂತೆ ನಿಖರ ಮಾಹಿತಿ ಸಂಗ್ರಹಿಸಿ, ಪುನರ್ವಸತಿ ಕಲ್ಪಿಸಲು ಸಮೀಕ್ಷೆಗಳನ್ನು ನಡೆಸಲಾಗುವುದು.

ಸಮೀಕ್ಷೆಯ ಪೋಸ್ಟರ್ ಬಿಡುಗಡೆ ವೇಳೆ ಮಹಿಳಾ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಪದ್ಮಾವತಿ, ಇಲಾಖೆಯ ಪ್ರಧಾನ ಕಾರ್ಯದರ್ಶಿ ಡಾ.ಶಾಮ್ಲಾ ಇಕ್ಬಾಲ್, ಮಹಿಳಾ ಅಭಿವೃದ್ಧಿ ನಿಗಮದ ವ್ಯವಸ್ಥಾಪಕ ನಿರ್ದೇಶಕರಾದ ಮಹೇಶ್ ಬಾಬು, ಹಿರಿಯ ಅಧಿಕಾರಿಗಳು, ಲಿಂಗತ್ವ ಅಲ್ಪಸಂಖ್ಯಾತರು ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ನಗರದ ಹಲವೆಡೆ ಭಾರಿ ಮಳೆ: ಸಂಚಾರ ಅಸ್ತವ್ಯಸ್ತ

• ಉದಯವಾಹಿನಿ ಬೆಂಗಳೂರು

ನಗರದ ಹಲವೆಡೆ ಮಧ್ಯಾಹ್ನದಿಂದ ರಾತ್ರಿವರೆಗೆ ಭಾರಿ ಮಳೆಯಾಯಿತು. ಮುಖ್ಯ ರಸ್ತೆಗಳಲ್ಲಿ ಮಳೆ ನೀರು ನಿಂತು ಸಂಚಾರ ಅಸ್ತವ್ಯಸ್ತಗೊಂಡಿತ್ತು.

ರಾಜಭವನ ರಸ್ತೆಯಲ್ಲಿ ಮರಬಿದ್ದಿರುವುದರಿಂದ ಚಾಲುಕ್ಯ ಸರ್ಕಲ್ ಕಡೆಗೆ ತಾತ್ಕಾಲಿಕವಾಗಿ ನಿರ್ಬಂಧಿಸಲಾಗಿತ್ತು. ನಾಗಾರ್ಜುನ ಜಂಕ್ಷನ್ ಕಡೆಯಿಂದ ಜಿಡಿ ಮಾರ ಜಂಕ್ಷನ್, ರೂಪೇನ ಅಗ್ರಹಾರ ಕಡೆಯಿಂದ ಬೊಮ್ಮನಹಳ್ಳಿ, ಬೆಳ್ಳಂದೂರು ಜಂಕ್ಷನ್ ಕಡೆಯಿಂದ ಎಚ್‌ಎಸ್‌ಆರ್ ಲೇಔಟ್, ಅನಿಲ್ ಕುಂಬ್ಳೆ ವೃತ್ತ, ಕ್ವಿನ್ಸ್ ಜಂಕ್ಷನ್ ಕಡೆಯಿಂದ ಅನಿಲ್ ಕುಂಬ್ಳೆ ವೃತ್ತ, ಕಂಟೋನ್ಮೆಂಟ್ ರೈಲ್ವೆ ಅಂಡರ್‌ಪಾಸ್ ಕಡೆಯಿಂದ ಜಯಮಹಲ್ ರಸ್ತೆ, ಹೆಬ್ಬಾಳ ಡೌನ್‌ಲ್ಯಾಂಪ್ ಕಡೆಯಿಂದ ವಿಮಾನ ನಿಲ್ದಾಣ, ದೇವಿನಗರ ಕಡೆಯಿಂದ ಕುವೆಂಪು ನಗರ, ಕೆಎಸ್ ಐಟಿ ಕಾಲೇಜು ಹತ್ತಿರ ಮಳೆ ನೀರು ನಿಂತು ನೈಸ್ ರಸ್ತೆ ಕಡೆಗೆ ವಾಹನ ಸಂಚಾರ ನಿಧಾನಗತಿಯಲ್ಲಿತ್ತು.ಕೋಣನಕುಂಟೆಯಲ್ಲಿ 4.7 ಸೆಂ. ಮೀ, ರಾಜರಾಜೇಶ್ವರಿ ನಗರದಲ್ಲಿ 4 ಸೆಂ. ಮೀ, ಗೊಟ್ಟಿಗೆರೆಯಲ್ಲಿ 3.7 ಸೆಂ. ಮೀ, ಹೆಮ್ಮಿಗೆಪುರ, ದೊರೆಸಾನಿಪಾಳ್ಯ,ಗೊಲ್ಲಹಳ್ಳಿಯಲ್ಲಿ ತಲಾ 3.5 ಸೆಂ. ಮೀ, ಹಂಪಿನಗರ, ಬಾಣಸವಾಡಿ, ವಿ. ನಾಗೇನಹಳ್ಳಿ, ಅಂಜನಾಪುರದಲ್ಲಿ ತಲಾ 3 ಸೆಂ. ಮೀ, ಬಿಳೇಕಹಳ್ಳಿ, ಗರುಡಾಚಾರ್ಯ ಪಾಳ್ಯ, ವಿದ್ಯಾಪೀಠ, ಪುಲಕೇಶಿನಗರ, ಮಾರುತಿ ಮಂದಿರದಲ್ಲಿ ತಲಾ 2.5 ಸೆಂ. ಮೀ, ಮಹದೇವಪುರ, ಹಗದೂರು, ಸಂಪಂಗಿ ರಾಮ ನಗರ, ಬಸವೇಶ್ವರ ನಗರ, ಕಾಟನ್ ಪೇಟೆ, ಶೆಟ್ಟಿಹಳ್ಳಿ ನಾಗಪುರದಲ್ಲಿ ತಲಾ 2 ಸೆಂ. ಮೀ ಮಳೆಯಾಯಿತು.

# ಗ್ರೇಟರ್ ಬೆಂಗಳೂರು ಪ್ರಾಧಿಕಾರ ನಾಮಫಲಕ ಪೂಜೆ

### 5 ಪಾಲಿಕೆಗಳಿಗೆ 300 ಕೋಟಿ ರೂ. ಅನುದಾನ ಹಂಚಿಕೆ – ಡಿಸಿಎಂ ಡಿಕೆ ಶಿವಕುಮಾರ್

• ಉದಯವಾಹಿನಿ ಬೆಂಗಳೂರು



ಐದು ಪಾಲಿಕೆಗಳ ನೂತನ ಕಚೇರಿಗೆ ಭೂಮಿಪೂಜೆಯನ್ನು ನ. 1 ರಂದು ನೆರವೇರಿಸಲಾಗುವುದು. ಎಲ್ಲಾ ಪಾಲಿಕೆಗಳ ಗಡಿ ಭಾಗಗಳಲ್ಲಿ ಗಡಿ ಗೋಪುರಗಳನ್ನು ನಿರ್ಮಾಣ ಮಾಡಲಾಗುವುದು ಎಂದು ಡಿಸಿಎಂ ಡಿಕೆ ಶಿವಕುಮಾರ್ ಅವರು ತಿಳಿಸಿದರು.

ಗ್ರೇಟರ್ ಬೆಂಗಳೂರು ಪ್ರಾಧಿಕಾರ ಕಚೇರಿಯ ನಾಮಫಲಕ ಅನಾವರಣಗೊಳಿಸಿದ ನಂತರ ಡಿಸಿಎಂ ಶಿವಕುಮಾರ್ ಅವರು ಮಾಧ್ಯಮಗಳನ್ನು ಉದ್ದೇಶಿಸಿ ಮಾತನಾಡಿದರು. ಪ್ರತಿ ಪಾಲಿಕೆ ವ್ಯಾಪ್ತಿಯಲ್ಲಿ ರಸ್ತೆಗಳ ಸುಧಾರಣೆ, ಆಡಳಿತಾತ್ಮಕ ದೃಷ್ಟಿಯಿಂದ 500 ಮಂದಿ ಇಂಜಿನಿಯರ್‌ಗಳಿಗೆ ಅನುಮೋದನೆ ನೀಡಲಾಗಿದೆ. ಈ ಹಿಂದೆ 198 ವಾರ್ಡ್‌ಗಳಿದ್ದವು. ಈಗ 500 ವಾರ್ಡ್‌ಗಳ ರಚನೆಯ ಅನುಮತಿಗೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ. ಪಾಲಿಕೆಗಳ ಆಡಳಿತಾತ್ಮಕ ವೆಚ್ಚ, ಸಂಬಳ ಹಾಗೂ ನಿವೃತ್ತಿ ವೇತನಕ್ಕೆ ಎಂದು ಬಿಬಿಎಂಪಿಯಿಂದ ಸುಮಾರು 300 ಕೋಟಿ ರೂ. ಹಣ ಬಿಡುಗಡೆಗೆ ಮಾಡಲಾಗುವುದು ಎಂದರು.



ನಾಗರಿಕರು, ವಾಸ್ತುಶಿಲ್ಪಿಗಳು ಪಾಲಿಕೆ ಕಚೇರಿಗಳ ವಿನ್ಯಾಸ ಹೇಗಿರಬೇಕು ಎಂದು ಸಲಹೆ ನೀಡಬಹುದು. ಜೊತೆಗೆ ವಿನ್ಯಾಸಗಳನ್ನು ಸಹ ನೀಡಬಹುದು. ಇದರಲ್ಲಿ ಅತ್ಯುತ್ತಮ ಮೂರು ಅಥವಾ ಐದು ವಿನ್ಯಾಸಗಳನ್ನು ಆಯ್ಕೆ ಮಾಡಲಾಗುವುದು. ಇದಕ್ಕೆ 5 ಲಕ್ಷ ರೂ. ಬಹುಮಾನ ನೀಡಲಾಗುವುದು ಎಂದರು.

ಪ್ರತಿ ಪಾಲಿಕೆಗಳಲ್ಲಿ ಇಬ್ಬರು ಐಎಎಸ್ ಅಧಿಕಾರಿಗಳು, ಒಬ್ಬರು ಕೆಎಎಸ್, ಇಬ್ಬರು ಮುಖ್ಯ ಎಂಜಿನಿಯರ್‌ಗಳು ಹಾಗೂ ಅಗತ್ಯ ಕಚೇರಿ ಸಿಬ್ಬಂದಿ ಕೆಲಸ ಮಾಡಲಿದ್ದಾರೆ. ಬೆಂಗಳೂರು ನಗರಕ್ಕೆ ಉತ್ತಮವಾದ ಆಡಳಿತ ಜನರ ಬಾಗಿಲಿಗೆ ಸರ್ಕಾರವನ್ನು ತೆಗೆದುಕೊಂಡು ಹೋಗಬೇಕು ಎಂದು ನಿರ್ಣಯಗಳನ್ನು ತೆಗೆದುಕೊಂಡು ಪಾಲಿಕೆಗಳು ಕೆಲಸ ಮಾಡಲಿವೆ. ಪಾಲಿಕೆಗಳ ವ್ಯಾಪ್ತಿಗೆ ಬರುವ ರಸ್ತೆ, ಚರಂಡಿ ಸೇರಿದಂತೆ ಇತರೇ ಸಂಗತಿಗಳನ್ನು ಗುರುತಿಸುವ ಕೆಲಸವಾಗಲಿದೆ ಎಂದು ಹೇಳಿದರು. ಹೊಸ ಪ್ರದೇಶಗಳನ್ನು ಐದು ಪಾಲಿಕೆಗಳ ವ್ಯಾಪ್ತಿಗೆ ಸೇರಿಸಿಕೊಳ್ಳುವ ಬಗ್ಗೆ ಕೇಳಿದಾಗ, ಬೆಂಗಳೂರು ನಗರಕ್ಕೆ ಹೊಂದಿಕೊಂಡಿರುವ ಸ್ಥಳೀಯ ಸಂಸ್ಥೆಗಳನ್ನು ಜಿಬಿಎ ವ್ಯಾಪ್ತಿಗೆ ಈಗಲೇ ಸೇರಿಸಿದರೆ ಪ್ರಸ್ತುತ ಪ್ರತಿನಿಧಿಗಳಾಗಿರುವವನ್ನೂ ಪಾಲಿಕೆ ಸದಸ್ಯರು ಎಂದು ಪರಿಗಣಿಸಬೇಕಾಗುತ್ತದೆ. ಮೊದಲು ಈಗ ರಚನೆಯಾಗಿರುವ ಪಾಲಿಕೆಗಳಿಗೆ ಚುನಾವಣೆ ನಡೆದ ನಂತರ ಇತರೇ ಪ್ರದೇಶಗಳ ವಿಲೀನದ ಬಗ್ಗೆ ಭವಿಷ್ಯದಲ್ಲಿ ಯೋಚಿಸಲಾಗುವುದು ಎಂದರು. ನೂತನ ಆಯುಕ್ತರುಗಳ ಜವಾಬ್ದಾರಿಗಳ ಬಗ್ಗೆ ಕೇಳಿದಾಗ, ''ನೂತನ ಆಯುಕ್ತರುಗಳು ಜನರ ನಡುವೆಯಿದ್ದು ಕೆಲಸ ಮಾಡಬೇಕು. ಜಿಬಿಎ ಆಯುಕ್ತರು ಫುಟ್ ಪಾತ್, ನೀರು, ರಸ್ತೆ ಸೇರಿದಂತೆ ಇತರೇ ಕೆಲಸಗಳ ಬಗ್ಗೆ ಪರಿಶೀಲನೆ ನಡೆಸುತ್ತಿದ್ದಾರೆ. ದಿನಕ್ಕೆ 17-18 ಗಂಟೆ ಕೆಲಸ ಮಾಡಬೇಕಾಗುತ್ತದೆ. ಆದ ಕಾರಣಕ್ಕೆ ಹಿರಿಯ ಅಧಿಕಾರಿಗಳ ಜೊತೆ ಯುವ ಅಧಿಕಾರಿಗಳನ್ನೂ ನಿಯೋಜನೆ ಮಾಡಲಾಗಿದೆ ಎಂದರು.

**ಬೆಂಗಳೂರಿನ ಸಮಸ್ಯೆಗಳು ದಿನ ಬೆಳಗಾಗುವುದರಲ್ಲಿ ಬಗೆಹರಿಯುವುದಿಲ್ಲ. ಆದರೆ ಮುಂದಿನ ದಿನಗಳಲ್ಲಿ ನಾವು ಬಗೆಹರಿಸುವ ವಿಶ್ವಾಸವಿದೆ. ಕುಡಿಯುವ ನೀರು, ರಸ್ತೆ ಗುಂಡಿ, ಸಂಚಾರ ದಟ್ಟಣೆ ವಿಚಾರದಲ್ಲಿ ಉತ್ತಮವಾಗಿ ಕೆಲಸ ಮಾಡಲಾಗುವುದು ಎಂದರು. ಜಿಬಿಎಯಿಂದ ಬೆಂಗಳೂರು ಅಭಿವೃದ್ಧಿ ಸಾಧ್ಯವೇ ಎಂದು ಕೇಳಿದಾಗ, ಖಂಡಿತವಾಗಿಯೂ ಸಾಧ್ಯವಾಗಲಿದೆ. ಸಾರ್ವಜನಿಕರು ಸಹ ಪಾಲಿಕೆಗಳ ಜೊತೆ ಕೈ ಜೋಡಿಸಬೇಕು. ಆಗ ಮಾತ್ರ ಪಾರದರ್ಶಕ ಆಡಳಿತ ನಡೆಸಲು ಸಾಧ್ಯವಾಗುತ್ತದೆ. ಜನರು ಪ್ರಾಮಾಣಿಕವಾಗಿ ತಮ್ಮ ಆಸ್ತಿಗಳನ್ನು ಘೋಷಣೆ ಮಾಡಿಕೊಳ್ಳಬೇಕು, ತೆರಿಗೆ ಪಾವತಿ ಮಾಡಬೇಕು ಎಂದರು.**

**ಉತ್ತಮ ಪದ ಸಿಕ್ಕರೆ ಹೆಸರು ಬದಲಾವಣೆ**

**ಗ್ರೇಟರ್ ಬೆಂಗಳೂರು ಎಂದು ಇಂಗ್ಲಿಷ್ ಹೆಸರಿಟ್ಟಿರುವ ಬಗ್ಗೆ ಶಾಸಕ ಅಶ್ವಥನಾರಾಯಣ ಅವರ ಆಕ್ಷೇಪದ ಬಗ್ಗೆ ಕೇಳಿದಾಗ, ''ಅವರನ್ನೇ ಯಾವ ಹೆಸರು ಇಡಬೇಕು ಎಂದು ಸಲಹೆ ಕೇಳುತ್ತೇನೆ. ಮುಂಬೈ ಸೇರಿದಂತೆ ಬೇರೆ ಕಡೆಯು ಇದೇ ಪರಿಸ್ಥಿತಿ ಬಂದಿತ್ತು. ಮಾತೃಭಾಷೆಯನ್ನು ಕಡೆಗಣಿಸುವ ಮಾತಿಲ್ಲ. ಆದರೆ ಒಳ್ಳೆ ಪದ ಸಿಕ್ಕರೆ ಬದಲಾವಣೆ ಮಾಡೋಣ ಎಂದರು.**

## ನಗರದಲ್ಲಿ 9,567 ಕೆಜಿ ಏಕ-ಬಳಕೆಯ ಪ್ಲಾಸ್ಟಿಕ್ ವಶಕ್ಕೆ

• ಉದಯವಾಹಿನಿ ಬೆಂಗಳೂರು



ಗ್ರೇಟರ್‌ಬೆಂಗಳೂರು ಪ್ರಾಧಿಕಾರದ ವ್ಯಾಪ್ತಿಯಲ್ಲಿ ಬೆಂಗಳೂರು ಘನತ್ಯಾಜ್ಯ ನಿರ್ವಹಣಾ ಲಿಮಿಟೆಡ್ ಅಧಿಕಾರಿಗಳು ಒಟ್ಟು 158 ಪ್ರಕರಣದಲ್ಲಿ 9,567 ಕೆಜಿ ಏಕ ಬಳಕೆ ಪ್ಲಾಸ್ಟಿಕ್ ವಶಪಡಿಸಿಕೊಂಡು 7,38,700 ರೂ. ದಂಡ ವಸೂಲಿ ಮಾಡಿದ್ದಾರೆ. ನಿಷೇಧಿತ ಏಕ ಬಳಕೆ ಪ್ಲಾಸ್ಟಿಕ್ ಕವರ್ ಗಳನ್ನು ದಾಸ್ತಾನು ಮಾಡಿಕೊಂಡು ಮಾರಾಟ ಮಾಡುತ್ತಿರುವುದು ಕಂಡು ಬಂದಿರುವ ಹಿನ್ನೆಲೆ ಬೆಂಗಳೂರು ತ್ಯಾಜ್ಯ ನಿರ್ವಹಣಾ ಸಂಸ್ಥೆಯ ಅಧಿಕಾರಿಗಳು ಕಾರ್ಯಾಚರಣೆ ನಡೆಸಿ ನಿಷೇಧಿತ ಪ್ಲಾಸ್ಟಿಕ್ ಉತ್ಪನ್ನ ವಶಕ್ಕೆ ಪಡೆದುಕೊಂಡಿದ್ದು, ಪ್ಲಾಸ್ಟಿಕ್ ದಾಸ್ತಾನು ಮಾಡಲಾಗಿದ್ದ ಕೆ.ಆರ್. ಮಾರುಕಟ್ಟೆ 1 ಗೋದಾಮನ್ನು ಸೀಜ್ ಮಾಡಿದ್ದಾರೆ.

ಕೆ.ಆರ್. ಮಾರುಕಟ್ಟೆ ವ್ಯಾಪ್ತಿಯಲ್ಲಿ 3 ಪ್ರಕರಣದಿಂದ 29 ಕೆಜೆ ಪ್ಲಾಸ್ಟಿಕ್ ವಶಪಡಿಸಿಕೊಳ್ಳಲಾಗಿದ್ದು, 30 ಸಾವಿರ ರೂ. ದಂಡ ಸ್ವೀಕರಿಸಲಾಗಿದೆ. ಕೆ.ಆರ್. ಮಾರುಕಟ್ಟೆ ಒಂದು ಗೋದಾಮನ್ನು ಸೀಜ್ ಮಾಡಲಾಗಿದೆ. ವೆಂಡರ್ಸ್ ಸಿ ಬ್ಲಾಕ್‌ನಲ್ಲಿ 22 ಪ್ರಕರಣಗಳಿಂದ 6,310 ಕೆ ಜಿ ಪ್ಲಾಸ್ಟಿಕ್ ವಶಪಡಿಸಿಕೊಳ್ಳಲಾಗಿದ್ದು, 3,500 ದಂಡ ವಸೂಲಿ ಮಾಡಲಾಗಿದೆ.

ಅವೆನ್ಯೂ ರಸ್ತೆಯಲ್ಲಿ 17 ಪ್ರಕರಣಗಳಿಂದ 300 ಕೆಜಿ ಪ್ಲಾಸ್ಟಿಕ್, 40 ಸಾವಿರ ದಂಡ ವಿಧಿಸಲಾಗಿದೆ. ಕಲಾಸಿಪಾಳ್ಯದಲ್ಲಿ 150 ಕೆಜಿ ಪ್ಲಾಸ್ಟಿಕ್ ವಶಪಡಿಸಿಕೊಳ್ಳಲಾಗಿದ್ದು 24 ಪ್ರಕರಣಗಳಲ್ಲಿ 45,900 ರೂ.ದಂಡ ಸಂಗ್ರಹಿಸಲಾಗಿದೆ. ಯಶವಂತಪುರ ಮಾರುಕಟ್ಟೆಯಲ್ಲಿ 110 ಕೆಜಿ ಪ್ಲಾಸ್ಟಿಕ್ ವಶಕ್ಕೆ ಪಡೆಯಲಾಗಿದ್ದು, 27 ಪ್ರಕರಣಗಳಲ್ಲಿ 61,800 ರೂ. ದಂಡವನ್ನು ಸಂಗ್ರಹಿಸಲಾಗಿದೆ.

**ಅದೇ ರೀತಿ ಪೀಣ್ಯ ಕೈಗಾರಿಕಾ ಪ್ರದೇಶದಲ್ಲಿ 450 ಕೆಜಿ ಪ್ಲಾಸ್ಟಿಕ್ ವಶಕ್ಕೆ ಪಡೆಯಲಾಗಿದ್ದು, 1,00,500 ರೂ.ದಂಡ ಸಂಗ್ರಹಿಸಲಾಗಿದೆ. ದಾಸರಹಳ್ಳಿ ಪ್ರದೇಶದಲ್ಲಿ 218 ಕೆಜಿ ಪ್ಲಾಸ್ಟಿಕ್, ಚಾಮರಾಜಪೇಟೆ, ಅಕ್ಕಿಪೇಟೆ, ಬಳೆಪೇಟೆ ಪ್ರದೇಶದಲ್ಲಿ 2,000 ಕೆಜಿ ಪ್ಲಾಸ್ಟಿಕ್ ವಶಪಡಿಸಿಕೊಳ್ಳಲಾಗಿದ್ದು, ಒಟ್ಟು 37 ಪ್ರಕರಣಗಳ ದಾಖಲಿಸಿಕೊಂಡು, 24,07 ಲಕ್ಷ ದಂಡ ವಸೂಲಿ ಮಾಡಲಾಗಿದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.**

## ಆಟೋ, ಕ್ಯಾಬ್ ಚಾಲಕರಿಗೆ ಹೃದಯ ಆರೋಗ್ಯ ಯೋಜನೆ ಪ್ರಾರಂಭಿಸಲು ಸರ್ಕಾರ ನಿರ್ಧಾರ

• ಉದಯವಾಹಿನಿ ಬೆಂಗಳೂರು

ಸರ್ಕಾರವು ಆಟೋ, ಕ್ಯಾಬ್ ಚಾಲಕರನ್ನು ಗುರಿಯಾಗಿಟ್ಟುಕೊಂಡು ಆರೋಗ್ಯ ಯೋಜನೆಯನ್ನು ಶೀಘ್ರದಲ್ಲೇ ಜಾರಿಗೆ ತರಲಿದೆ ಎಂದು ದಿನೇಶ್ ಗುಂಡೂರಾವ್ ತಿಳಿಸಿದ್ದಾರೆ.

ಈ ಕಾರ್ಯಕ್ರಮದಿಂದ ಅವರ ಆರೋಗ್ಯ ಮೇಲ್ವಿಚಾರಣೆ ಮಾಡಲು ರಕ್ತದಲ್ಲಿನ ಸಕ್ಕರೆ, ರಕ್ತದೊತ್ತಡ (ಬಿಪಿ), ಕಡಿಮೆ ಮಾಡಲು ಸಹಾಯ ಮಾಡುತ್ತದೆ. ಉಚಿತ ಎಕೋಕಾರ್ಡಿಯೋಗ್ರಾಮ್ (ಎಕೋ) ಪರೀಕ್ಷೆ ನಡೆಸಲಾಗುತ್ತದೆ ಎಂದು ಮಾಹಿತಿ ನೀಡಿದ್ದಾರೆ. ಇದು ಹೃದಯಾಘಾತದ ಅಪಾಯದಲ್ಲಿರುವವರನ್ನು ಮೊದಲೇ ಗುರುತಿಸಲು, ಸಮಯೋಚಿತ ಆರೈಕೆಯನ್ನು ಒದಗಿಸಲು ನಮಗೆ ಸಹಾಯ ಮಾಡುತ್ತದೆ ಎಂದು ರಾವ್ ಅವರು ಅಧಿಕ ರಕ್ತದೊತ್ತಡದ ಕುರಿತು ನಡೆಸಿದ ಮಾಧ್ಯಮ ಕಾರ್ಯಾಗಾರದಲ್ಲಿ ಭಾಗವಹಿಸಿ ಹೇಳಿದರು.

ಕರ್ನಾಟಕದಲ್ಲಿ ಅಧಿಕ ರಕ್ತದೊತ್ತಡದ ಹೆಚ್ಚುತ್ತಿರುವ ಹೊರೆಯ ಹಿನ್ನೆಲೆಯಲ್ಲಿ ಈ ಘೋಷಣೆ ಬಂದಿದೆ. ಶಾಲಾ ಪಠ್ಯಕ್ರಮದಲ್ಲಿ ಮಕ್ಕಳಿಗೆ ಆರೋಗ್ಯ, ಗುಣಮಟ್ಟದ ಜೀವನಶೈಲಿ ಶಿಕ್ಷಣ ನೀಡಲು ಶಿಕ್ಷಣ ಇಲಾಖೆಯೊಂದಿಗೆ ಚರ್ಚೆ ನಡೆಸಲಾಗುತ್ತಿದೆ ಎಂದು ಅವರು ಹೇಳಿದರು. ಅಧಿಕ ರಕ್ತದೊತ್ತಡವು ಮೂಕ ಸಾಂಕ್ರಾಮಿಕ ರೋಗವಾಗಿದ್ದು, ಪಾರ್ಶ್ವವಾಯು, ಹೃದಯಾಘಾತ, ಮೂತ್ರಪಿಂಡ ವೈಫಲ್ಯ ಮತ್ತು ಅಕಾಲಿಕ ಸಾವಿಗೆ ಕಾರಣವಾಗುತ್ತದೆ ಎಂದು ತಿಳಿಸಿದ್ದಾರೆ.

## ಕೈ ಶಾಸಕ ವೀರೇಂದ್ರ ಪಪ್ಪಿ ಬಂಧನ ಪ್ರಕರಣ ಜೈಲಾ, ಬೇಲಾ; ನಿರ್ಧಾರ?

• ಉದಯವಾಹಿನಿ ಬೆಂಗಳೂರು



ಅಕ್ರಮ ಆನ್‌ಲೈನ್ ಬೆಟ್ಟಿಂಗ್ ಪ್ರಕರಣದಲ್ಲಿ ಜಾರಿ ನಿರ್ದೇಶನಾಲಯದಿಂದ ಬಂಧನಕ್ಕೆ ಒಳಗಾಗಿರುವ ಕಾಂಗ್ರೆಸ್ ಶಾಸಕ ಕೆಸಿ ವಿರೇಂದ್ರ ಪಪ್ಪಿಗೆ ಜೈಲಾ, ಬೇಲಾ ಅನ್ನೋದು ನಿರ್ಧಾರವಾಗಲಿದೆ. ಮೊದಲ ಬಾರಿಗೆ 5 ದಿನ 2ನೇ ಬಾರಿಗೆ 6 ದಿನ ಇಡಿ ಕಸ್ಟಡಿಗೆ ಪಡೆದಿತ್ತು. ಕಸ್ಟಡಿ ಅವಧಿ ಅಂತ್ಯಗೊಂಡ ಹಿನ್ನೆಲೆ ಮತ್ತೆ ಕೋರ್ಟ್‌ಗೆ ಹಾಜರುಪಡಿಸಲಿದೆ. ಒಂದು ವೇಳೆ ಇಡಿ ಕಸ್ಟಡಿಗೆ ಪಡೆಯದಿದ್ದರೆ ಜೈಲಿಗೆ ತೆರಳುವ ಸಾಧ್ಯತೆ ಇದೆ.

ಜೊತೆಗೆ 5 ಐಷಾರಾಮಿ ಕಾರುಗಳನ್ನೂ ಸೀಜ್ ಮಾಡಲಾಗಿದೆ. ಹೀಗಾಗಿ ಹಣದ ಮೂಲ ಪತ್ತೆಗಾಗಿ ಮತ್ತೆ ಕಸ್ಟಡಿಗೆ ಕೇಳಲು ಇಡಿ ಪ್ಲ್ಯಾನ್ ಮಾಡಿಕೊಂಡಿದೆ. ಒಂದು ವೇಳೆ ಕಸ್ಟಡಿಗೆ ಕೇಳದಿದ್ರೆ, ಕೋರ್ಟ್ ನ್ಯಾಯಾಂಗ ಬಂಧನಕ್ಕೆ ಕಳಿಸಲಿದೆ.

**ಏನಿದು ಪ್ರಕರಣ?:** ಗೇಮಿಂಗ್ ಆ್ಯಪ್‌ಗಳಿಗೆ ಅಕ್ರಮವಾಗಿ ಹಣ ವರ್ಗಾವಣೆ, ಅಕ್ರಮ ಆಸ್ತಿ ಮತ್ತು ತೆರಿಗೆ ವಂಚನೆ ಆರೋಪ ಪಪ್ಪಿ ವಿರುದ್ಧ ಕೇಳಿಬಂದಿತ್ತು. ಈ ಕುರಿತು ಗೋವಾದಲ್ಲಿ 2 ಪ್ರಕರಣ ದಾಖಲಾಗಿತ್ತು. ಇದನ್ನಾಧರಿಸಿ ಇಡಿ ದಾಳಿ ನಡೆಸಿತ್ತು.

**55 ಕೋಟಿ ರೂ. ನಗದು ಫ್ರೀಜ್**

**ಈಗಾಗಲೇ ಪಪ್ಪಿ ಬ್ಯಾಂಕ್ ಖಾತೆಯಿಂದ 55 ಕೋಟಿ ನಗದು ಫ್ರೀಜ್ ಮಾಡಿರುವುದಾಗಿ ಇಡಿ ಪ್ರಕಟಣೆ ಹೊರಡಿಸಿತ್ತು. ಅಲ್ಲದೇ ಕೆ.ಸಿ ವೀರೇಂದ್ರ ಅವರ 9 ಬ್ಯಾಂಕ್ ಖಾತೆಗಳಲ್ಲಿ ಅಂದಾಜು 40.69 ಕೋಟಿ ನಗದು ರೂ. ಪತ್ತೆಯಾಗಿದ್ದು, 262 ಮ್ಯೂಲ್ ಖಾತೆಗಳಲ್ಲಿ ಒಟ್ಟು 14.46 ಕೋಟಿ ರೂ. (ಅಂದಾಜು) ಸೇರಿದಂತೆ 55 ಕೋಟಿ ರೂ. ಹಣವನ್ನು ಇಡಿ ಅಧಿಕಾರಿಗಳು ಫ್ರೀಜ್ ಮಾಡಿದ್ದಾರೆ.**

## ಜಕ್ಕೂರು ಏರೋಡ್ರೋಮ್ ಸ್ಥಳ ಬಳಕೆಗೆ ಚಿಂತನೆ: ಸಿದ್ದರಾಮಯ್ಯ

• ಉದಯವಾಹಿನಿ ಬೆಂಗಳೂರು



ಜಕ್ಕೂರು ಏರೋಡ್ರೋಮ್ ರನ್ ವೇ ವಿಸ್ತರಿಸಲು ಈ ಜಾಗವನ್ನು ಸಂಪೂರ್ಣವಾಗಿ ಸಾರ್ವಜನಿಕ ಉಪಯೋಗಕ್ಕೆ ಬಳಸಿಕೊಳ್ಳಲು ಏನೇನು ಮಾಡಬಹುದೆಂಬ ಬಗ್ಗೆ ಚಿಂತನೆ ನಡೆಸಲಾಗಿದೆ ಎಂದು ಸಿದ್ದರಾಮಯ್ಯ ತಿಳಿಸಿದರು. ಜಕ್ಕೂರು ಸರ್ಕಾರಿ ವೈಮಾನಿಕ ತರಬೇತಿ ಶಾಲೆ ಮತ್ತು ಏರೋಡ್ರೋಮ್ ಅಭಿವೃದ್ಧಿಗೆ ಸಂಬಂಧಿಸಿದಂತೆ ಅಧಿಕಾರಿಗಳ ಜೊತೆ ಅವರು ಚರ್ಚೆ ನಡೆಸಿದರು.

ಇಲ್ಲಿನ ಜಾಗವನ್ನು ಬಳಸಿಕೊಳ್ಳುವ ವಿಚಾರದಲ್ಲಿ ಸರ್ಕಾರದ ಮುಂದೆ ಎರಡು ಯೋಜನೆಗಳಿವೆ. ಇಲ್ಲಿ ಮೇಲ್ಸೇತುವೆ ಬಂದ ಕಾರಣ ಸಮಸ್ಯೆ ಆಗಿದೆ. ಮೇಲೇತುವೆ ಬರುವ ಬಗ್ಗೆ ಮೊದಲೇ ತಿಳಿದಿರಲಿಲ್ಲ. ಇಲ್ಲಿ 200 ಎಕರೆಗಿಂತಲೂ ಹೆಚ್ಚಿನ ಜಾಗವಿದೆ. ಜಕ್ಕೂರು ವೈಮಾನಿಕ ತರಬೇತಿ ಶಾಲೆಯ ಪಕ್ಕದಲ್ಲಿಯೇ ರನ್ ವೇ ವಿಸ್ತರಣೆಗೆ ಮೂರು ಎಕರೆಗಿಂತ ಹೆಚ್ಚು ಜಮೀನಿನ ಅಗತ್ಯವಿದೆ. ಜಮೀನು ಕೊಡಲು ಭೂಮಾಲೀಕರು ತಯಾರಿಲ್ಲ. ಅಲ್ಲದೆ, ದುಬಾರಿ ಕೂಡಾ ಆಗಿದೆ' ಎಂದರು.

'ಲಭ್ಯ ಸ್ಥಳವನ್ನು ಹೇಗೆ ಉಪಯೋಗಿಸಬೇಕು ಎಂಬ ಬಗ್ಗೆ ಚಿಂತನೆ ನಡೆಯುತ್ತಿದೆ. ವೈಮಾನಿಕ ತರಬೇತಿ ಶಾಲೆ ನಡೆಸುವಂತೆ ಕೋರ್ಟ್ ಆದೇಶ ಇರುವುದರಿಂದ, ಏನೇನು ಮಾಡಬಹುದೆಂದು ಪರಿಶೀಲಿಸಲಾಗುತ್ತಿದೆ' ಎಂದು ಮುಖ್ಯಮಂತ್ರಿ ತಿಳಿಸಿದರು.

**ಸೌಜನ್ಯ ತಾಯಿ ನಿರ್ಧರಿಸಬೇಕು:** ಸೌಜನ್ಯ ಪ್ರಕರಣದಲ್ಲಿ ಸುಪ್ರೀಂ ಕೋರ್ಟ್‌ಗೆ ಮೇಲ್ಮನವಿ ಸಲ್ಲಿಸಿದರೆ ಅದರ ವೆಚ್ಚವನ್ನು ಭರಿಸುವುದಾಗಿ ಬಿಜೆಪಿ ರಾಜ್ಯ ಘಟಕದ ಅಧ್ಯಕ್ಷ ಬಿ. ವೈ. ವಿಜಯೇಂದ್ರ ನೀಡಿರುವ ಹೇಳಿಕೆಗೆ ಪ್ರತಿಕ್ರಿಯಿಸಿದ ಮುಖ್ಯಮಂತ್ರಿ, ಸಿಬಿಐ ಕೇಂದ್ರ ಸರ್ಕಾರದ ಅಧೀನದಲ್ಲಿದೆ. ಆರೋಪಿಯನ್ನು ಈಗಾಗಲೇ ಸಿಬಿಐ ಖುಲಾಸೆ ಮಾಡಿದೆ. ಈಗ ಸುಪ್ರೀಂಕೋರ್ಟಿನ ವೆಚ್ಚ ಭರಿಸುವುದಾಗಿ ಹೇಳುತ್ತಿದ್ದಾರೆ. ಮೇಲ್ಮನವಿಗೆ ಪ್ರಕರಣ ಸೂಕ್ತವಾಗಿದೆಯೇ ಎಂಬುದನ್ನು ಸೌಜನ್ಯ ತಾಯಿ ನಿರ್ಧರಿಸಬೇಕು ಎಂದರು.

**ರಾಜಕೀಯ ಪ್ರೇರಿತ ಯಾತ್ರೆ:** ಧರ್ಮಸ್ಥಳಕ್ಕೆ ಬಿಜೆಪಿ ಮಾಡಿದ ಯಾತ್ರೆ, ರಾಜಕೀಯ ಪ್ರೇರಿತ. ಅದು ಧರ್ಮಸ್ಥಳ ಚಲೋ ಅಲ್ಲ, ರಾಜಕೀಯ ಚಲೋ ಎಂದರು.

**ಧರ್ಮಪ್ರಚಾರ ಅಲ್ಲ**

**ಅರಮನೆ ಮೈದಾನದಲ್ಲಿ ಅಲ್ಪಸಂಖ್ಯಾತರ ಸಮಾವೇಶಕ್ಕೆ ವಿರೋಧ ವ್ಯಕ್ತವಾಗಿದ್ದು, ಪ್ರವಾಸಿ ವೀಸಾ ಪಡೆದು ಧರ್ಮಪ್ರಚಾರ ಮಾಡುತ್ತಿದ್ದಾರೆ ಎಂಬ ಆರೋಪದ ಬಗ್ಗೆ, ಆ ರೀತಿ ಏನೂ ಇಲ್ಲ. ಆಯೋಜಕರ ಜೊತೆ ಈ ಬಗ್ಗೆ ಮಾತನಾಡಿದ್ದೇನೆ ಎಂದರು.**

## NIRF ಶ್ರೇಯಾಂಕದಲ್ಲಿ 65ನೇ ಸ್ಥಾನ ಪಡೆದ ಬೆಂಗಳೂರು ವಿಶ್ವವಿದ್ಯಾಲಯ

• ಉದಯವಾಹಿನಿ ಬೆಂಗಳೂರು




ಉನ್ನತ ಶಿಕ್ಷಣ ಕ್ಷೇತ್ರದಲ್ಲಿ ಮೇಲುಗೈ ಸಾಧಿಸಿರುವ ಬೆಂಗಳೂರು ವಿಶ್ವವಿದ್ಯಾಲಯ ಮತ್ತೊಂದು ಹಿರಿಮೆಗೆ ಪಾತ್ರವಾಗಿದೆ. ರಾಷ್ಟ್ರೀಯ ಸಂಸ್ಥೆ ಶ್ರೇಯಾಂಕ ಚೌಕಟ್ಟು ಶ್ರೇಯಾಂಕದಲ್ಲಿ ಬೆಂಗಳೂರು ವಿಶ್ವವಿದ್ಯಾಲಯ ರಾಷ್ಟ್ರಮಟ್ಟದ ಎಲ್ಲಾ ಪ್ರವರ್ಗಗಳಲ್ಲಿ 65ನೇ ಅಗ್ರಸ್ಥಾನಕ್ಕೆ ಭಾಜನವಾಗಿದೆ. ರಾಷ್ಟ್ರಮಟ್ಟದ ಎಲ್ಲಾ ಸರ್ಕಾರಿ ವಿಶ್ವವಿದ್ಯಾಲಯಗಳ ಪಟ್ಟಿಯಲ್ಲಿ 26ನೇ ಸ್ಥಾನ ಪಡೆದಿದೆ. ಈ ಮೂಲಕ ಉನ್ನತ ಶಿಕ್ಷಣ ಕ್ಷೇತ್ರದಲ್ಲಿ ಬೆಂಗಳೂರು ವಿಶ್ವವಿದ್ಯಾಲಯ ತನ್ನ ಸಾಧನೆ ಮುಂದುವರೆಸಿದೆ.

2024ರಲ್ಲಿ ಬೆಂಗಳೂರು ವಿಶ್ವವಿದ್ಯಾಲಯವು 81ನೇ ಸ್ಥಾನದಲ್ಲಿತ್ತು. ಇದೀಗ ಬೆಂಗಳೂರು ವಿಶ್ವವಿದ್ಯಾಲಯವು ಗಮನಾರ್ಹವಾಗಿ ಸುಧಾರಿಸಿದೆ. ವಿದ್ಯಾರ್ಥಿ ಸ್ನೇಹಿ ವಾತವರಣ, ಅನುಭವಿ ಶಿಕ್ಷಕ ವರ್ಗ, ಅತ್ಯುತ್ತಮ ಪಠ್ಯಾಧಾರಿತ ಶಿಕ್ಷಣ, ತಂತ್ರಜ್ಞಾನಕ್ಕೆ ಆದ್ಯತೆ, ಕ್ರಿಯಾಶೀಲತೆ ಮತ್ತು ನಾವೀನ್ಯತೆಗಳಿಗೆ ಹೆಚ್ಚಿನ ಆದ್ಯತೆ ನೀಡುತ್ತಾ ವಿದ್ಯಾರ್ಥಿ ಕೇಂದ್ರಿತ ಶಿಕ್ಷಣ ವಾತವರಣ ಒದಗಿಸಿರುವ ಬೆಂಗಳೂರು ವಿಶ್ವವಿದ್ಯಾಲಯಕ್ಕೆ ಈ ಶ್ರೇಯಾಂಕ ದಕ್ಕಿರುವುದು ವಿವಿ ಬದ್ಧತೆ ಮತ್ತು ಪರಿಶ್ರಮಕ್ಕೆ ಸಾಕ್ಷಿಯಾಗಿದೆ. ವಿಶ್ವದಲ್ಲೇ ಉನ್ನತ ಶಿಕ್ಷಣ ಕ್ಷೇತ್ರದಲ್ಲಿ ಬೆಂಗಳೂರು ವಿಶ್ವವಿದ್ಯಾಲಯ ಅತ್ಯುತ್ತಮ ವಿಶ್ವವಿದ್ಯಾಲಯ ಎಂದು ಗುರುತಿಸಿಕೊಂಡಿದ್ದು, NAAC A++ ಪಿಎಂ ಉಷಾ ಯೋಜನೆಯಡಿ 100 ಕೋಟಿ ರೂ. ಅನುದಾನವನ್ನು ಪಡೆದುಕೊಂಡಿತ್ತು. ಮುಂದುವರೆದ ಭಾಗವಾಗಿ ಶ್ರೇಯಾಂಕದಲ್ಲಿ ಅಗ್ರ ಸ್ಥಾನ ಪಡೆಯುವ ಮೂಲಕ ಬೆಂಗಳೂರು ವಿವಿ ಶೈಕ್ಷಣಿಕ ಸಾಧನೆಯ ಪರಂಪರೆಯನ್ನು ಮುಂದುವರೆಸಿದೆ.

# ಬಫರ್ ವಲಯ ಇಳಿಕೆ: ಕರಡು ಅಧಿಸೂಚನೆ

### ಕೆರೆಗಳ ಬಫರ್ ವಲಯವನ್ನು ಕಂದಾಯ ಇಲಾಖೆಯ ದಾಖಲೆಯಂತೆ ನಿರ್ವಹಣೆ

• ಉದಯವಾಹಿನಿ ಬೆಂಗಳೂರು



ಬೆಂಗಳೂರು ಮೆಟ್ರೊ ಪಾಲಿಟನ್ ವಲಯದಲ್ಲಿರುವ ಎಲ್ಲಾ ಯೋಜನಾ ಪ್ರಾಧಿಕಾರಗಳಲ್ಲಿ ರಾಜಕಾಲುವೆಗಳ ಬಫರ್ ವಲಯವನ್ನು ಅರ್ಧದಷ್ಟು ಕಡಿಮೆ ಮಾಡಲು ನಿರ್ಧರಿಸಿ, ನಗರಾಭಿವೃದ್ಧಿ ಇಲಾಖೆ ಕರಡು ಅಧಿಸೂಚನೆ ಹೊರಡಿಸಿದೆ.

ಕೆರೆಗಳು ಹಾಗೂ ರಾಜಕಾಲುವೆಗಳ ಬಫರ್ ವಲಯವನ್ನು ಅಭಿವೃದ್ಧಿ ಕಾರ್ಯಗಳಿಗೆ ಒಪ್ಪಿಗೆ ನೀಡುವಾಗ ಪರಿಗಣಿಸಬೇಕಾಗಿದೆ. ಇದಕ್ಕಾಗಿ, ಮಾಸ್ಟರ್ ಪ್ಲಾನ್‌ನಲ್ಲಿರುವ ಬಫರ್ ವಲಯ ವ್ಯಾಪ್ತಿಯನ್ನು ಬದಲಾಯಿಸಿ ವಲಯ ನಿಯಮಗಳಿಗೆ ತಿದ್ದುಪಡಿ ತರಲು ನಿರ್ಧರಿಸಲಾಗಿದೆ.

ಕರ್ನಾಟಕ ನಗರ, ಗ್ರಾಮಾಂತರ ಯೋಜನಾ (ಕೆಟಿಸಿಪಿ) ಕಾಯ್ದೆ 1961ರ ಸೆಕ್ಷನ್ 13-ಇಗೆ ತಿದ್ದುಪಡಿ ತಂದು, ಬೆಂಗಳೂರಿನ ಸ್ಥಳೀಯ ಯೋಜನಾ ಪ್ರಾಧಿಕಾರದ ಪರಿಷ್ಕೃತ ಮಾಸ್ಟರ್ ಪ್ಲಾನ್-2015, ಬೆಂಗಳೂರು - ಮೈಸೂರು ಇನ್‌ಫ್ರಾಸ್ಟ್ರಕ್ಚರ್ ಕಾರಿಡಾರ್ ಪ್ರದೇಶ ಯೋಜನೆ ಪ್ರಾಧಿಕಾರದ ಮಾಸ್ಟರ್ ಪ್ಲಾನ್ ಹಾಗೂ ಬೆಂಗಳೂರು ಮೆಟ್ರೊಪಾಲಿಟನ್ ವಲಯದ ಎಲ್ಲಾ ಸ್ಥಳೀಯ ಯೋಜನಾ ಪ್ರದೇಶಗಳಲ್ಲಿ ವಲಯ ನಿಯಮಗಳಿಗೆ ತಿದ್ದುಪಡಿ ತರಲಾಗುತ್ತದೆ ಎಂದು ಸೆ.2ರಂದು ಹೊರಡಿಸಿರುವ ಕರಡು ಅಧಿಸೂಚನೆಯಲ್ಲಿ ತಿಳಿಸಲಾಗಿದೆ. ಕೆರೆಗಳ ಬಫರ್ ವಲಯವನ್ನು ಕಂದಾಯ ಇಲಾಖೆಯ ದಾಖಲೆಯಂತೆ ನಿರ್ವಹಣೆ ಮಾಡಬೇಕು. ಕರ್ನಾಟಕ ಕೆರೆ ಸಂರಕ್ಷಣೆ ಮತ್ತು ಅಭಿವೃದ್ಧಿ ಪ್ರಾಧಿಕಾರ ಕಾಯ್ದೆಯಲ್ಲಿ ಕೆರೆಗಳ ಬಫರ್ ವಲಯ ನಿಗದಿಯಾಗಿದೆ. ಕೆರೆಗಳ ಬಫರ್ ವಲಯವನ್ನು ಮೀಸಲು ಉದ್ಯಾನವನ್ನಾಗಿ ಪರಿಗಣಿಸಿ ನಕ್ಷೆ ಅನುಮೋದನೆ ನೀಡಬಹುದು ಎಂದು ಹೇಳಲಾಗಿದೆ. ರಾಜಕಾಲುವೆಗಳಿಗೆ ಹೊಸ ವ್ಯಾಖ್ಯಾನ ನೀಡಿ, ಕಂದಾಯ ಇಲಾಖೆಯಲ್ಲಿ ನೈಸರ್ಗಿಕ ಕಾಲುವೆ/ ನಾಲಾಗಳಾಗಿದ್ದು, ಕೆರೆಯಿಂದ ಕೆರೆಗೆ ಅಥವಾ ಕೆರೆಯಿಂದ ನದಿಗೆ ಮಳೆನೀರು ಹರಿಸುವ ಕಾಲುವೆಗಳನ್ನು ಪ್ರಾಥಮಿಕ ರಾಜಕಾಲುವೆ ಎಂದು ಹೆಸರಿಸಲಾಗಿದೆ. ದ್ವಿತೀಯ ರಾಜಕಾಲುವೆ ಎಂದರೆ, ಕಂದಾಯ ಇಲಾಖೆಯಲ್ಲಿ ನೈಸರ್ಗಿಕ ಕಾಲುವೆ/ ನಾಲಾಗಳಾಗಿದ್ದು, ಕೆರೆಗಳಿಗೆ ಅಥವಾ ಪ್ರಾಥಮಿಕ ರಾಜಕಾಲುವೆಗೆ ಮಳೆ ನೀರನ್ನು ಹರಿಸುವ ಕಾಲುವೆಗಳು ಎಂದು ಹೇಳಲಾಗಿದೆ. ಕಂದಾಯ ಇಲಾಖೆಯಲ್ಲಿ ನೈಸರ್ಗಿಕ ಕಾಲುವೆ/ ನಾಲಾಗಳಾಗಿದ್ದು, ದ್ವಿತೀಯ ಹಂತದ ರಾಜಕಾಲುವೆಗೆ ಮಳೆ ನೀರು ಹರಿಸುವ ಕಾಲುವೆಗಳನ್ನು ತೃತೀಯ ರಾಜಕಾಲುವೆಗಳು ಎಂದು ವಿವರಿಸಲಾಗಿದೆ. ಕೆರೆ ಹಾಗೂ ರಾಜಕಾಲುವೆಗಳ ಬಫರ್ ವಲಯ ಕಡಿಮೆ ಮಾಡಲು ಮುಖ್ಯ ಕಾರ್ಯದರ್ಶಿ ನೇತೃತ್ವದ ಅಧಿಕಾರಿಗಳ ಸಮಿತಿ ಸರ್ಕಾರಕ್ಕೆ ವರದಿ ಸಲ್ಲಿಸಿತ್ತು. ಅದರಂತೆ, ಕೆಟಿಸಿಡಿಎ ಕಾಯ್ದೆಗೆ ತಿದ್ದುಪಡಿ ತರುವ ಮಸೂದೆಯನ್ನು ವಿಧಾನಮಂಡಲದಲ್ಲಿ ಮಂಡಿಸಿ ಅನುಮೋದನೆ ಪಡೆಯಲಾಗಿದೆ.

ರಾಜಕಾಲುವೆ ಬಫರ್ ವಲಯ ಕೆಟಿಸಿಡಿಎ ವ್ಯಾಪ್ತಿಗೆ ಬಾರದಿರುವುದರಿಂದ, ಸಮಿತಿಯ ತೀರ್ಮಾನದಂತೆ ಅಧಿಸೂಚನೆ ಹೊರಡಿಸಿ, ಕಡಿತಗೊಳಿಸಲು ನಿರ್ಧರಿಸಲಾಗಿದೆ.

**ಒಪ್ಪಿಗೆ ನೀಡದಂತೆ ರಾಜ್ಯಪಾಲರಿಗೆ ಮನವಿ**


**'ಕೆರೆಗಳ ಬಫರ್ ವಲಯ ಕಡಿಮೆ ಮಾಡುವುದರಿಂದ ಜೀವವೈವಿಧ್ಯತೆಗೆ ಕಂಟಕವಾಗುವುದರ ಜೊತಗೆ ಪರಿಸರ ಹಾಳಾಗುತ್ತದೆ. ಬಫರ್ ವಲಯದಲ್ಲಿ ಅಭಿವೃದ್ಧಿ ಚಟುವಟಿಕೆಗಳು ನಡೆಯುವುದರಿಂದ ಒತ್ತುವರಿಯನ್ನು ತೆರವುಗೊಳಿಸದೆ ಅದನ್ನು ಸಕ್ರಮಗೊಳಿಸಲಾಗುತ್ತದೆ. ಕೆರೆಗಳ ಪುನರುಜ್ಜೀವನಕ್ಕೆ ಕೋಟ್ಯಂತರ ರೂಪಾಯಿ ವೆಚ್ಚ ಮಾಡಿರುವುದು ವ್ಯರ್ಥವಾಗುತ್ತದೆ. ಜಲಮೂಲಗಳಾದ ಕೆರೆಗಳಿಂದ ಅಂತರ್ಜಲ ಮಟ್ಟ ವೃದ್ಧಿಆಗುತ್ತದೆ. ಬಫರ್ ವಲಯ ಕಡಿಮೆಯಾದರೆ ಕೆರೆ ಅಂಗಳದ ಒತ್ತುವರಿ ಹೆಚ್ಚಾಗುತ್ತದೆ. ಹೀಗಾಗಿ ಕೆರೆಗಳ ಬಫರ್ ವಲಯ ಕಡಿತದ ಮಸೂದೆಗೆ ಸಮ್ಮತಿ ನೀಡಬಾರದು' ಎಂದು ವೈಜ್ಞಾನಿಕ ಅಧ್ಯಯನಗಳ ವರದಿಯೊಂದಿಗೆ 'ಬೆಂಗಳೂರು ಟೌನ್ ಹಾಲ್' ಸದಸ್ಯರು ರಾಜ್ಯಪಾಲ ಥಾವರಚಂದ್ ಗೆಹಲೋತ್ ಅವರಿಗೆ ಮನವಿ ಸಲ್ಲಿಸಿದ್ದಾರೆ.**

### ದಸರಾ ಉದ್ಘಾಟಕರಿಗೆ ಚಾಮುಂಡಿ ಬೆಟ್ಟದ ಶಿಷ್ಟಾಚಾರ ಸಂಪ್ರದಾಯ ಮೊದಲು ತಿಳಿಸಿ: ವಿ ಸೋಮಣ್ಣ ಕಿಡಿ

# ಸಂಪ್ರದಾಯ ಅರಿತು ಅವರು ತಮ್ಮ ಕಾರ್ಯ ಮಾಡಲಿ

• **ಉದಯವಾಹಿನಿ, ಮೈಸೂರು**

ಕ್ಷುಲಕ ರಾಜಕಾರಣ ಬಿಟ್ಟು ಜನರ ನೋವಿಗೆ ಸ್ಪಂದಿಸಿ. ಅತಿವೃಷ್ಟಿಯಿಂದ ಎಲ್ಲೆಡೆ ನಷ್ಟವಾಗಿದೆ. ಜಿಲ್ಲಾ ಉಸ್ತುವಾರಿ ಸಚಿವರನ್ನು ತಮ್ಮ ಜಿಲ್ಲೆಗಳಿಗೆ ಕಳಿಸಿ ಎಂದು ಕೇಂದ್ರ ಸಚಿವ ವಿ. ಸೋಮಣ್ಣ ಮೈಸೂರಿನಲ್ಲಿ ಹೇಳಿದರು. ಚಾಮುಂಡಿ ಬೆಟ್ಟದ ಶಿಷ್ಟಾಚಾರ, ಸಂಪ್ರದಾಯ ಪಾಲಿಸಿ ನಂಬಿಕೆಗೆ, ಭಕ್ತಿಗೆ, ಇತಿಹಾಸಕ್ಕೆ ಮತ್ತೊಂದು ಹೆಸರು ಚಾಮುಂಡಿ ಬೆಟ್ಟ. ದಸರಾ ಉದ್ಘಾಟಕರಿಗೆ ತಾಯಿ ಚಾಮುಂಡಿಯ ಇತಿಹಾಸ ಉತ್ಸವ, ಆರಾಧನೆ, ಸಂಪ್ರದಾಯವನ್ನು ಮೊದಲು ತಿಳಿಸಿ. ಸಂಪ್ರದಾಯ ಅರಿತು ಅವರು ತಮ್ಮ ಕಾರ್ಯ ಮಾಡಲಿ. ದಸರಾ ಉದ್ಘಾಟಕರು ಈ ಸ್ಥಾನಕ್ಕೆ ಅರ್ಹರೋ ಅಥವಾ ಇಲ್ಲವೋ ಎಂಬ ಚರ್ಚೆ ಮಾಡಲ್ಲ. ನಮ್ಮ ಸಂಪ್ರದಾಯಕ್ಕೆ ಧಕ್ಕೆ ಆಗದಂತೆ ಉದ್ಘಾಟಕರು ನಡೆದುಕೊಳ್ಳಲಿ. ಸರ್ಕಾರ ಯಾರನ್ನು ತೃಪ್ತಿಪಡಿಸಲು ಉದ್ಘಾಟಕರನ್ನು ಆಯ್ಕೆ ಮಾಡಿಕೊಂಡಿದೆಯೋ ಗೊತ್ತಿಲ್ಲ. ಧಾರ್ಮಿಕ ಕೆಲಸದ ವಿಚಾರದಲ್ಲಿ ಸರ್ಕಾರ ಟೇಕ್ ಇಟ್ ಫ್ಹಾರ್ ಗ್ರ್ಯಾಟೆಂಡ್ ಅಂದು ಕೊಳ್ಳಬೇಡಿ. ಉದ್ಘಾಟಕರಿಗೆ, ಸರ್ಕಾರಕ್ಕೆ ಚಾಮುಂಡಿ ಬೆಟ್ಟದ ಶಿಷ್ಟಾಚಾರ, ಸಂಪ್ರದಾಯ ಪಾಲಿಸುವ ಬುದ್ಧಿ ಕೊಡಲಿ ಎಂದರು.



● ದಸರಾ ಉದ್ಘಾಟಕರಿಗೆ ತಾಯಿ ಚಾಮುಂಡಿಯ ಇತಿಹಾಸ ಉತ್ಸವ, ಆರಾಧನೆ, ಸಂಪ್ರದಾಯವನ್ನು ಮೊದಲು ತಿಳಿಸಿ

● ದಸರಾ ಉದ್ಘಾಟಕರು ಈ ಸ್ಥಾನಕ್ಕೆ ಅರ್ಹರೋ, ಇಲ್ಲವೋ ಎಂಬ ಚರ್ಚೆ ಮಾಡಲ್ಲ: ಸೋಮಣ್ಣ

**ತುಮಕೂರಿನಿಂದ ಸ್ಪರ್ಧಿಸೋದಿಲ್ಲ ಎಂಬ ವಿಚಾರ:** ತಮ್ಮದೇ ಹೇಳಿಕೆಗೆ ಕೇಂದ್ರ ಸಚಿವ ವಿ ಸೋಮಣ್ಣ ಉಲ್ಟಾ ಹೊಡೆದಿದ್ದಾರೆ. ತುಮಕೂರಿನಲ್ಲಿ ಎಲ್ಲಾ ಕೆಲಸಗಳನ್ನು ಮಾಡಿದ್ದೇನೆ. ಹೀಗಾಗಿ ಅಲ್ಲಿ ಮುಂದೆ ಚುನಾವಣೆಗೆ ಸ್ಪರ್ಧಿಸೋದಿಲ್ಲ ಅಂತಾ ಹೇಳಿದ್ದೀನಿ. ಇನ್ನು ಮುಂದೆ ಬೇರೆ ಕಡೆಗೆ ಹೋಗೋಣ ಅಂತಾ. ಎಲ್ಲಿ ಅಂತಾ ನಿರ್ಧಾರ ಆಗಿಲ್ಲ. ದೇವರ ಆಶೀರ್ವಾದ, ದೇವರ ಇಚ್ಚೆ ಏನಿದೆಯೋ ಗೊತ್ತಿಲ್ಲ. ಅಭಿವೃದ್ಧಿ ವಿಚಾರದಲ್ಲಿ ರಾಜ್ಯ ಸರ್ಕಾರಕ್ಕೆ ಇಚ್ಛಾಶಕ್ತಿಯ ಕೊರತೆ ಇದೆ. ಎಷ್ಟು ದಿನ ಆಡಳಿತ ಮಾಡ್ತಿರೋ ಗೊತ್ತಿಲ್ಲ. ಸರ್ಕಾರ ಜನರ ಕೆಲಸ ಮಾಡಲಿ. ಕೇಂದ್ರದ ಯೋಜನೆಗಳ ಅನುಷ್ಠಾನಕ್ಕೆ ನಮ್ಮ ಜೊತೆ ಕುಳಿತು ಚರ್ಚೆ ಮಾಡಲಿ. ನಾನೇ ಸಭೆಯ ಬಗ್ಗೆ ಆಸಕ್ತಿ ತೆಗೆದುಕೊಳ್ತೀನಿ ಎಂದರು.

**ಸೆಪ್ಟೆಂಬರ್ 22 ರಿಂದ ಹೊಸ ಜಿಎಸ್‌ಟಿ ಸ್ಲ್ಯಾಬ್ ನಿಗದಿ ವಿಚಾರ**

ನರೇಂದ್ರಮೋದಿ ಪ್ರಧಾನಿಯಾಗಿ 12 ವರ್ಷ ತುಂಬುತ್ತಿರುವ ವೇಳೆಯಲ್ಲಿ ದೇಶದ ಜನರಿಗೆ ನೀಡಿರುವ ಗಿಫ್ಟ್ ಇದು. ಜನರ ಅನುಕೂಲಕ್ಕಾಗಿ ಜಿಎಸ್‌ಟಿಗೆ ಗಣನೀಯವಾಗಿ ಸುಧಾರಣೆ ತರಲಾಗಿದೆ. ಇದು ಯಾವುದೇ ಚುನಾವಣೆಯನ್ನು ಮುಂದಿಟ್ಟುಕೊಂಡು ಮಾಡಿರುವ ಕ್ರಮ ಅಲ್ಲ. ಚುನಾವಣೆಗಳು ಬರುತ್ತವೆ, ಹೋಗುತ್ತವೆ. ಜನರ ಅನುಕೂಲಕ್ಕಾಗಿ ಹೊಸ ನೀತಿ ಮಾಡಲಾಗುತ್ತಿದೆ. ಇದಕ್ಕಾಗಿ ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಹಗಲಿರುಳು ಶ್ರಮಿಸುತ್ತಿದ್ದಾರೆ. ಹೊಸ ಜಿಎಸ್‌ಟಿ ನೀತಿಯಿಂದ ರಾಜ್ಯಕ್ಕೆ ನಷ್ಟವಾಗಲಿದೆ ಎಂದು ಸಚಿವ ಕೃಷ್ಣಭೈರೇಗೌಡ ಹೇಳಿಕೆ ವಿಚಾರವಾಗಿ, ನಾವು ಯಾವುದೇ ರಾಜ್ಯವನ್ನು ಟಾರ್ಗೆಟ್ ಮಾಡಿಲ್ಲ. ಜಿಎಸ್‌ಟಿ ಸಭೆಗಳು ಮುಂದುವರೆದಿವೆ. ಇನ್ನು ಎರಡು, ಮೂರು ದಿನದಲ್ಲಿ ಜಿಎಸ್‌ಟಿ ಯ ಸಂಪೂರ್ಣ ಮಾಹಿತಿ ಸಿಗಲಿದೆ ಎಂದರು.

**ಧರ್ಮಸ್ಥಳ ವಿಚಾರ:** ಸುಳ್ಳನ್ನು ಸಾವಿರ ಬಾರಿ ಹೇಳಿದರೂ ಅದು ಸುಳ್ಳೇ ಎಂಬುದು ಧರ್ಮಸ್ಥಳ ವಿಚಾರದಲ್ಲಿ ಸಾಬೀತಾಗಿದೆ. ಬಾಲಂಗೋಚಿಗಳು, ಎಡಪಂಥೀಯರ ಮಾತಿಗೆ ಸರ್ಕಾರ ಇನ್ನು ಮುಂದೆ ಬಲಿ ಆಗಬಾರದು. ಸರ್ಕಾರ ತಾನು ಮಾಡಿದ ತಪ್ಪನ್ನು ಈಗಲಾದರೂ ಅರಿತು ಕೊಳ್ಳಲಿ ಎಂದರು.


ದೇಶ ಇದ್ದರೆ ಮಾತ್ರ ನಾವು ಉಳಿಯುತ್ತೇವೆ, ನಮ್ಮ ಸಂಸ್ಕೃತಿಯನ್ನು ಉಳಿಸಿ ಬೆಳೆಸಬೇಕು ವಿಚ್ಛಿದ್ರಕಾರಿ ಶಕ್ತಿಗಳು ದೇಶವನ್ನು ಅಸ್ಥಿರಗೊಳಿಸಲು ಯತ್ನಿಸುತ್ತಿವೆ. ಪೆಹಲ್ಗಾಮ್ ನಲ್ಲಿ ನಡೆದ ಉಗ್ರರ ದಾಳಿಯೇ ಇದಕ್ಕೆ ಸಾಕ್ಷಿಯಾಗಿದೆ. ವಿಚ್ಛಿದ್ರಕಾರಿ ಶಕ್ತಿಗಳನ್ನು ಮಟ್ಟಹಾಕುವ ಕೆಲಸವನ್ನು ಕೇಂದ್ರ ಸರ್ಕಾರ ಮಾಡುತ್ತಿದೆ. ದೇಶದ ಅಭಿವೃದ್ಧಿ, ಬೆಳವಣಿಗೆಯಲ್ಲಿ ಮಠ ಮಾನ್ಯಗಳ ಪಾತ್ರ ಪ್ರಮುಖವಾಗಿದೆ. ಹರಗುರು ಚರಮೂರ್ತಿಗಳ ಕೊಡುಗೆ ಅಪಾರವಾದುದು ಎಂದರು.

## ಆಸ್ತಿಗಾಗಿ ಅಪ್ಪನನ್ನೇ ಟ್ರ್ಯಾಪ್ ಮಾಡಲು ಹೋಗಿ ತಗ್ಲಾಕೊಂಡ ಮಗ

• **ಉದಯವಾಹಿನಿ, ಮಂಡ್ಯ**

ಜಿಲ್ಲೆಯ ಮದ್ದೂರು ಪಟ್ಟಣದಲ್ಲಿ ಆಸ್ತಿಗಾಗಿ ಜನ್ಮಕೊಟ್ಟ ಅಪ್ಪನಿಗೆ ಖೆಡ್ಡಾ ತೋಡಿದ್ದ ಕುಲಪುತ್ರ ಸಿಕ್ಕಿಬಿದ್ದಿರುವ ವಿಚಿತ್ರ ಪ್ರಕರಣ ನಡೆದಿದೆ. ತಂದೆಯ ಕೋಟ್ಯಂತರ ರೂಪಾಯಿ ಆಸ್ತಿಯ ದುರಾಸೆಗೆ ಬಿದ್ದ ಕಿರಾತಕ ಮಗ, ತನ್ನ ವಿರೋಧಿಗಳ ಜೊತೆಗೂಡಿ ತಂದೆಗೆ ಬೆದರಿಕೆ ಹಾಕಿದ್ದಾನೆ. ಇನ್ನು ಈ ಪ್ರಕರಣದಲ್ಲಿ ಮಗ ಸೇರಿದಂತೆ ನಾಲ್ವರು ಆರೋಪಿಗಳನ್ನು ಮದ್ದೂರು ಪೊಲೀಸರು ಬಂಧಿಸಿ ಜೈಲಿಗಟ್ಟಿದ್ದಾರೆ. ಮಗ ಪ್ರಣಬ್ ಹಾಗೂ ಮಹೇಶ, ಈಶ್ವರ್, ಪ್ರೀತಮ್ ಬಂಧಿತ ಆರೋಪಿಗಳು.

ಮದ್ದೂರಿನ ರಿಯಲ್ ಎಸ್ಟೇಟ್ ಉದ್ಯಮಿ ಆಗಿರುವ ಸತೀಶ್, ಮದ್ದೂರು ಸೇರಿದಂತೆ ರಾಜ್ಯದ ಹಲವೆಡೆ ರಾಣಿ ಐಶ್ವರ್ಯ ಡೆವಲಪರ್ಸ್ ಹೆಸರಲ್ಲಿ ರಿಯಲ್ ಎಸ್ಟೇಟ್ ಉದ್ಯಮ ನಡೆಸುತ್ತಿದ್ದಾರೆ. ಆದ್ರೆ ತಂದೆ ಮಗ ಪ್ರಣವ್ ತಂದೆ ಜೊತೆಗೆ ಆಸ್ತಿ ವಿಚಾರದಲ್ಲಿ ಕಿರಿಕ್ ಮಾಡಿಕೊಂಡಿದ್ದ. ಈಗಾಗಲೇ ತಂದೆಯ ಕೋಟ್ಯಂತರ ರೂಪಾಯಿ ಲಾಸ್ ಮಾಡಿದ್ದಲ್ಲದೇ ಮತ್ತೆ ಹಣಕ್ಕೆ ಬೇಡಿಕೆಯಿಟ್ಟಿದ್ದ. ತಂದೆ ಹಣ ಕೊಡದೇ ಇದ್ದಾಗ ಬ್ಲ್ಯಾಕ್‌ಮೇಲ್ ತಂತ್ರ ಹೂಡಲು ಮುಂದಾಗಿದ್ದ ಮಗ ಪ್ರಣವ್. ದುಶ್ಚಟಗಳಿಗೆ ಬಲಿಯಾಗಿ ವಿರೋಧಿಗಳ ಜೊತೆ ಸೇರಿ ಆಸ್ತಿಗಾಗಿ ತಂದೆಯನ್ನೇ ಬ್ಲ್ಯಾಕ್ ಮೇಲ್ ಮಾಡೋಕೆ ಮುಂದಾಗಿದ್ದಾನೆ. ಹಣ ಕೊಡದ ತಂದೆಗೆ ಬುದ್ಧಿ ಕಲಿಸಲು ಕೆಲವರ ಜೊತೆ ಸೇರಿ ಅಪ್ಪನಿಗೆ ಖೆಡ್ಡಾ ತೋಡಿದ್ದಾನೆ. ಅಪ್ಪನ ಭಾವಚಿತ್ರಕ್ಕೆ ಅಶ್ಲೀಲ ಫೋಟೋ ಹಾಗೂ ವಾಯ್ಸ್ ಎಡಿಟ್ ಮಾಡಿ, ವಾಟ್ಸಪ್ ಗ್ರೂಪ್‌ಗೆ ಶೇರ್ ಮಾಡಿದ್ದಾನೆ. ಈ ರೀತಿಯ ಕೃತ್ಯದ ಮೂಲಕ ತಂದೆಯನ್ನ ಮಾನಸಿಕವಾಗಿ ಕುಗ್ಗಿಸಿ, ಆಸ್ತಿಯನ್ನ ಲಪಟಾಯಿಸಲು ಯತ್ನಿಸಿದ್ದಾನೆ ಎನ್ನಲಾಗಿದೆ.



☛ ಉದಯವಾಹಿನಿ ಚಿತ್ರ

ಇದರಿಂದ ರೊಚ್ಚಿಗೆದ್ದ ತಂದೆ ಮದ್ದೂರು ಪೊಲೀಸ್ ಠಾಣೆಗೆ ದೂರು ನೀಡಿದ್ದಾರೆ. ಮಗ ಸೇರಿದಂತೆ ಕೃತ್ಯಕ್ಕೆ ಪ್ರಚೋದಿಸಿದವರ ವಿರುದ್ಧವೂ ದೂರು ನೀಡಿದ್ದರು. ಉದ್ಯಮಿ ಸತೀಶ್ ದೂರಿನ ಮೇರೆಗೆ ತನಿಖೆ ಕೈಗೊಂಡಿದ್ದ ಪೊಲೀಸರು ಮಗ ಪ್ರಣಬ್ ಸೇರಿ ಮಹೇಶ, ಈಶ್ವರ್, ಪ್ರೀತಮ್ ಎಂಬ ನಾಲ್ವರನ್ನ ಬಂಧಿಸಿದ್ದಾರೆ. ಸದ್ಯ ಆರೋಪಿಗಳಿಗೆ ನ್ಯಾಯಾಂಗ ಬಂಧನ ವಿಧಿಸಿ ಕೋರ್ಟ್ ಆದೇಶಿಸಿದೆ.

## ತಲಾದಾಯ ಹೆಚ್ಚಳಕ್ಕೆ ಗ್ಯಾರಂಟಿ ಕಾರಣ: ಎಚ್.ಎಂ.ರೇವಣ್ಣ

• **ಉದಯವಾಹಿನಿ, ಚಿಕ್ಕಬಳ್ಳಾಪುರ**

ದೇಶದಲ್ಲಿಯೇ ಅತಿ ಹೆಚ್ಚಿನ ತಲಾದಾಯ ಹೊಂದಿರುವ ರಾಜ್ಯ ಕರ್ನಾಟಕ. ಹೀಗೆ ತಲಾದಾಯ ಹೆಚ್ಚಳವಾಗಲು ರಾಜ್ಯ ಸರ್ಕಾರ ಜಾರಿಗೊಳಿಸಿರುವ ಗ್ಯಾರಂಟಿ ಯೋಜನೆಗಳೇ ಕಾರಣ ಎಂದು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ರಾಜ್ಯ ಅಧ್ಯಕ್ಷ ಎಚ್.ಎಂ. ರೇವಣ್ಣ ತಿಳಿಸಿದರು. ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಸಹಯೋಗದಲ್ಲಿ ಜಿಲ್ಲಾಡಳಿತ ಭವನ ಸಭಾಂಗಣದಲ್ಲಿ ನಡೆದ ಗ್ಯಾರಂಟಿ ಯೋಜನೆ ಕುರಿತ ಕಾರ್ಯಾಗಾರಕ್ಕೆ ಚಾಲನೆ ನೀಡಿ ಮಾತನಾಡಿದರು.

ದೇಶದಲ್ಲಿ ಹೆಚ್ಚು ಜಿಎಸ್‌ಟಿ ಸಂಗ್ರಹಿಸಿ ಕೊಡುವ ಎರಡನೇ ರಾಜ್ಯ ಕರ್ನಾಟಕ. ಈ ಎಲ್ಲಾ ಸಾಧನೆಗೆ ಗ್ಯಾರಂಟಿ ಯೋಜನೆಗಳಿಂದ ಆಗುತ್ತಿರುವ ಆರ್ಥಿಕ ಸಂಚಾರವೇ ಕಾರಣ. ಜನರಲ್ಲಿ ಆರ್ಥಿಕ ಚೈತನ್ಯ ಹೆಚ್ಚಿಸಿ ಉತ್ತಮ ಬದುಕಿಗೆ ಕಾರಣವಾಗುತ್ತಿದೆ ಎಂದರು. ಯೋಜನೆಗಳು ಯಶಸ್ವಿಯಾಗಿ ಮುಂದುವರೆದಿವೆ. ಬಡವರು, ಮಧ್ಯಮ ವರ್ಗದ ಜನರ ಕುರಿತು ಸರ್ಕಾರದ ಕಳಕಳಿಗೆ ಇದು ಕನ್ನಡಿಯಾಗಿವೆ. ವಿರೋಧ ಪಕ್ಷಗಳ ನಾಯಕರು ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸಲು ಸಾಧ್ಯವಿಲ್ಲ ಎಂದು ಹೇಳಿದರು. ಆದರೆ ಈಗ ನಮ್ಮ ಸರ್ಕಾರದ ಮಾದರಿಯನ್ನೇ ಅವರು ಬೇರೆ ಕಡೆಗಳಲ್ಲಿ ಅನುಸರಿಸುತ್ತಿದ್ದಾರೆ ಎಂದರು. ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಂ.ಸಿ. ಸುಧಾಕರ್ ಮಾತನಾಡಿ, ಯಾವುದೇ ಮಧ್ಯವರ್ತಿಗಳ ಹಾವಳಿ ಇಲ್ಲದೆ, ಭ್ರಷ್ಟಾಚಾರ ಇಲ್ಲದೆ ಯಾವುದಾದರು ಯೋಜನೆಗಳು ದೇಶದಲ್ಲಿ ಬಡವರು, ಮಧ್ಯಮ ವರ್ಗದವರಿಗೆ ತಲುಪಿವೆ ಎಂದರೆ ಅವು ರಾಜ್ಯದ ಗ್ಯಾರಂಟಿ ಯೋಜನೆಗಳು ಎಂದರು.


☛ ಉದಯವಾಹಿನಿ ಚಿತ್ರ

ಬಿಜೆಪಿ ನಾಯಕರು ಗ್ಯಾರಂಟಿ ಯೋಜನೆಗಳ ಕುರಿತು ವಿಧಾನಸಭೆ ಚುನಾವಣೆ ಸಮಯದಲ್ಲಿ ಸುಳ್ಳುಗಳನ್ನು ಹೇಳಿದರು. ಲೋಕಸಭೆ ಚುನಾವಣೆ ನಂತರ ಯೋಜನೆಗಳನ್ನು ಸ್ಥಗಿತಗೊಳಿಸಲಾಗುತ್ತದೆ ಎಂದರು. ಆದರೆ ಈ ಯಾವ ಕೆಲಸಗಳು ಆಗಲಿಲ್ಲ. ಪಕ್ಷಾತೀತ, ಜಾತ್ಯತೀತವಾಗಿ ಯೋಜನೆಗಳನ್ನು ನೀಡಲಾಗಿದೆ ಎಂದರು. ಕೇವಲ ಗ್ಯಾರಂಟಿ ಯೋಜನೆಗಳಿಗೆ ಅಷ್ಟೇ ಅಲ್ಲದೆ ಅಭಿವೃದ್ಧಿ ಕಾರ್ಯಗಳಿಗೂ ಹಣ ವೆಚ್ಚ ಮಾಡಲಾಗಿದೆ. ಈ ವರ್ಷ 4 ಲಕ್ಷ ಕೋಟಿಗೂ ಅಧಿಕ ಬಜೆಟ್ ಮಂಡಿಸಿ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ ಎಂದರು.

> **ಮುಖ್ಯವಾಗಿ ಮಹಿಳಾ ಸಬಲೀಕರಣದಲ್ಲಿ ಮಹತ್ತರ ಪಾತ್ರ ವಹಿಸುತ್ತಿವೆ. ರಾಜ್ಯ ಸರ್ಕಾರದ ಗ್ಯಾರಂಟಿ ಯೋಜನೆಗಳು ದೇಶದ ಗಮನ ಸೆಳೆಯುತ್ತಿವೆ. ಅದರಲ್ಲೂ ಮಹಿಳೆಯರು ಸರ್ಕಾರಿ ಬಸ್‌ಗಳಲ್ಲಿ ಉಚಿತವಾಗಿ ಪ್ರಯಾಣ ಮಾಡಲು ಅವಕಾಶ ಒದಗಿಸಿಕೊಟ್ಟಿರುವ ಶಕ್ತಿ ಯೋಜನೆ ಅಂತರರಾಷ್ಟ್ರೀಯ ಮಟ್ಟದಲ್ಲಿ ಗಮನ ಸೆಳೆದಿದೆ ಎಂದು ಹೇಳಿದರು.**

ಮುಂದಿನ ತಿಂಗಳು ಶಿಡ್ಲಘಟ್ಟ ಹೈಟೆಕ್ ರೇಷ್ಮೆ ಮಾರುಕಟ್ಟೆ ನಿರ್ಮಾಣ ಮತ್ತು ಚಿಕ್ಕಬಳ್ಳಾಪುರದಲ್ಲಿ ಅಂತರರಾಷ್ಟ್ರೀಯ ಹೂವಿನ ಮಾರುಕಟ್ಟೆಗೆ ಮುಖ್ಯಮಂತ್ರಿ ಶಂಕುಸ್ಥಾಪನೆ ನೆರವೇರಿಸುವರು ಎಂದು ತಿಳಿಸಿದರು.

ಗ್ಯಾರಂಟಿ ಯೋಜನೆಗಳ ರಾಜ್ಯ ಉಪಾಧ್ಯಕ್ಷ ಸೂರಜ್ ಹೆಗ್ಗಡೆ ಮಾತನಾಡಿ, ಗ್ಯಾರಂಟಿ ಯೋಜನೆಗಳು ಮಹಿಳೆಯರಿಗೆ ಅನುಕೂಲವಾಗಿದ್ದರೆ ಅದರ ಬಹಿರಂಗವಾಗಿ, ಮುಕ್ತವಾಗಿ ಹೇಳಿಕೊಳ್ಳಿ. ಆಗ ಇಂತಹ ಮಹೋನ್ನತ ಯೋಜನೆಗಳು ಯಾವುದೇ ತೊಡಕಿಲ್ಲದೆ ಮುಂದುವರಿಯಲು ಅನುಕೂಲ ಆಗುತ್ತದೆ. ಸರ್ಕಾರಕ್ಕೆ ಸ್ಫೂರ್ತಿ ದೊರೆಯುತ್ತದೆ ಎಂದು ಫಲಾನುಭವಿಗಳಲ್ಲಿ ಮನವಿ ಮಾಡಿದರು.

## ಹೋಬಳಿಗೊಂದು ವಸತಿ ಶಾಲೆ: ಸಚಿವ ಸುಧಾಕರ್

• **ಉದಯವಾಹಿನಿ, ಚಿಂತಾಮಣಿ**

ರಾಜ್ಯ ಸರ್ಕಾರ ಹಂತ ಹಂತವಾಗಿ ಹೋಬಳಿಗೊಂದು ಸುಸಜ್ಜಿತ ವಸತಿ ಶಾಲೆ ಮತ್ತು ಕೆಪಿಎಸ್ ಶಾಲೆಗಳನ್ನು ಸ್ಥಾಪಿಸುವ ಗುರಿ ಹೊಂದಿದೆ ಎಂದು ಉನ್ನತ ಶಿಕ್ಷಣ ಸಚಿವ ಡಾ.ಎಂ.ಸಿ.ಸುಧಾಕರ್ ಹೇಳಿದರು. ತಾಲ್ಲೂಕಿನ ಕೆ.ರಾಗುಟ್ಟಹಳ್ಳಿ ಗ್ರಾಮದಲ್ಲಿರುವ ಕಿತ್ತೂರುರಾಣಿ ಚನ್ನಮ್ಮ ವಸತಿ ಶಾಲೆಯಲ್ಲಿ ಪಿಯುಸಿ ತರಗತಿ ಉದ್ಘಾಟಿಸಿ ಮಾತನಾಡಿದರು. ಸರ್ಕಾರ ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ನೀಡುತ್ತಿದ್ದು ಎಲ್ಲಾ ವಸತಿ ಶಾಲೆಗಳಲ್ಲಿ ಪಿಯುಸಿ ತರಗತಿ ಆರಂಭಿಸಲಾಗುವುದು. ಅಗತ್ಯವಾದ ತರಗತಿ ಕೊಠಡಿ ಮತ್ತಿತರ ಸೌಲಭ್ಯ ಒದಗಿಸಲಾಗುವುದು. ಇದರ ಜತೆಗೆ ಹೋಬಳಿಗೊಂದು ಕೆಪಿಎಸ್ ಶಾಲೆಯನ್ನು ತೆರೆಯುವ ಚಿಂತನೆ ಇದೆ. ಈ ವರ್ಷ 500 ಕರ್ನಾಟಕ ಪಬ್ಲಿಕ್ ಶಾಲೆಗಳನ್ನು ಸ್ಥಾಪಿಸುವ ಚಿಂತನೆ ಇದೆ. ಕೆಪಿಎಸ್ ಶಾಲೆ ಆರಂಭಿಸಬೇಕಾದರೆ ಕನಿಷ್ಠ 300 ವಿದ್ಯಾರ್ಥಿಗಳಿರಬೇಕು ಎಂದರು. ಕೆಪಿಎಸ್ ಶಾಲೆಗಳಲ್ಲಿ ಕನ್ನಡ ಮತ್ತು ಆಂಗ್ಲ ಮಾಧ್ಯಮದಲ್ಲಿ ಬೋಧನೆ ಮಾಡುವುದರಿಂದ ಮಕ್ಕಳ ಶೈಕ್ಷಣಿಕ ಗುಣಮಟ್ಟ ಹೆಚ್ಚಾಗಲಿದೆ. ಎಲ್‌ಕೆಜಿ, ಯುಕೆಜಿಯಿಂದ ಪಿಯುಸಿವರೆಗೂ ಒಂದೇ ಸೂರಿನಲ್ಲಿ ಗುಣಮಟ್ಟದ ಶಿಕ್ಷಣ ನೀಡಬೇಕು ಎಂಬುದು ಸರ್ಕಾರದ ಗುರಿಯಾಗಿದೆ. ವಿಪರ್ಯಾಸ ಎಂದರೆ ಕೆಪಿಎಸ್ ಶಾಲೆಗಳನ್ನು ತೆರೆಯಲು ಅಗತ್ಯವಾದ ವಿದ್ಯಾರ್ಥಿಗಳ ಸಂಖ್ಯೆ ದೊರೆಯುತ್ತಿಲ್ಲ. ಚಿಂತಾಮಣಿ ವಿಧಾನಸಭಾ ಕ್ಷೇತ್ರದಲ್ಲಿ 2-3 ಕೆಪಿಎಸ್ ಶಾಲೆಗಳನ್ನು ಸ್ಥಾಪಿಸಲು ಚಿಂತನೆ ಇದೆ. ನಗರದ ಸರ್ಕಾರಿ ಬಾಲಕಿಯರ ಪ್ರೌಢಶಾಲೆಯಲ್ಲಿ ಮಾತ್ರ 300ಕ್ಕಿಂತ ಹೆಚ್ಚು ವಿದ್ಯಾರ್ಥಿಗಳಿದ್ದಾರೆ ಎಂದರು.


☛ ಉದಯವಾಹಿನಿ ಚಿತ್ರ

ಸರ್ಕಾರದ ನೀತಿಯನ್ನು ಸಡಿಲಗೊಳಿಸಿ ಕನಿಷ್ಠ 250ಕ್ಕಿಂತ ಹೆಚ್ಚು ವಿದ್ಯಾರ್ಥಿಗಳಿರುವ ಕಡೆ ಕೆಪಿಎಸ್ ಶಾಲೆ ತೆರೆಯಲು ಪ್ರಯತ್ನಿಸುತ್ತೇನೆ. ತಾಲ್ಲೂಕಿನ ಯಗವಕೋಟೆಯಲ್ಲಿ 230, ಬಟ್ಲಹಳ್ಳಿಯಲ್ಲಿ 250 ವಿದ್ಯಾರ್ಥಿಗಳಿದ್ದಾರೆ. ಬಟ್ಲಹಳ್ಳಿಯಲ್ಲಿ ಪಿಯುಸಿ ಕಾಲೇಜು ಇದೆ. ಯಗವಕೋಟೆಯಲ್ಲಿ ಕೆಪಿಎಸ್ ಶಾಲೆ ಪ್ರಾರಂಭಿಸಲು ಆದ್ಯತೆ ನೀಡಲಾಗುವುದು ಎಂದರು.

ಅಂಬಾಜಿದುರ್ಗ ಹೋಬಳಿಯ ಕೆ.ರಾಗುಟ್ಟಹಳ್ಳಿಯಲ್ಲಿ ಕಿತ್ತೂರು ರಾಣಿ ಚನ್ನಮ್ಮ ಶಾಲೆ ಇದೆ. ಮುಂಗಾನಹಳ್ಳಿ ಹೋಬಳಿಯ ಕೋನಕುಂಟ್ಲು ಗ್ರಾಮದಲ್ಲಿ 22 ಕೋಟಿ ವೆಚ್ಚದಲ್ಲಿ ಬಿ.ಆರ್.ಅಂಬೇಡ್ಕರ್ ವಸತಿ ಶಾಲೆಯ ಕಾಮಗಾರಿ ಪ್ರಗತಿಯಲ್ಲಿದೆ. ಮುರುಗಮಲ್ಲ ಹೋಬಳಿಯ ಮುರುಗಮಲ್ಲ ಗ್ರಾಮದ ಬಳಿ ಪರಿಶಿಷ್ಟ ವರ್ಗ ವಸತಿ ಶಾಲೆಯನ್ನು 22 ಕೋಟಿ ವೆಚ್ಚದಲ್ಲಿ ನಿರ್ಮಿಸಲು 10 ಎಕರೆ ಜಮೀನನ್ನು ಮಂಜೂರು ಮಾಡಿಸಿದ್ದೇನೆ. ಕೈವಾರ ಹೋಬಳಿಯ ಕೈವಾರದಲ್ಲಿ ಬಿ.ಆರ್.ಅಂಬೇಡ್ಕರ್ ವಸತಿ ಶಾಲೆ ಮಂಜೂರಾಗಿದೆ. ವಸತಿಶಾಲೆಗಳು ಈಗಾಗಲೇ ಆರಂಭವಾಗಿದ್ದು ತಾತ್ಕಾಲಿಕವಾಗಿ ಬೇರೆ ಕಡೆ ಕಾರ್ಯಾರಂಭ ಮಾಡಿವೆ ಎಂದರು.

## ಸ್ವಾವಲಂಬನೆಗೆ ಸ್ವರಾಜ್ ಉತ್ಸವ ಸೆ.13ಕ್ಕೆ: ಶಾಸಕ

• **ಉದಯವಾಹಿನಿ, ಪಾಂಡವಪುರ**

ಗ್ರಾಮೀಣ ಜನರು ಸ್ವಾವಲಂಬಿ ಜೀವನವನ್ನು ಮಾಡಬೇಕು ಎಂಬ ಉದ್ದೇಶದಿಂದ ಸೆ13ರಂದು ಸ್ವರಾಜ್ ಉತ್ಸವ ಆಯೋಜಿಸಲಾಗಿದೆ ಎಂದು ಶಾಸಕ ದರ್ಶನ್ ಪುಟ್ಟಣ್ಣಯ್ಯ ತಿಳಿಸಿದರು. ಪಟ್ಟಣದ ಟಿಎಪಿಸಿಎಂಎಸ್ ರೈತ ಸಭಾಂಗಣದಲ್ಲಿ ನಡೆದ ರೈತ ಸಂಘ ಕಾರ್ಯಕರ್ತರ ಸಭೆಯಲ್ಲಿ ಮಾತನಾಡಿದ ಅವರು, ರೈತ ನಾಯಕ ಕೆ.ಎಸ್.ಪುಟ್ಟಣ್ಣಯ್ಯ ಫೌಂಡೇಷನ್‌ನಿಂದ ಪಟ್ಟಣದ ಪಾಂಡವ ಕ್ರೀಡಾಂಗಣದಲ್ಲಿ ಕಾರ್ಯಕ್ರಮ ಆಯೋಜಿಸಿದ್ದು, ರಾಜ್ಯದ ವಿವಿಧ ಭಾಗಗಳ ಸುಮಾರು 25 ಸರ್ಕಾರೇತರ ಸಂಸ್ಥೆಗಳು ಕೈಜೋಡಿಸಲಿವೆ ಎಂದರು.

ಸ್ವರಾಜ್ ಉತ್ಸವದಲ್ಲಿ ಮುಖ್ಯವಾಗಿ ಶಿಕ್ಷಣ, ಆರೋಗ್ಯ, ಕೃಷಿ, ಯುವ ಜನತೆ, ಆರ್ಥಿಕತೆ, ಪ್ರವಾಸೋದ್ಯಮ, ಪರಿಸರ, ವಿಜ್ಞಾನ, ಹವಮಾನ ವೈಪರೀತ್ಯ ಸೇರಿದಂತೆ ಪ್ರಮುಖವಾಗಿ 12 ಅಂಶಗಳನ್ನು ಒಳಗೊಂಡಂತೆ ಚರ್ಚೆ ನಡೆಸಿ ಅರಿವು ಮೂಡಿಸಲಾಗುವುದು ಉತ್ಸವದಲ್ಲಿ ಭಾಗವಹಿಸುವ ಜನರು ತಮ್ಮ ಆಸಕ್ತಿಗೆ ಅನುಗುಣವಾಗಿ ಯಾವುದಾರೊಂದು ಕ್ಷೇತ್ರವನ್ನು ಆಯ್ಕೆಮಾಡಿಕೊಂಡು ತಮ್ಮನ್ನು ತೊಡಗಿಸಿಕೊಂಡು ಸ್ವಾವಲಂಬಿಗಳಾಗಬೇಕು ಎಂದು ಹೇಳಿದರು.


☛ ಉದಯವಾಹಿನಿ ಚಿತ್ರ

> **ಇದುವರೆಗೂ ಚಳವಳಿ, ಹೋರಾಟ ಮಾಡಿ ರೈತರ ಹಿತಕಾಯುತ್ತಿದ್ದೇವೆ. ಆದರೆ, ಹೋರಾಟದ ಜತೆಗೆ ರಚನಾತ್ಮಕ ಕಾರ್ಯಕ್ರಮಗಳನ್ನು ರೂಪಿಸಬೇಕಿದೆ. ಈ ನಿಟ್ಟಿನಲ್ಲಿ ಪುಟ್ಟಣ್ಣಯ್ಯ ಫೌಂಡೇಷನ್ ವತಿಯಿಂದ ಸ್ವರಾಜ ಉತ್ಸವ ನಡೆಸಿ ನಮ್ಮ ಹಳ್ಳಿಗಳು ಸ್ವಾವಲಂಬನೆಯಾಗಿ ಬದುಕುವಂತೆ ಮಾಡುವ ಪ್ರಯತ್ನ ಮಾಡುತ್ತಿದ್ದೇವೆ ಎಂದರು.**

## ಅಭಿವೃದ್ಧಿಗೆ ಸಹಕಾರ ಕ್ಷೇತ್ರದ ಕೊಡುಗೆ ಅಪಾರ

• **ಉದಯವಾಹಿನಿ, ಕುಶಾಲನಗರ**

ದೇಶದ ಅಭಿವೃದ್ಧಿಯಲ್ಲಿ ಸಹಕಾರ ಕ್ಷೇತ್ರ ತನ್ನದೇ ಆದ ಕೊಡುಗೆ ನೀಡಿದೆ ಎಂದು ಆದಿಚುಂಚನಗಿರಿ ಮಹಾಸಂಸ್ಥಾನ ಮಠದ ನಿರ್ಮಲಾನಂದನಾಥ ಸ್ವಾಮೀಜಿ ಹೇಳಿದರು. ಪಟ್ಟಣದ ಸುಬ್ರಹ್ಮಣ್ಯ ಸ್ವಾಮಿ ದೇವಾಲಯ ಬಳಿ ನಿರ್ಮಾಣಗೊಂಡಿರುವ ನಾಡಪ್ರಭು ಪತ್ತಿನ ಸಹಕಾರ ಸಂಘದ ನೂತನ ಕಟ್ಟಡವನ್ನು ಉದ್ಘಾಟಿಸಿ, ನಂತರ ಎಪಿಸಿಎಂಎಸ್ನ ಸುವರ್ಣ ಮಹೋತ್ಸವ ಸಭಾಂಗಣದಲ್ಲಿ ಆಯೋಜಿಸಿದ್ದ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು. ಆರ್ಥಿಕ ಸಮೃದ್ಧಿ ಹೊಂದಿದ ವ್ಯಕ್ತಿಗೆ ಸಮಾಜದಲ್ಲಿ ಗೌರವ ಸಿಗುತ್ತದೆ. ಸ್ವಾತಂತ್ರ್ಯ ಪೂರ್ವ ಹಾಗೂ ನಂತರದಲ್ಲಿ ದೇಶದಲ್ಲಿ ಅನೇಕ ವ್ಯತ್ಯಾಸಗಳು ಆಗಿವೆ. ದೇಶದಲ್ಲಿ ಹಸಿರು ಕ್ರಾಂತಿ ಉಂಟಾಗಿ ನಂತರ ವಿದ್ಯಾಸಂಸ್ಥೆ ಆರಂಭಗೊಂಡವು. ಮಠಮಾನ್ಯಗಳು ಕೂಡ ಸರ್ಕಾರದೊಂದಿಗೆ ಕೈಜೋಡಿಸಿ ಅಭಿವೃದ್ಧಿಗೆ ಒತ್ತು ನೀಡಿದವು. ಇತ್ತೀಚಿನ ವರ್ಷಗಳಲ್ಲಿ ಭಾರತೀಯರು ವಿದೇಶಗಳಲ್ಲೂ ತಮ್ಮ ಪ್ರತಿಭೆ ಹಾಗೂ ಛಾಪು ಮೂಡಿಸಿದ್ದಾರೆ ಎಂದರು.


☛ ಉದಯವಾಹಿನಿ ಚಿತ್ರ

ಸಹಕಾರ ಸಂಘಗಳು ಆರಂಭಗೊಂಡ ನಂತರ ಖಾಸಗಿ ಹಣಕಾಸು ಸಂಸ್ಥೆಗಳು ಹಾಗೂ ರಾಷ್ಟ್ರೀಕೃತ ಬ್ಯಾಂಕ್ ಬಂದವು ಎಂದರು. ಬೆಂಗಳೂರಿನ ನಿರ್ಮಾತೃ ಕೆಂಪೇಗೌಡರು 64 ಪೇಟೆಗಳನ್ನು ರಚನೆ ಮಾಡಿದರು. ಅವು ಜಾತಿ, ಜನಾಂಗದ ಪೇಟೆಗಳಾಗಿ ಕಂಡುಬಂದರೂ ಕೌಶಲ ಆಧಾರವಾಗಿರುವ ಪೇಟೆ ಆಗಿದ್ದವು ಎಂದು ಹೇಳಿದರು. ಸಹಕಾರ ಸಂಘಗಳು ಆರ್ಥಿಕವಾಗಿ ಸಮೃದ್ಧಿಯಾಗಬೇಕು. ಜನರು ಬ್ಯಾಂಕ್ ಮೂಲಕ ಹಣ ಉಳಿತಾಯ ಮಾಡಬೇಕು. ಜೊತೆಗೆ ಸಾಲ ಸೌಲಭ್ಯ ಪಡೆದು ಅಭಿವೃದ್ಧಿ ಹೊಂದಬೇಕು ಎಂದು ಸಲಹೆ ನೀಡಿದರು.

## 2,500 ಕೋಟಿ ಮೊತ್ತದ ಅಭಿವೃದ್ಧಿ ಕಾಮಗಾರಿಗೆ ಸಿಎಂ ಚಾಲನೆ

• **ಉದಯವಾಹಿನಿ, ಕೋಲಾರ**

ಮಾಲೂರು ವಿಧಾನಸಭಾ ಕ್ಷೇತ್ರದಲ್ಲಿ ಸುಮಾರು 2,500 ಕೋಟಿ ಮೊತ್ತದ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ಹಾಗೂ ಶಂಕುಸ್ಥಾಪನೆ ನೆರವೇರಿಸಲು ಮುಖ್ಯಮಂತ್ರಿ ಸಿದ್ದರಾಮಯ್ಯ ಅ.30ರಂದು ಮಾಲೂರಿಗೆ ಭೇಟಿ ನೀಡಲಿದ್ದಾರೆ. ಈ ಸಂಬಂಧ ಬೆಂಗಳೂರಿನಲ್ಲಿ ಸಿದ್ದರಾಮಯ್ಯ ಅವರನ್ನು ಶಾಸಕ ಕೆ.ವೈ.ನಂಜೇಗೌಡ ಭೇಟಿಯಾಗಿ ಚರ್ಚಿಸಿದರು. ಕಾರ್ಯಕ್ರಮಕ್ಕೆ ಸಿದ್ಧತೆ ಮಾಡಿಕೊಳ್ಳುವಂತೆ ಮುಖ್ಯಮಂತ್ರಿ ಕಚೇರಿಯಿಂದ ಜಿಲ್ಲಾಡಳಿತಕ್ಕೆ ಮಾಹಿತಿ ರವಾನೆ ಕೂಡ ಆಗಿದೆ.

ಈ ಮಧ್ಯೆ, ನಂಜೇಗೌಡರು ಮಾಲೂರು ಕೈಗಾರಿಕಾ ಪ್ರದೇಶದಲ್ಲಿರುವ ವೇರ್ಗಾ ಅಟ್ಯಾಚ್ ಮೆಂಟ್ ಕಂಪನಿ ವಿಚಾರವಾಗಿ ಕಾರ್ಮಿಕ ಸಚಿವ ಸಂತೋಷ್ ಲಾಡ್ ಜೊತೆ ಸಭೆ ನಡೆಸಿದರು. ಈ ಸಭೆಯಲ್ಲಿ ಕಂಪನಿಯ ಮಾನವ ಸಂಪನ್ಮೂಲ ಅಭಿವೃದ್ಧಿ ಅಧಿಕಾರಿ, ಕಾರ್ಮಿಕ ಮುಖಂಡರು ಪಾಲ್ಗೊಂಡಿದ್ದರು. ಮಾಲೂರು ಭೇಟಿಗೆ ಸಿದ್ದರಾಮಯ್ಯ ಒಪ್ಪಿಗೆ ಸೂಚಿಸಿದ್ದು, ಸಿದ್ಧತೆ ಮಾಡಿಕೊಳ್ಳುತ್ತಿದ್ದೇವೆ. ನಾಲ್ಕುಪಥದ ಹೆದ್ದಾರಿ, ಫ್ಲೈಓವರ್ ನಿರ್ಮಾಣ ಸೇರಿದಂತೆ ಸುಮಾರು 2,500 ಕೋಟಿ ಮೊತ್ತದ ಕಾಮಗಾರಿಗಳಿಗೆ ಅಂದು ಚಾಲನೆ, ಶಂಕುಸ್ಥಾಪನೆ ನೆರವೇರಿಸಲಿದ್ದಾರೆ ಎಂದರು.


☛ ಉದಯವಾಹಿನಿ ಚಿತ್ರ

ಅಂದು ಕ್ಷೇತ್ರದಲ್ಲಿ ಹಕ್ಕು ಪತ್ರ ವಿತರಣೆ ಮಾಡುವ ಕಾರ್ಯಕ್ರಮ ಆಯೋಜನೆ ಮಾಡಲಾಗುತ್ತಿದೆ. ಮಾಲೂರು ನಗರದಲ್ಲಿ ನಿವೇಶನ ರಹಿತ ಒಂದು ಸಾವಿರ ಮಂದಿಯನ್ನು ಗುರುತಿಸಲಾಗಿದೆ. 28 ಗ್ರಾಮ ಪಂಚಾಯಿತಿಗಳಿದ್ದು, 8 ಸಾವಿರ ಜನರಿಗೆ ನಿವೇಶನ ಹಕ್ಕುಪತ್ರ ವಿತರಿಸಲಾಗುವುದು. ಇ-ಖಾತಾ ಅಭಿಯಾನ ಹಮ್ಮಿಕೊಳ್ಳಲಾಗುವುದು. ಫಲಾನುಭವಿಗಳಿಗೆ ಸೌಲಭ್ಯ ವಿತರಣೆಯೂ ನಡೆಯಲಿದೆ ಎಂದು ವಿವರಿಸಿದರು.

> **ಕೆಲಸದಿಂದ ತೆಗೆದಿರುವ 81 ಕಾಯಂ ನೌಕರರನ್ನು ವಾಪಸ್ ಕೆಲಸಕ್ಕೆ ಸೇರಿಸಿಕೊಳ್ಳಬೇಕೆಂದು ಕಂಪನಿಗೆ ಸೂಚನೆ ನೀಡಿದ್ದೇವೆ. ಸಭೆಗೆ ಕಂಪನಿಯ ಮಾಲೀಕರು ಬಂದಿರಲಿಲ್ಲ. ಮಾಲೀಕರ ಜೊತೆ ಮಾತನಾಡಿ ಕ್ರಮ ವಹಿಸುವುದಾಗಿ ಎಚ್‌ಆರ್ ಅಧಿಕಾರಿ ಹೇಳಿದ್ದಾರೆ. ನಾವು ಈ ಸಂಬಂಧ ಬೇಗನೇ ನಿರ್ಧಾರ ತಿಳಿಸುವಂತೆ ಹೇಳಿದ್ದೇವೆ**
> **- ಕೆ.ವೈ. ನಂಜೇಗೌಡ , ಶಾಸಕ**

### ಸಚಿವ ಸ್ಥಾನ ಕಳೆದುಕೊಂಡರೂ ಕುಗ್ಗದ ರಾಜಣ್ಣ, ತುಮಕೂರು ಡಿಸಿಸಿ ಬ್ಯಾಂಕ್‌ಗೆ 7ನೇ ಬಾರಿಗೆ ಅಧ್ಯಕ್ಷರಾಗಿ ಆಯ್ಕೆ

# ಈ ಚುನಾವಣೆ ರಾಜಣ್ಣ ಅವರಿಗೆ ಪ್ರತಿಷ್ಠೆಯ ವಿಷಯ

• **ಉದಯವಾಹಿನಿ, ತುಮಕೂರು**

ಇತ್ತೀಚೆಗಷ್ಟೇ ಸಚಿವ ಸಂಪುಟದಿಂದ ನಿರ್ಗಮಿಸಿದ್ದ ಹಿರಿಯ ರಾಜಕಾರಣಿ ಕೆ.ಎನ್. ರಾಜಣ್ಣ, ತಮ್ಮ ರಾಜಕೀಯ ಪ್ರಾಬಲ್ಯ ಕುಗ್ಗಿಲ್ಲ ಎಂಬುದನ್ನು ಮತ್ತೊಮ್ಮೆ ಸಾಬೀತುಪಡಿಸಿದ್ದಾರೆ.

ತುಮಕೂರು ಜಿಲ್ಲಾ ಕೇಂದ್ರ ಸಹಕಾರಿ ಬ್ಯಾಂಕ್ ಅಧ್ಯಕ್ಷ ಸ್ಥಾನಕ್ಕೆ ಗುರುವಾರ ನಡೆದ ಚುನಾವಣೆಯಲ್ಲಿ ಅವರು ಸತತ 7ನೇ ಬಾರಿಗೆ ಅವಿರೋಧವಾಗಿ ಆಯ್ಕೆಯಾಗಿದ್ದಾರೆ. ಈ ಮೂಲಕ ಸಹಕಾರಿ ಕ್ಷೇತ್ರದ ಮೇಲಿನ ತಮ್ಮ ಹಿಡಿತವನ್ನು ಪ್ರದರ್ಶಿಸಿದ್ದಾರೆ. ಗುರುವಾರ ನಡೆದ ಅಧ್ಯಕ್ಷರ ಆಯ್ಕೆ ಪ್ರಕ್ರಿಯೆಯಲ್ಲಿ, ಬ್ಯಾಂಕಿನ 14 ಜನ ನಿರ್ದೇಶಕರನ್ನು ಒಳಗೊಂಡ ಆಡಳಿತ ಮಂಡಳಿಯು ಕೆ.ಎನ್. ರಾಜಣ್ಣ ಅವರನ್ನು ಅಧ್ಯಕ್ಷರನ್ನಾಗಿ ಆಯ್ಕೆ ಮಾಡಿತು. ಈ ಫಲಿತಾಂಶ ಹೊರಬಿದ್ದ ಬೆನ್ನಲ್ಲೇ ಅವರ ಬೆಂಬಲಿಗರು, ಅಭಿಮಾನಿಗಳು ಭಾರೀ ಸಂಭ್ರಮ ಆಚರಣೆ ನಡೆಸಿದರು.

**ರಾಜಣ್ಣ ಬಣದ ಕ್ಲೀನ್ ಸ್ವೀಪ್:** ಇದಕ್ಕೂ ಮುನ್ನ ನಡೆದ ಡಿಸಿಸಿ ಬ್ಯಾಂಕ್ ನಿರ್ದೇಶಕ ಮಂಡಳಿ ಚುನಾವಣೆಯಲ್ಲೂ ರಾಜಣ್ಣ ಬಣ ಸಂಪೂರ್ಣ ಮೇಲುಗೈ ಸಾಧಿಸಿತ್ತು. ಒಟ್ಟು 14 ನಿರ್ದೇಶಕ ಸ್ಥಾನಗಳ ಪೈಕಿ 8 ಸ್ಥಾನಗಳಿಗೆ ರಾಜಣ್ಣ ಬೆಂಬಲಿತ ಅಭ್ಯರ್ಥಿಗಳು ಅವಿರೋಧವಾಗಿ ಆಯ್ಕೆಯಾಗಿದ್ದರೆ, ಉಳಿದ 6 ಸ್ಥಾನಗಳಿಗೆ ನಡೆದ ಚುನಾವಣೆಯಲ್ಲೂ ರಾಜಣ್ಣ ಬಣದ ಅಭ್ಯರ್ಥಿಗಳೇ ಭರ್ಜರಿ ಜಯ ಸಾಧಿಸಿದ್ದರು. ಈ ಮೂಲಕ ವಿರೋಧಿಗಳಿಗೆ ಯಾವುದೇ ಅವಕಾಶ ನೀಡಲಿಲ್ಲ. ಅವಿರೋಧವಾಗಿ ಆಯ್ಕೆಯಾದ ಪ್ರಮುಖರಲ್ಲಿ ಕೆ.ಎನ್. ರಾಜಣ್ಣ, ಅವರ ಪುತ್ರ ರಾಜೇಂದ್ರ, ಜಿ.ಜಿ. ರಾಜಣ್ಣ, ಮಾಲತಿ ಸೇರಿದ್ದರು. ಇನ್ನು ಚುನಾವಣೆ ಎದುರಿಸಿದ ತಿಪಟೂರು ಕ್ಷೇತ್ರದಲ್ಲಿ ಶಾಸಕ ಕೆ. ಷಡಕ್ಷರಿ ಮತ್ತು ಪಾವಗಡದಲ್ಲಿ ಶಾಸಕ ಎಚ್.ವಿ. ವೆಂಕಟೇಶ್ ಅವರೂ ಗೆಲುವು ಸಾಧಿಸಿದ್ದರು. ಚುನಾವಣೆಯಲ್ಲಿ ಕೆಲವು ಕುತೂಹಲಕಾರಿ ಘಟನೆಗಳು ನಡೆದಿದ್ದವು. ಗುಬ್ಬಿ ತಾಲ್ಲೂಕಿನಲ್ಲಿ ರಾಜಣ್ಣ ಬಣದ ಎಚ್.ಸಿ. ಪ್ರಭಾಕರ್ 21 ಮತಗಳನ್ನು ಪಡೆದು ಗೆದ್ದರೆ, ಅವರ ಪ್ರತಿಸ್ಪರ್ಧಿ ಎಂ.ಎಸ್. ಚನ್ನಮಲ್ಲಿಕಾರ್ಜುನ ಒಂದೇ ಒಂದು ಮತವನ್ನೂ ಪಡೆದಿರಲಿಲ್ಲ. ಅಚ್ಚರಿಯ ಸಂಗತಿಯೆಂದರೆ, ಚನ್ನಮಲ್ಲಿಕಾರ್ಜುನ ಅವರು ತಮಗೆ ತಾವೇ ಮತ ಹಾಕಿಕೊಳ್ಳದಿರುವುದು ಚರ್ಚೆಗೆ ಗ್ರಾಸವಾಗಿತ್ತು. ಇದನ್ನು ರಾಜಣ್ಣ ಅವರು ಚುನಾವಣಾ ಇತಿಹಾಸದಲ್ಲೇ ವಿಶೇಷ ಎಂದು ಬಣ್ಣಿಸಿದ್ದರು.



☛ ಉದಯವಾಹಿನಿ ಚಿತ್ರ

**ಚುನಾವಣಾ ಇತಿಹಾಸದಲ್ಲೇ ವಿಶೇಷ**

■ ಕೆ.ಎನ್. ರಾಜಣ್ಣ ಅವರು ತುಮಕೂರು ಜಿಲ್ಲಾ ಕೇಂದ್ರ ಸಹಕಾರಿ ಬ್ಯಾಂಕ್ ಅಧ್ಯಕ್ಷರಾಗಿ 7ನೇ ಬಾರಿಗೆ ಅವಿರೋಧವಾಗಿ ಆಯ್ಕೆ

■ ಡಿಸಿಸಿ ಬ್ಯಾಂಕ್ ನಿರ್ದೇಶಕ ಮಂಡಳಿಯ ಎಲ್ಲಾ 14 ಸ್ಥಾನಗಳಲ್ಲಿಯೂ ಗೆಲುವು ಸಾಧಿಸಿದ್ದರು ರಾಜಣ್ಣ ಬೆಂಬಲಿತ ಅಭ್ಯರ್ಥಿಗಳು

■ 1972ರಿಂದ ಸಹಕಾರಿ ಕ್ಷೇತ್ರದಲ್ಲಿ ಸಕ್ರಿಯರಾಗಿರುವ ಕೆ.ಎನ್. ರಾಜಣ್ಣ, ಸಚಿವ ಸ್ಥಾನ ಕಳೆದುಕೊಂಡ ಬಳಿಕ ನಡೆದ ಚುನಾವಣೆ

**ಸಹಕಾರಿ ಕ್ಷೇತ್ರದಲ್ಲಿ ರಾಜಣ್ಣ:** ಕೆ.ಎನ್.ರಾಜಣ್ಣ ಅವರು 1972ರಿಂದಲೂ ಸಹಕಾರಿ ಕ್ಷೇತ್ರದಲ್ಲಿ ಸಕ್ರಿಯರಾಗಿದ್ದಾರೆ. ಈ ಹಿಂದೆ ಕರ್ನಾಟಕ ರಾಜ್ಯ ಸಹಕಾರಿ ಅಪೆಕ್ಸ್ ಬ್ಯಾಂಕ್ ಅಧ್ಯಕ್ಷರಾಗಿ ಎರಡು ಬಾರಿ ಸೇವೆ ಸಲ್ಲಿಸಿದ್ದ ಅವರು ರಾಷ್ಟ್ರಮಟ್ಟದ ಸಹಕಾರಿ ಸಂಸ್ಥೆಗಳಲ್ಲೂ ಕಾರ್ಯನಿರ್ವಹಿಸಿದ ಅನುಭವ ಹೊಂದಿದ್ದಾರೆ. ಸಚಿವ ಸ್ಥಾನ ಕಳೆದುಕೊಂಡ ಬಳಿಕ ಈ ಚುನಾವಣೆ ರಾಜಣ್ಣ ಅವರಿಗೆ ಪ್ರತಿಷ್ಠೆಯ ವಿಷಯ ಆಗಿತ್ತು. ಇದರಲ್ಲಿ ಸಂಪೂರ್ಣ ಯಶಸ್ಸು ಸಾಧಿಸುವ ಮೂಲಕ ಅವರು ಜಿಲ್ಲಾ ರಾಜಕಾರಣದಲ್ಲಿ ತಮ್ಮ ಶಕ್ತಿ ಇನ್ನೂ ಉಳಿದಿದೆ ಎಂಬ ಸಂದೇಶವನ್ನು ರವಾನಿಸಿದ್ದಾರೆ.

**ರಾಜಕೀಯ ಶಕ್ತಿ ಮತ್ತೊಮ್ಮೆ ಸಾಬೀತು**

**ಕೆಎನ್ ರಾಜಣ್ಣ ಅವರು ತುಮಕೂರು ಡಿಸಿಸಿ ಬ್ಯಾಂಕ್ ಅಧ್ಯಕ್ಷರಾಗಿ 7ನೇ ಬಾರಿಗೆ ಅವಿರೋಧವಾಗಿ ಆಯ್ಕೆಯಾಗಿದ್ದಾರೆ, ಇದು ಸಹಕಾರಿ ಕ್ಷೇತ್ರದಲ್ಲಿ ಅವರ ಪ್ರಾಬಲ್ಯವನ್ನು ಎತ್ತಿ ತೋರಿಸುತ್ತಿದೆ. ಡಿಸಿಸಿ ಬ್ಯಾಂಕ್ ನಿರ್ದೇಶಕರ ಚುನಾವಣೆಯಲ್ಲಿ ರಾಜಣ್ಣ ಬಣವು ಎಲ್ಲಾ ಸ್ಥಾನಗಳನ್ನು ಬಾಚಿಕೊಂಡಿತ್ತು. ಈ ಗೆಲುವಿನೊಂದಿಗೆ ರಾಜಣ್ಣ ಅವರು ತಮ್ಮ ರಾಜಕೀಯ ಶಕ್ತಿಯನ್ನು ಮತ್ತೊಮ್ಮೆ ಸಾಬೀತುಪಡಿಸಿದ್ದಾರೆ.**

## ಮಿನಿ ನ್ಯೂಸ್

### ಕಾಡಾನೆ ಹಿಮ್ಮೆಟ್ಟಿಸಲು ಹೊಸ ಪ್ರಯೋಗ

• **ಉದಯವಾಹಿನಿ, ರಾಮನಗರ**

ಜಿಲ್ಲೆಯಲ್ಲಿ ಕಾಡಾನೆಗಳ ಹಾವಳಿ ಮಿತಿಮೀರಿದ್ದು, ಅರಣ್ಯದಿಂದ ಜನವಸತಿ ಪ್ರದೇಶಕ್ಕೆ ಬರುವ ಕಾಡಾನೆಗಳನ್ನು ಹಿಮ್ಮೆಟ್ಟಿಸಲು ಅರಣ್ಯ ಇಲಾಖೆ ಹೊಸ ಪ್ರಯೋಗ ಮಾಡಿದೆ. ಆನೆ ಕಂದಕ, ರೈಲ್ವೆ ಬ್ಯಾರಿಕೇಡ್ ನುಸುಳಿ ಗ್ರಾಮದತ್ತ ಬರುವ ಕಾಡಾನೆಗಳ ತಡೆಗೆ ಫಾರ್ಮ್ ಗಾರ್ಡ್ ಡಿವೈಸ್ ಎಂಬ ಎಲೆಕ್ಟ್ರಾನಿಕ್ ಉಪಕರಣ ಬಳಕೆ ಮಾಡಿ ಕಾಡಾನೆಗಳನ್ನು ಹಿಮ್ಮೆಟ್ಟಿಸುವ ಪ್ರಯೋಗ ಯಶಸ್ವಿಯಾಗಿದೆ. ಆನೆಗಳು ಕಾಡಿನಿಂದ ಆಚೆ ಬರುವಾಗ ಡಿವೈಸ್‌ನಲ್ಲಿರುವ ಸೆನ್ಸಾರ್ ಆನೆಗಳನ್ನು ಗುರುತಿಸಿ ಬಳಿಕ ವಿಚಿತ್ರ ಶಬ್ದ, ಬೆಳಕಿನ ಮೂಲಕ ಕಾಡಾನೆಗಳನ್ನು ವಾಪಸ್ ಕಾಡಿಗೆ ಓಡಿಸುತ್ತವೆ. ಈ ಡಿವೈಸ್‌ನಲ್ಲಿರುವ ಸೆನ್ಸಾರ್‌ನಿಂದ ಕಾಡು ಪ್ರಾಣಿಗಳ ಚಲನವಲನಗಳ ಮೇಲೆ ನಿಗಾ ಇಡಲಿದ್ದು, ಕಾಡಿನಿಂದ ಆನೆಗಳು ಆಚೆ ಬರುವುದನ್ನ ತಡೆಯುವುದಲ್ಲದೇ, ತಕ್ಷಣ ಆನೆ ಕಾರ್ಯಪಡೆ ತಂಡಕ್ಕೆ ಮೊಬೈಲ್ ಮೂಲಕವೇ ವಿಡಿಯೋ ಸಹಿತ ಸಂದೇಶವನ್ನ ಕಳುಹಿಸಿಕೊಡುತ್ತದೆ. ಸದ್ಯ ಕನಕಪುರ, ಚನ್ನಪಟ್ಟಣದಲ್ಲಿ ಎರಡು ಡಿವೈಸ್‌ಗಳನ್ನು ಅರಣ್ಯ ಇಲಾಖೆ ಇಟ್ಟಿದ್ದು, ಇದರಿಂದ ಕಾಡಾನೆಗಳನ್ನು ಹಿಮ್ಮೆಟ್ಟಿಸುವ ಪ್ರಯತ್ನ ಯಶಸ್ವಿಯಾಗಿದೆ. ಕಾಡಂಚಿನ ಗ್ರಾಮಗಳಲ್ಲಿ ಈ ಡಿವೈಸ್‌ಗಳ ಅಳವಡಿಕೆಗೆ ಅರಣ್ಯ ಇಲಾಖೆ ತಯಾರಿ ನಡೆಸಿದ್ದು, ಇದರಿಂದ ರೈತರು ಹಾಗೂ ಅರಣ್ಯ ಇಲಾಖೆಯ ಸಿಬ್ಬಂದಿಗೂ ಅನುಕೂಲವಾಗಲಿದೆ. ಅಲ್ಲದೇ ಸಬ್ಸಿಡಿ ದರದಲ್ಲಿ ರೈತರಿಗೆ ಫಾರ್ಮ್ ಗಾರ್ಡ್ ಡಿವೈಸ್ ವಿತರಿಸಲು ಅರಣ್ಯ ಇಲಾಖೆ ಚಿಂತನೆ ನಡೆಸಿದೆ ಎಂದು ಡಿಸಿಎಫ್ ರಾಮಕೃಷ್ಣಪ್ಪ ಮಾಹಿತಿ ನೀಡಿದ್ದಾರೆ.

### ರೈತರ ನೆರವಿಗೆ ಗೌಡಗೆರೆ ಚಾಮುಂಡೇಶ್ವರಿ ಕ್ಷೇತ್ರ

• **ಉದಯವಹಿನಿ, ಚನ್ನಪಟ್ಟಣ**

ರೈತರು ಬೆಳೆದ ಬೆಳೆಗಳಿಗೆ ಸೂಕ್ತ ಬೆಲೆ ಸಿಗದಿದ್ದಾಗ ನೊಂದು ಅವುಗಳನ್ನು ರಸ್ತೆಗೆ ಸುರಿದು ಹಾಳು ಮಾಡುವ ಬದಲು ತಾಲ್ಲೂಕಿನ ಪ್ರಸಿದ್ಧ ಗೌಡಗೆರೆ ಚಾಮುಂಡೇಶ್ವರಿ ಕ್ಷೇತ್ರದ ಅನ್ನ ದಾಸೋಹಕ್ಕೆ ನೀಡಿ, ಸಹಾಯಧನ ಪಡೆಯುವಂತೆ ಕ್ಷೇತ್ರದ ಧರ್ಮದರ್ಶಿ ಮಲ್ಲೇಶ್ ಗುರೂಜಿ ಮನವಿ ಮಾಡಿದ್ದಾರೆ. ಕ್ಷೇತ್ರಕ್ಕೆ ಆಗಮಿಸುವ ಭಕ್ತರ ಸಂಖ್ಯೆ ದಿನೇ ದಿನೇ ಹೆಚ್ಚಾಗುತ್ತಿದೆ. ಭಕ್ತರಿಗೆ ಪ್ರತಿದಿನ ಕ್ಷೇತ್ರದ ವತಿಯಿಂದ ಅನ್ನದಾಸೋಹ ನಡೆಯುತ್ತಿದೆ. ಅನೇಕ ಬಾರಿ ರೈತರು ತಾವು ಬೆಳೆದ ಬೆಳೆಗೆ ಸೂಕ್ತ ಬೆಲೆ ಸಿಗಲಿಲ್ಲವೆಂಬ ಕಾರಣಕ್ಕೆ ತಾವು ಬೆಳೆದ ಬೆಳೆಯನ್ನು ರಸ್ತೆಗೆ ಸುರಿಯುತ್ತಾರೆ. ಕಟಾವಿನ ಕನಿಷ್ಠ ಖರ್ಚು ಸಹ ಬಾರದು ಎಂದು. ಇಂತಹ ಸಂದರ್ಭದಲ್ಲಿ ನೆರವಿಗೆ ನಿಲ್ಲಬೇಕೆಂಬ ಕಾರಣಕ್ಕೆ ರೈತರ ಬೆಳೆಗಳನ್ನು ಸಹಾಯಧನದ ರೂಪದಲ್ಲಿ ಖರೀದಿಸಲು ಕ್ಷೇತ್ರವು ಮುಂದಾಗಿದೆ ಎಂದು ತಿಳಿಸಿದರು. ರಜಾದಿನಗಳು ಸೇರಿದಂತೆ ವಿಶೇಷವಾದ ದಿನಗಳಲ್ಲಿ ಸಹಸ್ರಾರು ಭಕ್ತರಿಗೆ ದಾಸೋಹ ಮಾಡಲಾಗುತ್ತದೆ. ಪ್ರತಿನಿತ್ಯ ದಾಸೋಹಕ್ಕೆ ಸಾಕಷ್ಟು ದಿನಸಿ, ತರಕಾರಿ ಬಳಕೆಯಾಗುತ್ತದೆ. ಈ ಹಿನ್ನೆಲೆ ರೈತರಿಂದ ಬೆಳೆಗಳನ್ನು ಸಹಾಯಧನದ ರೂಪದಲ್ಲಿ ಪಡೆದುಕೊಳ್ಳಲಾಗುವುದು ಎಂದರು. ಚನ್ನಪಟ್ಟಣ, ರಾಮನಗರ, ಮಾಗಡಿ, ಕುಣಿಗಲ್, ಮದ್ದೂರು ಸೇರಿದಂತೆ ಅಕ್ಕಪಕ್ಕದ ರೈತರು ಬೆಳೆಯುವ ಬೆಳೆಗಳಿಗೆ ಸೂಕ್ತ ಬೆಲೆ ಇಲ್ಲದಾಗ ಅದನ್ನು ಕ್ಷೇತ್ರಕ್ಕೆ ತಲುಪಿಸಿದರೆ ಬೆಳೆಗೆ ತಕ್ಕಂತೆ ಸೂಕ್ತ ಸಹಾಯಧನ ನೀಡಲಾಗುವುದು. ರೈತರು ಇದರ ಸದುಪಯೋಗ ಪಡೆದುಕೊಳ್ಳಿ ಎಂದರು.



### 50 ವರ್ಷಗಳ ಕೆಲಸ ಮಾಡಿದ್ದೇನೆ ಮುಂದೆ ಇಲ್ಲಿಂದ ಸ್ಪರ್ಧಿಸಲ್ಲ: ಸೋಮಣ್ಣ

• **ಉದಯವಾಹಿನಿ, ತುಮಕೂರು**

ಮುಂದಿನ ಚುನಾವಣೆಯಲ್ಲಿ ತುಮಕೂರಿನಿಂದ ಸ್ಪರ್ಧಿಸುವುದಿಲ್ಲ. ಬೇರೆ ಕ್ಷೇತ್ರಕ್ಕೆ ಹೋಗುವ ಚಿಂತನೆ ನಡೆಸಿದ್ದೇನೆ ಎಂದು ರೈಲ್ವೆ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ಹೇಳಿದ್ದಾರೆ. ಪಕ್ಷದ ವರಿಷ್ಠರು ದಿಢೀರನೆ ನನ್ನನ್ನು ತುಮಕೂರು ಕ್ಷೇತ್ರಕ್ಕೆ ಕಳುಹಿಸಿಕೊಟ್ಟರು. ಅಲ್ಲಿ 50 ವರ್ಷಗಳಿಂದ ಆಗಬೇಕಾಗಿದ್ದ ಕೆಲಸಗಳನ್ನೆಲ್ಲಾ ಮಾಡುವುದಕ್ಕೆ ಕೇವಲ ಒಂದು ವರ್ಷದಲ್ಲಿ ಚಾಲನೆ ಕೊಟ್ಟಿದ್ದೇನೆ. ಅಲ್ಲಿ ಸಾವಿರಾರು ಕೋಟಿ ರೂಪಾಯಿ ಮೊತ್ತದಲ್ಲಿ 23ಕ್ಕೂ ಹೆಚ್ಚು ಕೆಳಸೇತುವೆ ಹಾಗೂ ಮೇಲ್ಸೇತುವೆ ಕಾಮಗಾರಿಗಳು ನಡೆಯುತ್ತಿವೆ. ರಾಯದುರ್ಗ-ತುಮಕೂರು, ತುಮಕೂರು-ದಾವಣಗೆರೆ ಮಾರ್ಗದ ನಿರ್ಮಾಣ ಕಾರ್ಯ ಒಂದು ಹಂತಕ್ಕೆ ಬಂದಿದೆ. ತುಮಕೂರಿಗೆ ಬೈಪಾಸ್ ಕೂಡ ಆಗುತ್ತಿದ್ದು, ಕೆಲಸವೂ ನಡೆದಿದೆ ಎಂದಿದ್ದಾರೆ. ಶಿರಾದಿಂದ ಬಡುವನಹಳ್ಳಿ-ಬೈರನಹಳ್ಳಿ-ಚಿಕ್ಕಬಳ್ಳಾಪುರ ಮಾರ್ಗವಾಗಿ ತುಮಕೂರು ಸಂಪರ್ಕಿಸುವ ರಾಷ್ಟ್ರೀಯ ಹೆದ್ದಾರಿಯಲ್ಲಿ ಮತ್ತೊಂದು ರಾಷ್ಟ್ರೀಯ ಹೆದ್ದಾರಿ ಸೃಷ್ಟಿಸಲು ಕೆಲಸ ಆರಂಭಿಸಿದ್ದೇನೆ. ಐದು ವರ್ಷಗಳಲ್ಲಿ ಎಲ್ಲವನ್ನೂ ಪೂರೈಸುವುದರಿಂದ, ಮುಂದಿನ ಚುನಾವಣೆಯಲ್ಲಿ ನಾನು ಅಲ್ಲಿ ಸ್ಪರ್ಧಿಸುವುದಿಲ್ಲ.

ಮತ್ತೆಲ್ಲಾದರೂ ಹೋಗೋಣ ಎಂಬ ಚಿಂತನೆ ನಡೆಸಿದ್ದೇನೆ. ಹಾಸನ ತಿಪಟೂರು-ಚಿಕ್ಕನಾಯಕನಹಳ್ಳಿ ಮಾರ್ಗದ ಕಾಮಗಾರಿ 50 ವರ್ಷಗಳಿಂದ ನನೆಗುದಿಗೆ ಬಿದ್ದಿತ್ತು. 4,800 ಕೋಟಿ ಮೊತ್ತದ ಕಾಮಗಾರಿಗೆ ಸಮೀಕ್ಷೆ, ಟೆಂಡರ್ ಆಗಿದ್ದು, ಕೆಲಸ ಶುರು ಮಾಡಲಿದ್ದೇವೆ. 50 ವರ್ಷದಲ್ಲಾಗಬೇಕಿದ್ದ ಕೆಲಸ ಒಮ್ಮೆಲೇ ಮಾಡಿರುವ ಹೆಮ್ಮೆಯಿಂದ, ಮತ್ತೆ ಅಲ್ಲಿ ಕಣಕ್ಕಿಳಿಯುವುದಿಲ್ಲ ಎಂದು ಹೇಳಿದ್ದೇನೆ. ನಮ್ಮ ನಾಯಕರು ಏನು ಹೇಳುತ್ತಾರೆಯೋ, ಎಲ್ಲಿ ಸ್ಪರ್ಧಿಸು ಎನ್ನುತ್ತಾರೆಯೋ ಹಾಗೆ ಮಾಡುತ್ತೇನೆ ಎಂದು ಪ್ರತಿಕ್ರಿಯಿಸಿದರು.

### ಮದ್ಯ ಅಕ್ರಮ ಸಾಗಣೆ: ವ್ಯಕ್ತಿ ಬಂಧನ



☛ ಉದಯವಾಹಿನಿ ಚಿತ್ರ

• **ಉದಯವಾಹಿನಿ, ಮಹದೇಶ್ವರ ಬೆಟ್ಟ**

ಮಹದೇಶ್ವರ ಬೆಟ್ಟದಲ್ಲಿ ಅಕ್ರಮವಾಗಿ ಮದ್ಯ ಸಾಗಣೆ ಮಾಡುತ್ತಿದ್ದ ವ್ಯಕ್ತಿಯನ್ನು ಪೊಲೀಸರು ಮಾಲು ಸಮೇತ ವಶಕ್ಕೆ ಪಡೆದಿದ್ದಾರೆ. ಮಲೆ ಮಾದೇಶ್ವರ ಬೆಟ್ಟದ ಹುಲಿ ಗೂಡು ಹಾಗೂ ತಂಬಡಗೇರಿ ರಸ್ತೆಯಲ್ಲಿ ಬೈಕ್‌ನಲ್ಲಿ 28,000 ಬೆಲೆಬಾಳುವ 576 ಮದ್ಯದ ಸ್ಯಾಸೆಟ್‌ಗಳನ್ನು ಸಾಗಿಸುತ್ತಿರುವ ಖಚಿತ ಮಾಹಿತಿ ಮೇರೆಗೆ ಮಹದೇಶ್ವರ ಬೆಟ್ಟದ ಇನ್ಸ್‌ಪೆಕ್ಟರ್ ಜಗದೀಶ್ ನೇತೃತ್ವದ ತಂಡ ಬೈಕ್ ತಡೆದು ತಪಾಸಣೆ ನಡೆಸಿದೆ. ವಡ್ಡರ ದೊಡ್ಡಿಯ ಜೇಮ್ಸ್ ಬಿನ್ ಅಪ್ಪುದಸ್ವಾಮಿ ಎಂಬಾತನನ್ನು ವಶಕ್ಕೆ ಪಡೆದು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದಾರೆ.

ಅಂತರಾಳದಿಂದ.. EDITORIAL

# ಬೆಂಗಳೂರಿನಲ್ಲಿ ಜಿಬಿಎ ಯುಗಾರಂಭ: ವಿಳಂಬ ಮಾಡದೆ ಚುನಾವಣೆ ನಡೆಸಿ




ಭಾರತದ ತಂತ್ರಜ್ಞಾನ ರಾಜಧಾನಿ ಎಂಬ ಹಿರಿಮೆಗೆ ಪಾತ್ರವಾಗಿರುವ ಬೆಂಗಳೂರಿನಲ್ಲಿ ಸ್ಥಳೀಯ ಆಡಳಿತ ವ್ಯವಸ್ಥೆಯು ಮಂಗಳವಾರದಿಂದ ಹೊಸದೊಂದು ಮಜಲನ್ನು ತಲುಪಿದೆ. ಹದಿನೆಂಟು ವರ್ಷಗಳಿಂದ ಅಸ್ತಿತ್ವದಲ್ಲಿದ್ದ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯು (ಬಿಬಿಎಂಪಿ) ಇತಿಹಾಸದ ಪುಟ ಸೇರಿದ್ದು, ಗ್ರೇಟರ್ ಬೆಂಗಳೂರು ಪ್ರಾಧಿಕಾರದ (ಜಿಬಿಎ) ಯುಗಾರಂಭವಾಗಿದೆ. ಜಿಬಿಎ ಅಡಿಯಲ್ಲಿ ಐದು ನಗರ ಪಾಲಿಕೆಗಳು ಅಸ್ತಿತ್ವಕ್ಕೆ ಬಂದಿದ್ದು, ಇನ್ನು ಮುಂದೆ ಬೆಂಗಳೂರಿನ ಆಡಳಿತ ಯಂತ್ರವನ್ನು ಅವುಗಳು ನಿಭಾಯಿಸಲಿವೆ. ಹೊಸ ಆಡಳಿತ ವ್ಯವಸ್ಥೆಯು ರಾಜಧಾನಿಯ ನಾಗರಿಕರಿಗೆ ಸಮರ್ಥ ಮತ್ತು ಉತ್ತಮ ಸೇವೆ ಒದಗಿಸಲಿದೆ ಎಂಬ ಕನಸನ್ನು ತೇಲಿ ಬಿಡಲಾಗಿದೆ. ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಗೆ (ಬಿಎಂಪಿ) ಏಳು ನಗರಸಭೆ, ಒಂದು ಪುರಸಭೆ ಹಾಗೂ 110 ಹಳ್ಳಿಗಳನ್ನು ತಂದು, 2007ರಲ್ಲಿ ಬಿಬಿಎಂಪಿಯನ್ನು ರಚಿಸಲಾಗಿತ್ತು. ಕೇಂದ್ರೀಕೃತ ವ್ಯವಸ್ಥೆಯಿಂದ ಬೃಹತ್ ನಗರದ ಎಲ್ಲಾ ಸಮಸ್ಯೆಗಳಿಗೆ ಪರಿಹಾರ ಸಿಗಲಿದೆ ಎಂಬ ಕನಸನ್ನು ಆಗ ಬಿತ್ತಲಾಗಿತ್ತು. ಆದರೆ, ವಾಸ್ತವದಲ್ಲಿ ಏನಾಗಿದೆ ಎನ್ನುವುದು ಜನರ ಕಣ್ಣಮುಂದಿದೆ. ಬಿಬಿಎಂಪಿಯು ಅಸ್ತಿತ್ವದಲ್ಲಿದ್ದ ಹದಿನೆಂಟು ವರ್ಷಗಳಲ್ಲಿ ಚುನಾವಣೆ ನಡೆದಿದ್ದು 2010 ಮತ್ತು 2015ರಲ್ಲಿ ಮಾತ್ರ. ಚುನಾಯಿತ ಕೌನ್ಸಿಲ್‌ನ ಅವಧಿ 2020ರ ಸೆಪ್ಟೆಂಬರ್‌ನಲ್ಲೇ ಕೊನೆಗೊಂಡರೂ ಮತ್ತೆ ಚುನಾವಣೆ ನಡೆಯಲಿಲ್ಲ. ಅಧಿಕಾರಿಗಳೇ ಆಡಳಿತ ಯಂತ್ರವನ್ನು ಮುನ್ನಡೆಸಿದರು. ಆಡಳಿತದ ಪುನರ್‌ರಚನೆ, ವಾರ್ಡ್ ವಿಂಗಡಣೆಯ ನೆಪವೊಡ್ಡಿ ಇದುವರೆಗೆ ಅಧಿಕಾರದಲ್ಲಿದ್ದ ಸರ್ಕಾರಗಳು ಚುನಾವಣೆಯನ್ನು ಮುಂದೂಡುತ್ತಲೇ ಬಂದವು. ಈಗ ಜಿಬಿಎ ಅಸ್ತಿತ್ವಕ್ಕೆ ಬಂದಿದೆ.

> ಮುಖ್ಯಮಂತ್ರಿಯೇ ಛಾಯಾ ಮೇಯರ್ ಆಗಿರುವಂತಹ ವ್ಯವಸ್ಥೆಯನ್ನು ಜಿಬಿಎ ಹೊಂದಿದೆ. ಮುಖ್ಯಮಂತ್ರಿ ನೇತೃತ್ವದ ಕೇಂದ್ರೀಕೃತ ಪ್ರಾಧಿಕಾರದಿಂದಾಗಿ ಮೇಯರ್‌ಗಳು ಮತ್ತು ಪಾಲಿಕೆ ಸದಸ್ಯರು ಸ್ವತಂತ್ರವಾಗಿ ನಿರ್ಧಾರ ಕೈಗೊಳ್ಳಲಾಗದೆ ಆಲಂಕಾರಿಕ ವ್ಯಕ್ತಿಗಳಾಗಿ ಉಳಿಯುವ ಅಪಾಯ ಹೆಚ್ಚಾಗಿದೆ. ಸಂಸದರು ಮತ್ತು ಶಾಸಕರಿಗೆ ಸಂಸತ್ತು ಮತ್ತು ವಿಧಾನಮಂಡಲದಲ್ಲಿ ಅವರದೇ ಆದ ಜವಾಬ್ದಾರಿಗಳಿವೆ. ಅವರನ್ನು ಜಿಬಿಎಗೂ ಸದಸ್ಯರನ್ನಾಗಿ ಮಾಡಲಾಗಿದೆ.

ಸಕಾಲದಲ್ಲಿ ಚುನಾವಣೆ ನಡೆಸದಿರುವ ಕಾರಣ ಸುಪ್ರೀಂ ಕೋರ್ಟ್‌ನಿಂದ ತಿವಿಸಿಕೊಂಡಿರುವ ರಾಜ್ಯ ಸರ್ಕಾರ, ಕಾಲಮಿತಿಯಲ್ಲಿ ಚುನಾವಣೆ ನಡೆಸುವುದಾಗಿ ಕೋರ್ಟ್‌ಗೆ ಪ್ರಮಾಣಪತ್ರವನ್ನು ಸಲ್ಲಿಸಿದೆ. ಸ್ಥಳೀಯ ಸಂಸ್ಥೆಗಳಿಗೆ ಸಕಾಲದಲ್ಲಿ ಚುನಾವಣೆ ನಡೆಸುವುದರ ಅಗತ್ಯವನ್ನು ತನ್ನ ತೀರ್ಪುಗಳಲ್ಲಿ ಢಾಳಾಗಿ ಎತ್ತಿತೋರಿರುವ ಕೋರ್ಟ್, ಚುನಾವಣೆ ನಡೆಸಲು ಯಾವ ನೆಪಗಳೂ ಅಡ್ಡಿಯಾಗುವಂತಿಲ್ಲ ಎಂದು ತಾಕೀತು ಮಾಡಿದೆ. ಬೆಂಗಳೂರಿನ ನಾಗರಿಕರಿಗೆ ತಮ್ಮ ಪ್ರತಿನಿಧಿಗಳನ್ನು ಆಯ್ಕೆ ಮಾಡುವ ಅವಕಾಶವನ್ನು ಮುಂದಕ್ಕೆ ತಳ್ಳುತ್ತಾ ಬಂದಿರುವ ರಾಜ್ಯ ಸರ್ಕಾರವು ಅವರ ಹಕ್ಕುಗಳನ್ನು ಹತ್ತಿಕ್ಕುವ ಕೆಲಸ ಮಾಡಿದೆ.ಜಿಬಿಎಯ ಸ್ವರೂಪವು ಕಾಗದದಲ್ಲೇನೋ ಒಳ್ಳೆಯ ಲಕ್ಷಣಗಳನ್ನೇ ಹೊಂದಿದೆ. 5 ನಗರ ಪಾಲಿಕೆಗಳನ್ನಾಗಿ ವಿಭಜನೆ ಮಾಡಿದ್ದರಿಂದ ಆಡಳಿತದ ವಿಕೇಂದ್ರೀಕರಣಕ್ಕೆ ಅವಕಾಶವನ್ನು ಮಾಡಿಕೊಟ್ಟಂತಾಗಿದೆ. ರಾಜಧಾನಿಗೆ ಸೇವೆ ಒದಗಿಸುವ ಜಲಮಂಡಳಿ ಮತ್ತು ಬೆಸ್ಕಾಂ ಸಂಸ್ಥೆಗಳನ್ನು ಜಿಬಿಎ ಅಡಿಯಲ್ಲಿ ತಂದಿರುವುದು ಸಮನ್ವಯದಿಂದ ಕೆಲಸ ಮಾಡಲು ನೆರವಾಗುವಂತಹ ನಿರ್ಧಾರವಾಗಿದೆ. ಈ ವ್ಯವಸ್ಥೆಯಲ್ಲಿ ಕೆಲವು ಲೋಪಗಳೂ ಇವೆ. ಸ್ಥಳೀಯ ಆಡಳಿತದಲ್ಲಿ ಪಾಲಿಕೆ ಸದಸ್ಯರ ನಿರ್ಣಯಗಳು ಪ್ರಧಾನವಾಗಬೇಕೇ ಹೊರತು ಜಿಬಿಎಯಲ್ಲಿ ಸ್ಥಾನ ಪಡೆದಿರುವ ಸಂಸದರು ಮತ್ತು ಶಾಸಕರ ಒಲವು–ನಿಲುವುಗಳಲ್ಲ. ಬಹುತೇಕ ಶಾಸಕರಿಗೆ ಸ್ಥಳೀಯ ಸಂಸ್ಥೆಗಳಿಗೆ ಚುನಾವಣೆ ನಡೆಸುವುದೆಂದರೆ ಅಪಥ್ಯ ಎನ್ನುವುದು ಗುಟ್ಟಿನ ಸಂಗತಿ ಏನಲ್ಲ. ಚುನಾಯಿತ ಕೌನ್ಸಿಲ್ ಅಸ್ತಿತ್ವದಲ್ಲಿದ್ದರೆ ಅಭಿವೃದ್ಧಿ ಯೋಜನೆಗಳು ಹಾಗೂ ಕಾಮಗಾರಿಗಳಿಗೆ ಸಂಬಂಧಿಸಿದ ನಿರ್ಧಾರಗಳಲ್ಲಿ ಸಂಪೂರ್ಣ ನಿಯಂತ್ರಣ ಸಾಧಿಸಲು ಸಾಧ್ಯವಿಲ್ಲ ಎನ್ನುವುದು ಅವರಿಗೆ ಗೊತ್ತು. ಆದರೆ, ಪ್ರಜಾಪ್ರಭುತ್ವ ಎಂದರೆ ಅಧಿಕಾರ ಹಂಚಿಕೆಯೇ ಹೊರತು ಅದನ್ನು ಹಿಡಿದಿಟ್ಟುಕೊಳ್ಳುವುದಲ್ಲ. ಸ್ಥಳೀಯ ಆಡಳಿತವು ರಾಜಕೀಯ ಅನುಕೂಲತೆಯೊಂದಿಗೆ ವಿತರಿಸಬಹುದಾದ ಸವಲತ್ತು ಕೂಡ ಅಲ್ಲ. ಅದೊಂದು ಸಾಂವಿಧಾನಿಕ ಹಕ್ಕು ಮತ್ತು ಪ್ರಜಾಪ್ರಭುತ್ವದ ತಳಪಾಯವಾಗಿದೆ. ಬೆಂಗಳೂರಿನ ನಾಗರಿಕರಿಗೆ ಬೇಕಿರುವುದು ತಮ್ಮನ್ನು ಸಮರ್ಥವಾಗಿ ಪ್ರತಿನಿಧಿಸುವ ಪಾರದರ್ಶಕ, ಜವಾಬ್ದಾರಿಯಿಂದ ಕೂಡಿದ ಮತ್ತು ಉತ್ತರದಾಯಿತ್ವವನ್ನು ಹೊಂದಿದ ಚುನಾಯಿತ ಕೌನ್ಸಿಲ್ ಹೊರತು ಅಧಿಕಾರಿಗಳಿಂದ ನಡೆಸಲಾಗುತ್ತಿರುವ ಆಡಳಿತವಲ್ಲ. ರಾಜ್ಯ ಸರ್ಕಾರ ಸಾಧ್ಯವಾದಷ್ಟು ಬೇಗ ಬೆಂಗಳೂರಿನ ನಗರ ಪಾಲಿಕೆಗಳಿಗೆ ಚುನಾವಣೆಯನ್ನು ಘೋಷಿಸಬೇಕು ಮತ್ತು ಸಂವಿಧಾನದ ಆಶಯವನ್ನು ಗೌರವಿಸಬೇಕು. ಕೋರ್ಟ್‌ಗೆ ಸಲ್ಲಿಸಿರುವ ಪ್ರಮಾಣಪತ್ರವನ್ನೂ ಗಮನದಲ್ಲಿರಿಸಿಕೊಳ್ಳಬೇಕು.

# ರಾಮಾಯಣ



## ಶ್ರೀರಾಮನು ಆಗಸ್ತ್ಯಮುನಿಯ ಆಶ್ರಮಕ್ಕೆ ಹೋದದ್ದು

• ಹಿಂದಿನ ಸಂಚಿಕೆಯಿಂದ **120 ನೆಯ ಅಧ್ಯಾಯ**

ಅವನು ಅಷ್ಟುಮಂದಿ ಬ್ರಾಹ್ಮಣರ ಹೊಟ್ಟೆಗಳನ್ನೂ ಭೇದಿಸಿಕೊಂಡು ಮೇಕೆಯಂತೆ ಅರಚುತ್ತ ಹೊರಟುಬರುತ್ತಿದ್ದನು. ಅದರಿಂದ ಬ್ರಾಹ್ಮಣರು ಮೃತರಾಗಿ ಬೀಳುತ್ತಿದ್ದರು. ಈ ರೀತಿಯಲ್ಲಿ ಅನೇಕಮಂದಿ ಬ್ರಾಹ್ಮಣರನ್ನು ನಾಶಮಾಡಲು ಇಂದ್ರಾದಿ ದೇವತೆಗಳು ಅಗಸ್ತ ಮುನೀಶ್ವರನ ಸಮೀಪಕ್ಕೆ ಹೋಗಿ ಇಲ್ವಲ ವಾತಾಪಿಗಳಿಂದ ಆಗುತ್ತಿದ್ದ ಉಪದ್ರವಗಳನ್ನು ನಿವೇದಿಸಿಕೊಂಡರು. ಅಗಸ್ತ್ರಮುನೀಶ್ವರನು ಅದನ್ನು ಕೇಳಿ ಆ ರಾಕ್ಷಸರ ಸಮೀಪಕ್ಕೆ ಹೋದನು.

ಇಲ್ವಲನು ಎಂದಿನಂತೆ ತನ್ನ ಮನೆಯಲ್ಲಿ ಶ್ರಾದ್ಧವೆಂದು ಅಗಸ್ಯಮುನಿಗೆ ಬ್ರಾಹ್ಮಣಾರ್ಥಕ್ಕೆ ಹೇಳಿ ಆತನಿಗೆ ಭೋಜನವನ್ನು ಮಾಡಿಸಿ ಎಂದಿನ ರೀತಿಯಲ್ಲಿ ವಾತಾಪಿ, ಹೊರಟು ಬಾ ಎಂದು ಕರೆದನು. ಅಗಸ್ಟ್ ಮುನೀಶ್ವರನು ಮುಗುಳುನಗೆಯಿಂದ ಎಲೈ ಇಲ್ವಲನೇ, ಇನ್ನು ವಾತಾಪಿಗೆ ಹೊರಬರುವ ಸಾಮರ್ಥ್ಯವೆಲ್ಲಿಂದ ಬರಬೇಕು ವಾತಾಪಿಯು ನನ್ನ ಉದರದಲ್ಲಿಯೇ ಜೀರ್ಣನಾದನು ಎಂದು ನುಡಿದನು. ಆ ಮಾತನ್ನು ಕೇಳಿ ಇಲ್ವಲನು ಅಗತ್ಯ ಮುನಿಯನ್ನು ಕೊಲ್ಲಬೇಕೆಂದು ಅಟ್ಟಿಸಿಕೊಂಡು ಬಂದನು. ಅಗಸ್ತ್ರಮುನೀಶ್ವರನು ಕೋಪಾಟೋಪದಿಂದ ಅಗ್ನಿಜ್ವಾಲೆಗೆ ಸಮಾನವಾದ ತನ್ನ ದೃಷ್ಟಿಯಿಂದ ಇಲ್ವಲನನ್ನು ಭಸ್ಮಮಾಡಿದನು. ಅಂಥ ಅಗಸ್ತ್ರಮುನೀಶ್ವರನ ತಮ್ಮನ ಆಶ್ರಮವಿದು, ಪಿಪ್ಪಲವನಗಳಿಂದಲೂ ಕೆರೆಗಳಿಂದಲೂ ಮನೋಹರವಾದದ್ದು ಎಂದು ಹೇಳಿದನು.ಆ ಸಮಯದಲ್ಲಿ ಸೂರ್ಯನು ಅಸ್ತಾಚಲವನ್ನೆವಲು ಶ್ರೀರಾಮನು ಸೀತಾಲಕ್ಷ್ಮಣ ಸಮೇತನಾಗಿ ಸಾಯಾಹಿಕವನ್ನು ತೀರಿಸಿಕೊಂಡು ಅಗತ್ಯಭ್ರಾತೃವಿನ ಆಶ್ರಮಕ್ಕೆ ಹೋಗಿ ಆತನಿಗೆ ವಾದಿಸಿದನು. ಆ ಮುನೀಶ್ವರನು ಅರ್ಥ್ಯಪಾದ್ಯಾದಿ ಸತ್ಕಾರಗಳನ್ನು ಮಾಡಿ ಕಂದಮೂಲ ಫಲಾಹಾರಾದಿಗಳನ್ನು ಕೊಟ್ಟು ಒಂದು ವರ್ಣಶಾಲೆಯನ್ನು ತೋರಿಸಿದನು. ಶ್ರೀರಾಮನು ಆ ರಾತ್ರಿಯನ್ನು ಅಲ್ಲಿ ಕಳೆದು ಮಾರನೆಯ ದಿನ ಪ್ರಾತಃಕಾಲದಲ್ಲಿದ್ದು ನಿತ್ಯಕರ್ಮಗಳನ್ನು ಮಾಡಿ ಆ ಋಹೀಶ್ವರನಿಗೆ ವಂದಿಸಿ ಋಷಿಗಳೆ, ಒಂದು ರಾತ್ರಿಯನ್ನು ಇಲ್ಲಿ ಸುಖವಾಗಿ ಕಳೆದೆವು, ಈಗ ನಿಮ್ಮ ಅಣ್ಣನಾದ ಅಗಸ್ತ್ರಮುನೀಶ್ವರನ ಆಶ್ರಮಕ್ಕೆ ಹೋಗಿ ಆತನ ದರ್ಶನಮಾಡುತ್ತೇವೆ ಎಂದು ಹೇಳಿ ಸೀತಾಲಕ್ಷ್ಮೀ ಸಮೇತನಾಗಿ ಸುತೀಕ್ಷ್ಯ ಮುನಿಯು ಹೇಳಿದ ದಾರಿಗೊಂಡು ಹೊರಟನು. ಮಾರ್ಗದಲ್ಲಿ ಅನೇಕ ಪರ್ಣಫಲಾದಿಗಳಿಂದ ಮನೋಹರವಾದ ಮರಗಳುಳ್ಳ ವನಗಳನ್ನೂ ಫಲಪುಷ್ಪಗಳಿಂದ ಇಟ್ಟಣಿಸಿದ್ದ ವೃಕ್ಷಗಳಲ್ಲಿ ಸಂಚರಿಸುತ್ತಿದ್ದ ಕಪಿಗಳನ್ನೂ ನೋಡುತ್ತ, ಕಿವಿಗಿಂಪಾಗಿ ಸ್ವರಕ್ಷೆ ಯುತ್ತಿದ್ದ ಕೋಗಿಲೆಗಳ ಧ್ವನಿಗಳನ್ನು ಕೇಳುತ್ತ ತನ್ನ ಹಿಂದುಗಡೆಯಲ್ಲಿ ಬರುತ್ತಿದ್ದ **ಲಕ್ಷ್ಮಣನನ್ನು ಕುರಿತು ಹೀಗೆ ಹೇಳಿದನು:** ಲಕ್ಷ್ಮಣ, ಈ ಆಶ್ರಮದಲ್ಲಿ ಎಲ್ಲಿ ನೋಡಿದರೂ ಕೋಮಲವಾಗಿ ಪರಿಮಳಿಸುವ ತಳಿರುಗಳಿಂದ ಮನೋಹರವಾದ ವೃಕ್ಷಗಳಿವೆ. ಮೃಗಗಳು ಒಂದಕ್ಕೊಂದು ವೈರವನ್ನು ಬಿಟ್ಟು ಒಂದುಗೂಡಿ ಸಂಚರಿಸುತ್ತಿವೆ. ತನ್ನ ಸತ್ಕರ್ಮದಿಂದ ಲೋಕದಲ್ಲಿ ಪ್ರಸಿದ್ಧನಾದ ಆಗಸ್ಮಮುನೀಶ್ವರನ ಆಶ್ರಮವು ಕಾಣುತ್ತಿರುವುದು.

ಮುಂದುವರಿಯುವುದು...

# ಅಮೆರಿಕಾದ ಮುಂದೆ ದಾನಕ್ಕಾಗಿ ಕೈ ಚಾಚಿದ ಇತಿಹಾಸವಿಲ್ಲ

☛ **ಡಾ. ಚನ್ನೇಗೌಡ ಯು ಸಿ**
■ ಉದಯವಾಹಿನಿ, ವಿಶೇಷ





ಜಪಾನ್ ಎರಡು ಅಣುಬಾಂಬ್‌ಗಳಿಂದ ನಾಶವಾದ ಒಂದು ದೇಶ. ಆದರೆ ಅದು ಸಹಾಯಕ್ಕಾಗಿ ಬೇಡಿಕೊಂಡಿಲ್ಲ, ಕರುಣೆಗೆ ಕೈ ಚಾಚಿಲ್ಲ. ಅದನ್ನು ಸ್ವಾಭಿಮಾನದಿಂದ, ಅಚಲ ಮನೋಬಲದಿಂದ ಪುನರ್‌ನಿರ್ಮಿಸಿಕೊಂಡಿತು.

ಇವತ್ತಿಗೂ ಅದು ಅಮೆರಿಕಾದ ಮುಂದೆ ದಾನಕ್ಕಾಗಿ ಕೈ ಚಾಚಿದ ಇತಿಹಾಸವಿಲ್ಲ. ಜಪಾನಿನಲ್ಲಿ ಒಂದು ವರ್ಷಕ್ಕಿಂತ ಹೆಚ್ಚು ಕಾಲ ವಾಸಿಸುತ್ತಿದ್ದ ಒಬ್ಬ ಭಾರತೀಯನಿಗೆ ಒಂದು ವಿಚಿತ್ರವಾದ ವಿಷಯ ಗಮನಕ್ಕೆ ಬಂತು.

ಜನರು ಮೃದುವಾಗಿ, ಸಹಾಯಕರಾಗಿ ವರ್ತಿಸುತ್ತಿದ್ದರು. ಆದರೆ ಯಾರೂ ಅವನನ್ನು ತಮ್ಮ ಮನೆಯಲ್ಲಿ ಒಂದು ಕಪ್ ಚಹಾಕ್ಕೂ ಆಹ್ವಾನಿಸಲಿಲ್ಲ. ಅವನಿಗೆ ಅಚ್ಚರಿಯೂ ನೋವೂ ಆಯಿತು. ಅವನು ಕೊನೆಗೆ ಒಬ್ಬ ಜಪಾನ್ ಸ್ನೇಹಿತನನ್ನು ಕೇಳಿದ: ಏಕೆ?

**ದೀರ್ಘ ಮೌನದ ನಂತರ, ಸ್ನೇಹಿತ ಉತ್ತರಿಸಿದ:** ನಮಗೆ ಭಾರತೀಯರ ಇತಿಹಾಸವನ್ನು ಕಲಿಸಲಾಗುತ್ತದೆ...

ಪ್ರೇರಣೆಗೆ ಅಲ್ಲ, ಎಚ್ಚರಿಕೆಗಾಗಿ. ಭಾರತೀಯನು ಬೆರಗಾದನು. ಎಚ್ಚರಿಕೆ ಎಂದು ಕೇಳಿದ. ಜಪಾನ್ ಸ್ನೇಹಿತ ಮುಂದುವರಿಸಿ ಭಾರತವನ್ನು ಎಷ್ಟು ಬ್ರಿಟಿಷರು ಆಳಿದರು ಗೊತ್ತೇ?

**ಅವನು ಯೋಚಿಸಿ ಹೇಳಿದ:** ಬಹುಶಃ... 10,000 ಜನ?ಜಪಾನಿ ಗಂಭೀರವಾಗಿ ತಲೆ ಆಡಿಸಿದ. ಆದರೆ ಭಾರತದಲ್ಲಿ ಜನಸಂಖ್ಯೆ 30 ಕೋಟಿಗಿಂತ ಹೆಚ್ಚು, ಅಲ್ಲವೇ?

ಹೀಗಾದರೆ ನಿಜವಾಗಿ ನಿಮ್ಮನ್ನು ಯಾರು ಹಿಂಸಿಸಿದರು? ಯಾರು ಚಾಟಿಯಿಂದ ಹೊಡೆದರು, ಶೋಷಿಸಿದರು, ಗುಂಡಿಕ್ಕಿದರು? ಬ್ರಿಟಿಷರು ಅಲ್ಲ.

ನಿಮ್ಮದೇ ಜನರು. ಜಲಿಯಾನ್‌ವಾಲಾಬಾಗ್‌ನಲ್ಲಿ ಜನರಲ್ ಡೈಯರ್ ಫೈರ್ ಎಂದು ಕೂಗಿದಾಗ ಟ್ರಿಗರ್ ಒತ್ತಿದವರು ಯಾರು ಅವರು ಬ್ರಿಟಿಷರು ಅಲ್ಲ, ಭಾರತೀಯ ಸೈನಿಕರು. ಒಬ್ಬರೂ ತಮ್ಮ ಬಂದೂಕನ್ನು ಕ್ರೂರನ ಕಡೆ ತಿರುಗಿಸಲಿಲ್ಲ. ಒಬ್ಬರೂ ಇಲ್ಲ. ನೀವು ದಾಸ್ಯವನ್ನು ಕುರಿತು ಮಾತನಾಡಲು ಬಯಸುತ್ತೀರಾ? ನಿಜವಾದ ದಾಸ್ಯ ನಿಮ್ಮ ದೇಹದದ್ದಲ್ಲ. ಅದು ನಿಮ್ಮ ಆತ್ಮದದ್ದು. ಭಾರತೀಯನು ನಿಶ್ಚಲವಾಗಿ ನಿಂತ. ಅವನಿಗೆ ಮಾತೇ ಬರಲಿಲ್ಲ.

**ಜಪಾನಿ ಮತ್ತೊಮ್ಮೆ ಹೇಳಿದ:** ಮೊಗಲ್‌ರು ಎಷ್ಟು ಜನ ಭಾರತಕ್ಕೆ ಬಂದರು ಕೆಲ ಸಾವಿರಾರು. ಆದರೆ ಅವರು ಶತಮಾನಗಳ ಕಾಲ ಆಳಿದರು. ಅವರು ಸಂಖ್ಯೆಯ ಶಕ್ತಿಯಿಂದಲ್ಲ, ನಿಮ್ಮದೇಶದ ಜನರ ದಾಶ್ಯದಿಂದ ಆಳಿದರು. ಬದುಕಿಗಾಗಿ... ಅಥವಾ ಬೆಳ್ಳಿ ಹಣಕ್ಕಾಗಿ ನಿಮ್ಮದೇ ಜನರು ತಮ್ಮ ತಲೆಬಾಗಿದರು. ನಿಮ್ಮದೇ ಜನರು ಮತಾಂತರಗೊಂಡರು. ನಿಮ್ಮದೇ ಸಹೋದರರು ದ್ರೋಹಿಗಳಾದರು. ನಿಮ್ಮದೇ ಜನರು ನಿಮ್ಮ ವೀರರನ್ನು ಹಿಡಿದು ಕೊಟ್ಟರು.ಚಂದ್ರಶೇಖರ ಆಜಾದ್ ದ್ರೋಹಕ್ಕೊಳಗಾದರು. ಭಗತ್ ಸಿಂಗ್ ನೇಣಿಗೇರಿದರು, ಆದರೆ ದೇಶಭಕ್ತರೆಂದು ಕರೆಯಿಸಿಕೊಂಡವರಲ್ಲಿ ಯಾರೂ ಮುಂದೆ ಬಂದಿಲ್ಲ. ನಿಮಗೆ ವಿದೇಶಿ ಶತ್ರುಗಳ ಅವಶ್ಯಕತೆ ಇಲ್ಲ. ನಿಮ್ಮದೇ ಜನರು, ಮತ್ತೆ ಮತ್ತೆ, ಅಧಿಕಾರ, ಹುದ್ದೆ, ಸ್ವಾರ್ಥಕ್ಕಾಗಿ ನಿಮ್ಮನ್ನು ಮಾರಿಬಿಡುತ್ತಾರೆ.

**ಆ ಕಾರಣಕ್ಕೆ ನಾವು ದೂರವೇ ಇರುತ್ತೇವೆ.**

ಬ್ರಿಟಿಷರು ಹಾಂಗ್‌ಕಾಂಗ್, ಸಿಂಗಪುರಕ್ಕೆ ಬಂದಾಗ ಸ್ಥಳೀಯರು ಅವರ ಸೇನೆ ಸೇರಲಿಲ್ಲ. ಆದರೆ ಭಾರತದಲ್ಲಿ ನೀವು ಶತ್ರುವಿನ ಸೇನೆ ಸೇರಿದ್ದೀರಿ.

ಅವರಿಗೆ ಸೇವೆ ಮಾಡಿದಿರಿ. ಅವರನ್ನು ಪೂಜಿಸಿದ್ದೀರಿ. ನಿಮ್ಮದೇ ಜನರನ್ನು ಕೊಂದಿದ್ದೀರಿ ಅವರ ಮೆಚ್ಚುಗೆಗಾಗಿ. ಇನ್ನೂ ಇಂದಿಗೂ ಬಾದಲಾವಣೆಯಾಗಿಲ್ಲ. ಸ್ವಲ್ಪ ಉಚಿತ ವಿದ್ಯುತ್, ಒಂದು ಮದ್ಯದ ಬಾಟಲ್, ಒಂದು ಹಾಸಿಗೆ ಅಷ್ಟರಲ್ಲೇ ನಿಮ್ಮ ಮತ, ನಿಮ್ಮ ಮನಸ್ಸು, ನಿಮ್ಮ ಧ್ವನಿ ಎಲ್ಲವೂ ಮಾರಲ್ಪಡುತ್ತದೆ. **ನಿಮ್ಮ ನಿಷ್ಠೆ ರಾಷ್ಟ್ರಕ್ಕೆ ಅಲ್ಲ, ಹೊಟ್ಟೆಗೆ.** ನೀವು ಘೋಷಣೆಗಳನ್ನು ಕೂಗುತ್ತೀರಿ. ಮೆರವಣಿಗೆಗಳಲ್ಲಿ ನಡೆಯುತ್ತೀರಿ. ಆದರೆ ದೇಶಕ್ಕೆ ನಿಮ್ಮ ವ್ಯಕ್ತಿತ್ವ ಬೇಕಾದಾಗ ನೀವು ಎಲ್ಲಿದ್ದೀರಿ ನಿಮ್ಮ ಮೊದಲ ನಿಷ್ಠೆ ಇನ್ನೂ ನಿಮ್ಮ ಕುಟುಂಬ, ನಿಮ್ಮ ಸ್ವಾರ್ಥಕ್ಕೇ. ಮತ್ತೆಲ್ಲವೂ?ಸಮಾಜ, ಧರ್ಮ, ದೇಶ ಸತ್ತುಹೋಗಬಹುದು.

**ಕೊನೆಯಲ್ಲಿ ಅವನು ಹೇಳಿದ:** ದೇಶ ಬಲವಾಗಿಲ್ಲದಿದ್ದರೆ ನಿಮ್ಮ ಮನೆ ಯಾವತ್ತೂ ಸುರಕ್ಷಿತವಾಗದು. ನಿಮ್ಮ ವ್ಯಕ್ತಿತ್ವ ದುರ್ಬಲವಾಗಿದ್ದರೆ ಯಾವ ಧ್ವಜವೂ ನಿಮ್ಮನ್ನು ರಕ್ಷಿಸಲಾರದು. ಇದು ಹಾಸ್ಯವಲ್ಲ.ಇದು ಕನ್ನಡಿ. ನಾವೀಗ ಮೌನವಾಗಿರುವುದನ್ನು ನಿಲ್ಲಿಸಬೇಕು.

ಭಾರತಕ್ಕೆ ಇನ್ನಷ್ಟು ಭಾಷಣದ ದೇಶಭಕ್ತರು ಬೇಡ. ಭಾರತಕ್ಕೆ ಅಗತ್ಯವಿರುವುದು ಅಚಲ ವ್ಯಕ್ತಿತ್ವದ ನಾಗರಿಕರು. ಸ್ವಾತಂತ್ರ್ಯ ಹೋರಾಟಗಾರರಷ್ಟೇ ಅಲ್ಲ, ಸ್ವಾತಂತ್ರ್ಯ ಕಾಪಾಡುವವರು ಕೈಯಲ್ಲಿ ಧ್ವಜವಷ್ಟೇ ಅಲ್ಲ, ಹೃದಯದಲ್ಲಿ ನಿಷ್ಠೆ.

**ಇದು ಕಹಿ. ಆದರೆ ಸತ್ಯ.**

# ಗುರುವಿನ ಕೀರ್ತಿಗೆ ಕಿರೀಟ

☛ **ವಿಶ್ವಾಸ್.ಡಿ.ಗೌಡ**
■ ಉದಯವಾಹಿನಿ, ವಿಶೇಷ



ಶಿಕ್ಷಕರು ಸಮಾಜದ ಅತ್ಯಂತ ಜವಾಬ್ದಾರಿಯುತ ಮತ್ತು ಪ್ರಮುಖ ಸದ್ಯಸರು ಏಕೆಂದರೆ ಅವರ ವೃತ್ತಿಪರ ಪ್ರಯತ್ನಗಳು ಭೂಮಿಯ ಭವಿಷ್ಯದ ಮೇಲೆ ಪರಿಣಾಮ ಬೀರುತ್ತವೆ.

**ವಿದ್ಯಾರ್ಥಿಗಳಿಗೆ ಶಿಕ್ಷಿಸಿದರೆ ವಿವಾದ:** ನಾನು ವಿದ್ಯಾರ್ಥಿಯಾಗಿದ್ದ ಸಮಯದಲ್ಲಿ ಕೋಲಿನಿಂದ ಹೊಡೆದು ಕಲಿಸುತ್ತಿದ್ದರು. ಬಹುಶಃ ಪ್ರತಿ ಶಿಕ್ಷಕನ ಈ ಕ್ರಮದ ಹಿಂದೆ ಇದ್ದುದ್ದು ವಿದ್ಯಾರ್ಥಿಗೆ ಉತ್ತಮ ಶಿಕ್ಷಣ ನೀಡಬೇಕು. ಸಚ್ಚಾರಿತ್ರ್ಯ ವ್ಯಕ್ತಿಯನ್ನಾಗಿ ರೂಪಿಸಬೇಕು. ಆದರೆ ಈಗ ಕೋಲು ಬಿಡಿ ಕೈಯಿಂದ ಹೊಡೆದರೂ ಅದರಲ್ಲಿ ಇಲ್ಲದ ವಿವಾದ ಸೃಷ್ಟಿಯಾಗುವ ಸಾಧ್ಯತೆಯೂ ಇದೆ ,ಕಾರಣ ಇಷ್ಟೇ .ಹಿತೋಪದೇಶ ಕೇಳಿಸಿಕೊಂಡ ವಿದ್ಯಾರ್ಥಿಯು ಮನೆಯಲ್ಲಿ ಎಂಥ ಬಣ್ಣ ಬಳಿದು ವರ್ಣಿಸಬಹುದು ಆತನ ಮನೆಯವರು ಬಂದು ಗಲಾಟೆ ಮಾಡಬಹುದೇ ಅದು ಪೊಲೀಸ್ ಠಾಣೆ ಮೆಟ್ಟಿಲೇರಿತೇ ಇಂಥ ಭೀತಿ ಪ್ರತಿಯೊಬ್ಬ ಶಿಕ್ಷಕರನ್ನೂ ಸದಾ ಕಾಡದೇ ಇರದು.

**ವ್ಯವಸ್ಥೆಯ ವ್ಯಂಗ್ಯ:** ಗುರುವನ್ನು ದೇವರಿಗೆ ಸಮಾನವಾಗಿ ಕಾಣುವ ಸಂಸ್ಕೃತಿಯಲ್ಲಿ ಬೆಳೆದು ಬಂದವರು ಭಾರತೀಯರು.

ಹೀಗಿರುವಾಗ ಒಂದು ಕಾಲದ ದೇವರನ್ನು ಇಂದು ತುಚ್ಛವಾಗಿ ಕಾಣುವಂಥ ಬದಲಾವಣೆಯಾಗಲು ಕಾರಣ ಪೋಷಕರ ಅತಿಯಾದ ಮಕ್ಕಳ ಮೇಲಿನ ಪ್ರೀತಿಯೇ? ಇಲ್ಲಾ ಇಂದಿನ ಸಿನಿಮಾಗಳಲ್ಲಿ ಶಿಕ್ಷಕ ಪಾತ್ರವನ್ನು ನಗೆಪಾಟಲಿನ ಪಾತ್ರವಾಗಿ ಚಿತ್ರಿಸುವ ಕ್ರಮವೇ ಎಂದು ಪ್ರಶ್ನಿಸಿಕೊಂಡಾಗ, ಉತ್ತರ ಹೌದು ಎಂದು ಹೇಳದೇ ಇರಲು ಸಾಧ್ಯವಿಲ್ಲ (ಇದಕ್ಕೆ ಒಂದೆರಡು ಸಿನಿಮಾಗಳು ಹೊರತಾಗಿ ಬಹುದು)



Teaching profession is a Noble profession ಎನ್ನುವ ಮಾತಿದೆ. ಆದರೆ, Noble profession ಅನ್ನು ನಿರ್ವಹಿಸುವ ಶಿಕ್ಷಕನ ಬಗ್ಗೆ ಗೌರವಾಧರಗಳನ್ನು ಇಟ್ಟುಕೊಳ್ಳದಿರುವುದು ವ್ಯವಸ್ಥೆಯ ವ್ಯಂಗ್ಯ.

**ಟೀಚಿಂಗ್ ಸವಾಲಿನದು:** ಇಂದು ಟೀಚಿಂಗ್ ತುಂಬಾ ಸವಾಲಿನದು. ಏಕೆಂದರೆ ವಿದ್ಯಾರ್ಥಿಗಳ ಮನಸ್ಸನ್ನು ಮೊಬೈಲ್, ಲ್ಯಾಪ್ ಟಾಪ್, ಐಪ್ಯಾಡುಗಳು ಆಕ್ರಮಿಸಿವೆ. ಅಲ್ಲದೆ ಇಯರ್ ಫೋನ್, ಸೆಲ್ಫಿಯ ಗುಂಗಿನಿಂದ ಬಿಡಿಸಿ, ತರಗತಿಯ ತನ್ಮಯತೆಯತ್ತಾ ಮರಳಿಸುವುದು ಸಾಹಸದ ಕೆಲಸ.

ಪರಿಸ್ಥಿತಿ ಹೀಗಿದ್ದರೂ ಈಗಲೂ ಶಿಕ್ಷಕರು ವಿದ್ಯಾರ್ಥಿಗಳ ಹಿತವನ್ನೇ ಬಯಸುತ್ತಿರುತ್ತಾರೆ. ವಿದ್ಯಾರ್ಥಿಯ ಹಿತ ನನ್ನ ಆದ್ಯತೆ ಎಂದು ಭಾವಿಸುತ್ತಾರೆ ಆದರೆ ವಿದ್ಯಾರ್ಥಿಗಳು ಮಾತ್ರ ಶಿಕ್ಷಕರನ್ನು ಕಡೆಗಣಿಸುತ್ತಿದ್ದಾರೆ ಆದರೆ ಒಂದಂತೂ ಸತ್ಯ ಮನೆಯಲ್ಲಿ ಶಿಕ್ಷಕರ ಬಗ್ಗೆ ಗೌರವದ ಭಾವನೆಯಿದ್ದರೆ, ಶಿಕ್ಷಕರ ಬಗ್ಗೆ ಮಕ್ಕಳಿಗೆ ಉತ್ತಮ ಪಾಠ ಮನೆಯಿಂದ ದೊರೆತರೆ, ಶಿಕ್ಷಕರ ಬಗ್ಗೆ ಸಮಾಜದ ಭಾವನೆ ಬದಲಾದರೆ ಖಂಡಿತವಾಗಿಯೂ ವಿದ್ಯಾರ್ಥಿಗಳು ಬದಲಾಗಲು ಸಾಧ್ಯ ಈ ದಿಶೆಯಲ್ಲಿ ವಿದ್ಯಾರ್ಥಿಗಳಲ್ಲಿ ನೈತಿಕತೆಯನ್ನು ಜಾಗೃತಗೊಳಿಸುವ ಅಗತ್ಯವಿದೆ.

**ಮನೆಯೇ ಮೊದಲ ಪಾಠಶಾಲೆ :** ಜನನಿ ತಾನೇ ಮೊದಲ ಗುರು ಜನನಿಯಿಂದ ಪಾಠ ಕಲಿತ ಜನರೇ ಧನ್ಯರು. ಮನೆಯೇ ಮೊದಲ ಪಾಠ ಶಾಲೆ ಎಂಬ ಮಾತು ಈ ನೆಲೆಯಲ್ಲಿ ಹುಟ್ಟಿಕೊಂಡಿದೆ ಎಂಬುದರಲ್ಲಿ ಸಂಶಯವಿಲ್ಲ. ಹೀಗಾಗಿ ಪೋಷಕರು ಮಕ್ಕಳನ್ನು ಕೇವಲ ಹಣ ದುಡಿಯುವ ಯಂತ್ರಗಳನ್ನಾಗಿಸದೆ, ಪಾಠ ಒಪ್ಪಿಸುವ ಗಿಳಿಗಳಾಗಿಸದೆ, ಮಾನವೀಯತೆ ಮೆರೆಯುವ ಗಣಿಗಳಾಗಿಸಬೇಕು. ಮಕ್ಕಳು ಡಾಕ್ಟರ್, ಇಂಜಿನಿಯರ್, ಐಎಎಸ, ಕೆಎಎಸ್ ಇತ್ಯಾದಿ ಅಧಿಕಾರಿಗಳಾಗಬೇಕೆಂದು ಬಯಸುವ ಪಾಲಕರು, ಅವರು ಮೊದಲು ಮನುಷ್ಯರಾಗುವುದನ್ನು ಕಲಿಸಬೇಕು.

# ಶಿಕ್ಷಕರ ವರ್ಗಾವಣೆ ಪ್ರಕ್ರೀಯೆಗಳಿಗಿದು ಸರಿಯಾದ ಸಮಯವಲ್ಲ

**ಲೇಖನ: ಹರೀಶ್ ಪುತ್ತೂರು**
■ ಉದಯವಾಹಿನಿ, ವಿಶೇಷ



ಪ್ರತಿ ವರ್ಷವೂ ಶಾಲಾ ಶಿಕ್ಷಕರ ವರ್ಗಾವಣೆ ಪ್ರತಿಕ್ರೀಯೆ ಆರಂಭವಾಗುತ್ತಲೆ ಒಂದಿಲ್ಲೊಂದು ವಿಘ್ನಗಳು ಎದುರಾಗುತ್ತಲೆ ಇರುತ್ತದೆ ಎಂಬುದು ಇಲಾಖೆಯವರಿಗೆ ತಿಳಿಯದಿರುವ ವಿಚಾರಗಳಲ್ಲ, ಎಷ್ಟೋ ಬಾರೀ ವರ್ಗಾವಣೆ ಪ್ರಕ್ರೀಯೆಗಳನ್ನು ಅರ್ಧಕ್ಕೆ ಮೊಟಕುಗೊಳಿಸಿರುವ ಸನ್ನಿವೇಶಗಳು ಇವೆ.

ಇದೆಲ್ಲವೂ ಒಂದು ರೀತಿಯಲ್ಲಿ ಒಳ್ಳೆಯ ವಿಚಾರಗಳೆ ಆಗಿರಬೇಕು. ಯಾಕೆಂದರೆ ಶಿಕ್ಷಣ ಇಲಾಖೆ ಕೈಗೊಳ್ಳುವ ನಿರ್ಧಾರಗಳಿಂದಲೆ ಹೆಚ್ಚಾಗಿ ಸರಕಾರಿ ಶಾಲೆಗಳಲ್ಲಿ ವಿದ್ಯಾರ್ಥಿಗಳ ಸಂಖ್ಯೆ ಇಳಿಕೆಗೆ ಕಾರಣಗಳಾಗಿವೆ.

ಶೈಕ್ಷಣಿಕ ವರ್ಷ ಪ್ರಾರಂಭದಲ್ಲೆ ನಿರ್ಧಾರಗಳನ್ನು ಮಾಡಿ ತಕ್ಷಣ ಪ್ರತಿಕ್ರೀಯೆಗಳನ್ನು ಆರಂಭಿಸದೆ ಮೀನ ಮೇಷ ಎಣಿಸಿ ವರ್ಷದ ನಡುವಿನಲ್ಲಿ ಪ್ರಕ್ರೀಯೆಗಳನ್ನು ಕೈಗೆತ್ತಿಕೊಳ್ಳುವುದರಿಂದ ಅನೇಕ ತೊಂದರೆಗಳಾಗುತ್ತಿವೆ ಎಂಬುದನ್ನು ಶಿಕ್ಷಣ ಇಲಾಖೆ ಅರಿತುಕೊಳ್ಳಬೇಕು. ಶಿಕ್ಷರ ವರ್ಗಾವಣೆಗಳಿಗೆ ಇಲಾಖೆ ಅನೇಕ ರೀತಿಯಲ್ಲಿ ಅಂಶಗಳನ್ನು ಸಿದ್ದ ಮಾಡಿಕೊಂಡಿರಬಹುದು, ವಿದ್ಯಾರ್ಥಿಗಳ ಸಂಖ್ಯೆ ಕಡಿಮೆ ಇರುವ ಕಾರಣಕ್ಕೆ ಹೆಚ್ಚುವರಿಯಾಗಿರುವ ಶಿಕ್ಷಕರ ವರ್ಗಾವಣೆ ಇರಬಹುದು, ಇನ್ನು ಕೆಲವು ಶಿಕ್ಷಕರು ಸ್ವಯಂ ಪ್ರೇರಿತ ವರ್ಗಾವಣೆ ಬಯಸಿರಬಹುದು. ಇದರಿಂದ ವಿದ್ಯಾರ್ಥಿಗಳು ಹಾಗೂ ಶಾಲೆಗಳು ತೊಂದರೆಗಳಿಗೊಳ ಪಡುತ್ತವೆ. ಒಂದು ರೀತಿ ಇದು ಹೊಟ್ಟೆಗೆ ಹಿಟ್ಟಿಲ್ಲದಿದ್ದರೂ ಜುಟ್ಟಿಗೆ ಮಲ್ಲಿಗೆ ಹೂ ಮುಡಿದಂತೆ. ಈಗಿಗಾ ಅತೀ ಹೆಚ್ಚಾಗಿ ಸರಕಾರಿ ಶಾಲೆಗಳು ಮುಚ್ಚುತ್ತಿವೆ, ಶಾಲೆಯಲ್ಲಿನ ಮಕ್ಕಳ ಸಂಖ್ಯಾ ಬಲ ಇಳಿಕೆಯಾಗುತ್ತಿವೆ. ಕಾರಣ ಖಾಸಾಗಿ ಶಾಲೆಗಳತ್ತ ಹೆಚ್ಚಿನ ಒಲವು ಮೂಡಿರುವ ಕಾರಣ ಪೋಷಕರು ತಮ್ಮ ಮಕ್ಕಳನ್ನು ಖಾಸಾಗಿ ಶಾಲೆಯತ್ತ ಕರೆದೊಯ್ಯುತ್ತಿದ್ದಾರೆ. ಈ ರೀತಿ ಆಗುತ್ತಿರುವುದಕ್ಕೆ ಮೂಲಕ ಕಾರಣವೆ ಸರಕಾರ. ತಮಗೆ ಬೇಕಾದ ಹಾಗೆ ಸರಕಾರ ಹಾಗೂ ಸಂಬಂಧ ಪಟ್ಟ ಇಲಾಖೆ ನಡೆದುಕೊಳ್ಳುವುದರಿಂದಾಗಿ ಇವತ್ತು ಅದೆಷ್ಟೋ ಹೆಸರುಗಳಿಸಿದ ಶಾಲೆಗಳು ಮುಚ್ಚಿಹೋಗಿವೆ, ಇನ್ನು ಕೆಲವು ವಿದ್ಯಾ ದೇಗುಲಗಳು ಮಕ್ಕಳಿಲ್ಲದೆ ಬಿಕೋ ಎನ್ನುತ್ತಿವೆ ಇವೆಲ್ಲದರ ನಡುವೆ ಕೆಲವೊಂದು ಶಾಲೆಯಲ್ಲಿ ಮಕ್ಕಳಿದ್ದರೂ ಶಿಕ್ಷಕರ ಕೊರತೆ ಎದ್ದು ಕಾಣುತ್ತಿವೆ. ಸರಕಾರ ಇಂತ ವಿಷಯಗಳನ್ನರಿಯದೆಯೊ ಅಥವಾ ಕಣ್ಣು ಕಿವಿ ಇದ್ದು ಕುರುಡುತನ ಪ್ರದರ್ಶಿಸುತ್ತಿರುವುದೋ. ವರ್ಷದ ಪೂರ್ವದಲ್ಲಿ ಜೂನ್ ಅಥವಾ ಕೊನೆಯಲ್ಲಿ ಮಾರ್ಚ್‌ನಲ್ಲಿ ವರ್ಗಾವಣೆ ಪ್ರಕ್ರೀಯೆಗಳನ್ನು ನಡೆಸಿದರೆ ಶಿಕ್ಷಕರಿಗೂ ಒಂದಷ್ಟು ಪ್ರಯೋಜನವಿದೆ. ವಿದ್ಯಾರ್ಥಿಗಳ ಕಲಿಕೆಗೂ ಯಾವುದೆ ತೊಂದರೆಯಾಗದು, ಹಾಗೂ ಶಾಲೆಯಲ್ಲಿ ಕೆಲವೊಂದು ಕೊರತೆಗಳು ಎದ್ದು ಕಾಣದು.

ಇಲಾಖೆ ಈ ಎಲ್ಲಾ ಅಂಶಗಳನ್ನು ಗಮನಿಸಿಕೊಂಡು ಪ್ರಕ್ರೀಯೆಗಳನ್ನು ನಡೆಸಿದರೆ ಸರಕಾರಿ ಶಾಲೆಗಳಲ್ಲಿ ಮಕ್ಕಳ ಸಂಖ್ಯೆ ಕುಂಠಿತವಾಗದೆ ಮುಚ್ಚುವ ಹಂತದಲ್ಲಿದ್ದ ವಿದ್ಯಾ ದೇಗುಲಗಳು ಸಹ ಮತ್ತಷ್ಟು ಹೆಚ್ಚಿನ ಕೊಠಡಿಗಳ ಮೂಲಕ ಬಾಗಿಲು ತೆರೆಯಲು ಸಾಧ್ಯವಿದೆ. ಖಾಸಾಗಿ ಶಾಲೆಯತ್ತ ಇದ್ದ ಪೋಷಕರ ಒಲವು ಸರಕಾರಿ ಶಾಲೆಯತ್ತ ಮೂಡಿ, ಮಕ್ಕಳು ಇತ್ತ ಹೆಜ್ಜೆ ಹಾಕುವಂತೆ ಮಾಡಬಹುದು.



# ಸೆ 5 ರಂದು ಶಿಕ್ಷಕರ ದಿನಾಚರಣೆ ಎಲ್ಲಾ ಶಾಲೆ ಕಾಲೇಜುಗಳಲ್ಲಿ ಶಿಕ್ಷಕರ

☛ **– ವಿ.ಎಂ.ಎಸ್.ಗೋಪಿ**
■ ಉದಯವಾಹಿನಿ, ವಿಶೇಷ



ದಿನಾಚರಣೆ ಆಚರಿಸುತ್ತಾರೆ. ದೇಶ ಕಂಡ ಶ್ರೇಷ್ಠ ಶಿಕ್ಷಕ ಡಾ. ಸರ್ವಪಲ್ಲಿ ರಾಧಾಕೃಷ್ಣನ್ ಅವರ ಜನ್ಮ ದಿನದ ಅಂಗವಾಗಿ ಶಿಕ್ಷಕರ ದಿನಾಚರಣೆಯನ್ನು ಆಚರಣೆ ಮಾಡಲಾಗುತ್ತದೆ. ನಮಗೆ ವಿದ್ಯಾ ಕಲಿಸಿದ ಶಿಕ್ಷಕರು ಮತ್ತು ಕೆಲಸ ಹೇಳಿ ಕಲಿಸಿಕೊಟ್ಟ ಗುರುಗಳಿಗೆ ಪ್ರೀತಿಯ ನಮನಗಳು.

**ಗುರುಬ್ರಹ್ಮ ಗುರುವಿಷ್ಣು**
**ಗುರುದೇವೋ ಮಹೇಶ್ವರ**



**ಗುರುಸಾಕ್ಷಾತ್ ಪರಬ್ರಹ್ಮ**
**ತಸ್ಮೈಶ್ರೀ ಗುರುವೇ ನಮಃ**

ಈ ಸಾಲುಗಳೇ ಗುರುವಿನ ಮಹತ್ವವನ್ನು ಸಂಪೂರ್ಣವಾಗಿ ತಿಳಿಸಿಬಿಡುತ್ತವೆ. ಎಲ್ಲಾ ಮಕ್ಕಳಿಗೂ ತಾಯಿ ತಂದೆಯೇ ಮೊದಲ ಗುರು. ಮನೆಯ ಮೊದಲ ಪಾಠ ಶಾಲೆ ತನ್ನ ಮಕ್ಕಳಿಗೆ ಮೊದಲನೆಯ ಶಿಕ್ಷಕಿ ತಾಯಿ. ಇಲ್ಲಿ ಗುರುವೇ ಎಲ್ಲವೂ ಮತ್ತು ಅವರಿಂದಲೇ ಎಲ್ಲವೂ ಅನ್ನುವುದು ಸ್ಪಷ್ಟವಾಗುತ್ತದೆ. ಗುರುವಿನ ಸ್ಥಾನ ತುಂಬಾ ಪವಿತ್ರವಾದದ್ದು, ಜವಬ್ದಾರಿಯುತವಾದದ್ದು. ಈ ಸಮಾಜಕ್ಕೆ ಉತ್ತಮ ನಾಗರಿಕರನ್ನು ಕೊಡುವ ಸೃಷ್ಟಿಕರ್ತರು ಗುರು. ಮನುಷ್ಯನಾದ ಮೇಲೆ ತನ್ನ ಜೀವನದಲ್ಲಿ ಏನನ್ನಾದರೂ ಸಾಧಿಸಬೇಕೆಂದುಕೊಂಡಿರುತ್ತಾರೆ. ಗುರಿ ಎಷ್ಟು ಮುಖ್ಯವೋ ಅಷ್ಟೇ ಮುಖ್ಯವಾದವರು ಗುರು. ' ಮುಂದೆ ಗುರಿ ಇರಬೇಕು ಹಿಂದೆ ಗುರು ಇರಬೇಕು' ಅನ್ನೋ ಗಾದೆ ಮಾತು ತುಂಬಾ ಅರ್ಥಪೂರ್ಣವಾಗಿದೆ. ವಿದ್ಯಾರ್ಥಿಗಳು ತಮ್ಮ ಗುರಿಯನ್ನು.. ತಲುಪಬೇಕೆಂದರೆ ಗುರುವಿನ ಸಲಹೆ, ಸಹಕಾರ ಮತ್ತು

ಮಾರ್ಗದರ್ಶನ ಇರಲೇಬೇಕು. ಗುರುಗಳ ಸಹಾಯದಿಂದ ಮಾತ್ರ ನಾವು ಅಂದುಕೊಂಡ ಗುರಿ ತಲುಪಬಹುದು. ಗುರುವೆಂದರೆ ಕೇವಲ ಶಿಕ್ಷಕರಲ್ಲ ಜೀವನದಲ್ಲಿ ಸರಿಯಾದದಾರಿ ತೋರುವ ಪ್ರತಿಯೊಬ್ಬರೂ ಗುರುಗಳೇ. ನನ್ನನ್ನು ಜೀವನದಲ್ಲಿ ಉತ್ತಮ ವ್ಯಕ್ತಿಯನಾಗಿ ರೂಪಿಸಲು ನೀವು ಮಾಡಿದ ಎಲ್ಲಾ ಪ್ರಯತ್ನಗಳಿಗೆ ನಾನು ನಿಮಗೆ ಧನ್ಯವಾದ ಅರ್ಪಿಸುತ್ತೇನೆ ನನ್ನ ಎಲ್ಲಾ ಶಿಕ್ಷಕರಿಗೆ ಶಿಕ್ಷಕರ ದಿನಾಚರಣೆಯ ಶುಭಾಶಯಗಳು.

# ಡಾ:ಸರ್ವಪಲ್ಲಿ ರಾಧಾಕೃಷ್ಣನ್ ರವರ 137ನೇ ವರ್ಷದ ಜನ್ಮ ದಿನಾಚರಣೆ



**ಕಲಾ ಸಾಹಿತ್ಯ**
**ಕೃಷ್ಣಪ್ಪ ಲೇಖಕರು**
**ಪ್ರಗತಿ ಪರ ಚಿಂತಕ ಹಾಗೂ ವಿಮರ್ಶಕರು**
■ ಉದಯವಾಹಿನಿ, ವಿಶೇಷ

ಡಾ:ಎಸ್. ರಾಧಾಕೃಷ್ಣನ್ ರವರು 1888 ಸೆಪ್ಟಂಬರ್ 05 ರಂದು ಚಿತ್ತೂರು ಜಿಲ್ಲೆಯ ತಿರುತ್ತನಿ ಎಂಬ ಪುಣ್ಯಕ್ಷೇತ್ರದಲ್ಲಿ ಜನಿಸಿದರು.ತಂದೆ ವೀರಸ್ವಾಮಯ್ಯ ತಾಯಿ ಸೀತಮ್ಮ.

ಬಾಲ್ಯದಿಂದಲೂ ರಾಧಾಕೃಷ್ಣನ್ ಅವರಿಗೆ ತತ್ವಶಾಸ್ತ್ರ ಆಧ್ಯಾತ್ಮ ಇವುಗಳಲ್ಲಿ ಹೆಚ್ಚಿನ ಆಸಕ್ತಿ. ಗ್ರಂಥಗಳೇ ಅವರ ಬಾಲ್ಯ, ಯವ್ವನದ ಒಡನಾಡಿಗಳು. ಉತ್ತಮ ಸಂಸ್ಕಾರ ಜೊತೆಗೆ ಗುಣಮಟ್ಟದ ಶಿಕ್ಷಣ ದೊರೆತು ತತ್ವಶಾಸ್ತ್ರದಲ್ಲಿ ಸ್ನಾತಕೋತ್ತರ ಹಾಗೂ ಡಾಕ್ಟರೇಟ್ ಪದವಿಗಳಿಸಿದರು. ನಂತರ ಹಲವು ಕಾಲೇಜುಗಳಲ್ಲಿ ಪ್ರಾಧ್ಯಾಪಕರು ಹಾಗೂ ವಿಶ್ವವಿದ್ಯಾಲಯ ಕುಲಪತಿ ಗಳು ಸಹ ಆಗಿದ್ದರು.

ಡಾ:ಎಸ್.ರಾಧಾಕೃಷ್ಣನ್ ಅವರ ಅಸಾಧಾರಣ ಪ್ರತಿಭಾವಂತ ವೃತ್ತಿಜೀವನ ಮೈಸೂರು ವಿಶ್ವವಿದ್ಯಾಲಯದಿಂದ ಪ್ರಾರಂಭವಾಗಿ ಜಗತ್ಪ್ರಸಿದ್ಧ ಆಕ್ಸ್ಫರ್ಡ್ ವಿಶ್ವವಿದ್ಯಾಲಯದ ವರೆಗೂ ಕೊಂಡೊಯ್ಯಿತು. ಯುನೆಸ್ಕೋವಿನಿಂದ ಮಾಸ್ಕೋವಿನ ರಾಯಭಾರಿ ಕಚೇರಿ ವರೆಗೂ ವಿಸ್ತರಿಸಿತು. ಹಾಗೆಯೇ ಆಂಧ್ರಪ್ರದೇಶದ ವಿಶ್ವವಿದ್ಯಾಲಯದ ಉಪಕುಲಪತಿ ಸ್ಥಾನದಿಂದ ಭಾರತದ ಮೊದಲನೆಯ ಉಪರಾಷ್ಟ್ರಪತಿ ಮತ್ತು ಎರಡನೆಯ ರಾಷ್ಟ್ರಪತಿ ಸ್ಥಾನದವರೆಗೂ ಅನೇಕ ಉನ್ನತ ಹುದ್ದೆಗಳನ್ನು ಅಲಂಕರಿಸಿದರು. ಮೇರು ವ್ಯಕ್ತಿತ್ವ ಡಾ:ಎಸ್. ರಾಧಾಕೃಷ್ಣನ್ ಅವರದು. ಅವರು ಜಗತ್ಪ್ರಸಿದ್ಧ ತತ್ವಜ್ಞಾನಿ, ಘನ ವಿದ್ವಾಂಸ,ಶ್ರೇಷ್ಠ ಲೇಖಕ,ಅನನ್ಯ ವಾಗ್ಮಿ, ಅದ್ಭುತ ಭಾಷಣಕಾರರು, ಮಹಾಮಾನವತಾವಾದಿ ಮಿಗಿಲಾಗಿ ಸನಾತನ ಹಿಂದೂ ಧರ್ಮದ ವಕ್ತಾರ ಎಂದು ಭಾರತದ ಇತಿಹಾಸದಲ್ಲಿ ಪ್ರಖ್ಯಾತರಾಗಿದ್ದಾರೆ. ಹಿರಿಯರಿಂದ ಕಿರಿಯರಿಗೆ ಬರಬಹುದಾದ ಹುಟ್ಟಿನ ಹಿರಿಮೆಯನ್ನಾಗಲೀ, ಸಂಪತ್ತಿನ ಸೊಬಗನ್ನು ಆಗಲೀ ನಾನು ನನ್ನ ಎಳೆತನದಲ್ಲಿ ಕಾಣಲಿಲ್ಲ. ನಾನು ನಾನಾಗಿಯೇ ಬಾಳಿದೆ, ನಾನಾಗಿಯೇ ಬೆಳೆದೆ, ದೇವರ ದಯೆಯಿಂದ ಮಾತ್ರ ಬೆಳಕು ಕಂಡೆ ಎಂದು ರಾಧಾಕೃಷ್ಣನ್ ಅವರು ತಮ್ಮ ಬದುಕಿನ ರೀತಿಯನ್ನು ತಾವೇ ಬಣ್ಣಿಸಿಕೊಂಡಿದ್ದಾರೆ. ಡಾ:ಎಸ್. ರಾಧಾಕೃಷ್ಣನ್ ಅವರು ಶ್ರೇಷ್ಠ ಲೇಖಕರಾಗಿ ಭಾರತೀಯ ತತ್ವಜ್ಞಾನ ಎಂಬ ಹೆಸರಿನಲ್ಲಿ ಎರಡು ಸಂಪುಟಗಳನ್ನು ರಚಿಸಿದ್ದಾರೆ. ಉಪನಿಷತ್ತಿನ ತತ್ವಜ್ಞಾನ, ಆದರ್ಶವಾದಿಯ ಜೀವನದೃಷ್ಟಿ, ಪೌರಸ್ತ್ಯ ಧರ್ಮಗಳು ಮತ್ತು ಪಾಶ್ಚಾತ್ಯ ಆಲೋಚನೆ ಬದಲಾಗುತ್ತಿರುವ ವಿಶ್ವದಲ್ಲಿ ಮತಧರ್ಮ ಮೊದಲಾದವು ಅವರ ಪ್ರಮುಖ ಕೃತಿಗಳಾಗಿವೆ. 1954 ರಲ್ಲಿ ಭಾರತ ರತ್ನ ಪ್ರಶಸ್ತಿಯನ್ನು ಪ್ರಥಮವಾಗಿ ಸ್ವೀಕರಿಸಿದ ಸಿ.ರಾಜಗೋಪಾಲಾಚಾರಿ ರವರ ನಂತರ ಎರಡನೆಯವರಾದ ಡಾ: ಎಸ್. ರಾಧಾಕೃಷ್ಣನ್ ರವರಿಗೆ 1954 ರಲ್ಲಿ ಭಾರತ ಸರ್ಕಾರಭಾರತ ರತ್ನ ಪ್ರಶಸ್ತಿ ನೀಡಿ ಗೌರವಿಸಿತು . ಹಾಗೂ ದೇಶ–ವಿದೇಶಗಳಿಂದ ಹಲವಾರು ಪ್ರಶಸ್ತಿಗಳೂ ಕೂಡ ಸಂದಿವೆ. ತತ್ವಜ್ಞಾನಿ,ಆದರ್ಶ ಶಿಕ್ಷಕರೂ ಆಗಿದ್ದ ರಾಧಾಕೃಷ್ಣನ್ ಅವರ ಜನ್ಮದಿನವಾದ ಸೆಪ್ಟಂಬರ್ 5 ರಂದು ಶಿಕ್ಷಕರ ದಿನವೆಂದು ಪ್ರತಿವರ್ಷ ರಾಷ್ಟ್ರೀಯ ಶಿಕ್ಷಕರ ದಿನಾಚರಣೆಯನ್ನಾಗಿ ಆಚರಿಸಲಾಗುತ್ತಿದೆ. ಡಾ:ಎಸ್. ರಾಧಾಕೃಷ್ಣನ್ ಅವರು 1975 ಏಪ್ರಿಲ್ 17 ರಂದು ತಮ್ಮ 87 ನೇ ವಯಸ್ಸಿನಲ್ಲಿ ನಿಧನರಾದರು. ಇಡೀ ಭಾರತ ಅವರ ಸಾವಿಗಾಗಿ ಸಂತಾಪ ಸೂಚಿಸಿತು. ವಿಶ್ವದ ಅನೇಕ ರಾಷ್ಟ್ರಗಳ ನಾಯಕರುಗಳೂ ಸಹ ಈ ಮಹಾನ್ ತತ್ವಜ್ಞಾನಿಗೆ ಶ್ರದ್ಧಾಂಜಲಿ ಅರ್ಪಿಸಿದರು. ಇಂದು ಅವರ 137 ನೇ ವರ್ಷದ ಜನ್ಮದಿನಾಚರಣೆಯ ಸಂಬಂಧ ಇಂತಹ ಮಹಾನ್ ತತ್ವಜ್ಞಾನಿ ಹಾಗೂ ಮಾನವತಾವಾದಿಯವರನ್ನು ಸ್ಮರಿಸಿ, ನೆನೆಯುತ್ತಾ ಅವರ ಆತ್ಮಕ್ಕೆ ಶಾಂತಿ ಮತ್ತು ಸದ್ಗತಿ ದೊರಕಲೆಂದು ಭಾರತೀಯರಾದ ನಾವೆಲ್ಲರೂ ಆ ಭಗವಂತನಲ್ಲಿ ಪ್ರಾರ್ಥಿಸೋಣ.



## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಬೆಳಿಗ್ಗೆ | 10:30 ರಿಂದ 12:00 |
| ಗುಳಿಕ ಕಾಲ | ಬೆಳಿಗ್ಗೆ | 07:30 ರಿಂದ 09:00 |
| ಯಮಗಂಡ ಕಾಲ | ಮಧ್ಯಾಹ್ನ | 03:00 ರಿಂದ 04:30 |

**ಮೇಷ** ನಿಮ್ಮ ಸಾಮಾನ್ಯ ಜ್ಞಾನದ ಜೊತೆಗೆ ನಿಮ್ಮ ನಿರಂತರ ಪ್ರಯತ್ನ ಖಂಡಿತವಾಗಿಯೂ ಯಶಸ್ಸು ತರುವುದರಿಂದ ತಾಳ್ಮೆಯಿಂದಿರಿ. ಮೌಲ್ಯ ಹೆಚ್ಚಾಗುವ ವಸ್ತುಗಳನ್ನು ಖರೀದಿಸಲು ಪರಿಪೂರ್ಣ ದಿನ.

**ವೃಷಭ** ಪೂರ್ವಜರ ಆಸ್ತಿಯ ಉತ್ತರಾಧಿಕಾರಿತ್ವದ ಸುದ್ದಿ ಇಡೀ ಕುಟುಂಬವನ್ನು ಸಂತುಷ್ಟಗೊಳಿಸಬಹುದು. ನೀವು ಪ್ರೀತಿಯ ಮನೋಭಾವದಲ್ಲಿರುತ್ತೀರಿ ಮತ್ತು ಅದಕ್ಕೆ ಅವಕಾಶಗಳೂ ಸಾಕಷ್ಟಿರುತ್ತವೆ.

**ಮಿಥುನ** ಇಂದು, ನೀವು ಮತ್ತು ನಿಮ್ಮ ಪ್ರೀತಿ ಸಂಗಾತಿ ಪ್ರೀತಿಯ ಸಾಗರದಲ್ಲಿ ತೇಲುತ್ತೀರಿ ಮತ್ತು ಪ್ರೀತಿಯ ಔನ್ನತ್ಯವನ್ನು ಅನುಭವಿಸುತ್ತೀರಿ. ನಿಮ್ಮ ಭಾರೀ ಆತ್ಮವಿಶ್ವಾಸದ ಲಾಭ ತೆಗೆದುಕೊಳ್ಳಿ.

**ಕರ್ಕಾಟಕ** ನಿಮ್ಮ ಮನಸ್ಸು ಒಳ್ಳೆಯ ವಿಷಯಗಳನ್ನು ಗ್ರಹಿಸುತ್ತದೆ. ನಿಮ್ಮ ತಂದೆಯ ಯಾವುದೇ ಸಲಹೆ ಇಂದು ಕೆಲಸದ ಸ್ಥಳದಲ್ಲಿ ಇಂದು ನಿಮಗೆ ಹಣದ ಪ್ರಯೋಜನವನ್ನು ನೀಡುತ್ತದೆ.

**ಸಿಂಹ** ಇಂದು ನೀವು ಚೈತನ್ಯಯುಕ್ತವಾಗಿರುತ್ತೀರಿ, ನೀವೇನೇ ಮಾಡಿದರೂ ಸಾಮಾನ್ಯವಾಗಿ ನೀವು ತೆಗೆದುಕೊಳ್ಳುವ ಅರ್ಧ ಸಮಯದಲ್ಲಿ ಅದನ್ನು ಮಾಡಲು ನಿಮಗೆ ಸಾಧ್ಯವಾಗುತ್ತದೆ.

**ಕನ್ಯಾ** ವೈಯಕ್ತಿಕ ಜೀವನದ ಜೊತೆಗೆ ಕೆಲವು ಧರ್ಮಾರ್ಥ ಕಾರ್ಯಗಳಲ್ಲೂ ನಿಮ್ಮನ್ನು ತೊಡಗಿಸಿಕೊಳ್ಳಿ. ಇದು ವೈಯಕ್ತಿಕ ಜೀವನವನ್ನು ಘಾಸಿಗೊಳಿಸದೇ ನಿಮಗೆ ಮಾನಸಿಕ ಶಾಂತಿ ನೀಡುತ್ತದೆ.

**ತುಲಾ** ನೀವು ನಿಮಗಾಗಿ ಸಾಕಷ್ಟು ಸಮಯ ಹೊಂದಿರುವುದರಿಂದ ನಿಮ್ಮ ಒಳ್ಳೆಯ ಆರೋಗ್ಯದ ಸಲುವಾಗಿ ಒಂದು ಧೀರ್ಘ ನಡಿಗೆಗೆ ಹೋಗಿ. ದೀರ್ಘ ಕಾಲ ಬಾಕಿಯಿದ್ದ ಬಾಕಿಗಳು ಕೊನೆಗೂ ದೊರಕುತ್ತವೆ.

**ವೃಶ್ಚಿಕ** ನೀವು ವಿಶ್ರಾಂತಿ ಪಡೆಯಲು ಸಾಧ್ಯವಾಗುವ ಒಂದು ದಿನ. ನಿಮ್ಮ ಸ್ನಾಯುಗಳಿಗೆ ವಿಶ್ರಾಂತಿ ನೀಡಲು ತೈಲದಿಂದ ನಿಮ್ಮ ದೇಹಕ್ಕೆ ಮಸಾಜ್ ಮಾಡಿ. ತನ್ನ ಹಣವನ್ನು ಹೇಗೆ ಸಂಗ್ರಹಿಸುವುದು.

**ಧನಸ್ಸು** ವಿಶ್ರಾಂತಿ ಪ್ರಮುಖವಾದ ಒಂದು ದಿನ, ಇತ್ತೀಚೆಗೆ ನೀವು ಬಹಳಷ್ಟು ಮಾನಸಿಕ ಒತ್ತಡ ಎದುರಿಸುತ್ತಿದ್ದೀರಿ, ಮನೋಲ್ಲಾಸ, ಮನೋರಂಜನೆ ನಿಮಗೆ ವಿಶ್ರಾಂತಿ ಪಡೆಯಲು ಸಹಾಯ ಮಾಡುತ್ತದೆ.

**ಮಕರ** ನೀವು ಕೆಲವು ಆಘಾತಗಳನ್ನು ಎದುರಿಸುವುದರಿಂದ ನೀವು ಬಹಳ ಧೈರ್ಯ ಹಾಗೂ ಶಕ್ತಿಯನ್ನು ಪ್ರದರ್ಶಿಸುವ ಅಗತ್ಯವಿದೆ. ನೀವು ನಿಮ್ಮ ಆಶಾವಾದಿ ನಿಲುವಿನಿಂದ ಇವುಗಳಿಂದ ಸುಲಭವಾಗಿ ಹೊರಬರಬಹುದು.

**ಕುಂಭ** ಹೆದರಿಕೆ ನಿಮ್ಮ ಸಂತೋಷವನ್ನು ಹಾಳುಗೆಡವಬಹುದು. ನೀವು ಇದು ನಮ್ಮ ಆಲೋಚನೆಗಳು ಮತ್ತು ಕಲ್ಪನೆಯ ಪ್ರಭಾವವೆಂದು ಅರ್ಥಮಾಡಿಕೊಳ್ಳಬೇಕು. ಇದು ಸ್ವಾಭಾವಿಕತೆಯನ್ನು ಕೊಲ್ಲುತ್ತದೆ.

**ಮೀನ** ವಿಶೇಷವಾಗಿ ಹೃದಯ ರೋಗಿಗಳು ಕಾಫಿಯನ್ನು ಬಿಡಬೇಕು. ಆಪ್ತ ಸ್ನೇಹಿತನ ಸಹಾಯದಿಂದ ಕೆಲವು ವ್ಯಾಪಾರಿಗಳಿಗೆ ಹಣದ ಲಾಭವಾಗುವ ಸಾಧ್ಯತೆ ಇದೆ. ಈ ಹಣ ನಿಮ್ಮ ಅನೇಕ ಸಮಸ್ಯೆಗಳನ್ನು ದೂರ ಮಾಡಬಹುದು.

### • ಮಾರಾಟಗಾರರು ಖುಷ್, ಖರೀದಿದಾರರು ಠುಸ್ ಠುಸ್

# ಮಳೆಗಾಲದಲ್ಲೂ ಕಡಿಮೆ ಆಗಿಲ್ಲ ಎಳನೀರು ದರ

• ಉದಯವಾಹಿನಿ ಗಜೇಂದ್ರಗಡ



- ಗಜೇಂದ್ರಗಡ ಪಟ್ಟಣದಲ್ಲಿ 60 ರೂ. ತಲುಪಿದ ಎಳನೀರು ಬೆಲೆ.
- ಬೇಡಿಕೆ ತಗ್ಗಿದರೂ ಏರುತ್ತಲೇ ಇರುವ ಎಳನೀರು ಬೆಲೆ.
- ಮಳೆಗಾಲದಲ್ಲೂ ಹೆಚ್ಚಿನ ದರಕ್ಕೆ ಮಾರಾಟವಾಗುತ್ತಿದೆ ಎಳೆನೀರು.

**ಲಾಭ ರೈತರಿಗೆ ಸಿಗದೆ ಮಧ್ಯವರ್ತಿಗಳು, ವ್ಯಾಪಾರಿಗಳ ಪಾಲಾಗುತ್ತಿದೆ**

ಪಟ್ಟಣದ ಮಾರುಕಟ್ಟೆಯಲ್ಲಿ ಜಿಟಿಜಿಟಿ ಮಳೆಯಲ್ಲೂ ಎಳನೀರಿನ ದರ ಕೇಳಿದರೆ ಆಶ್ಚರ್ಯ ಪಡುವಂತಾಗಿದೆ. ಬೇಸಿಗೆಯಲ್ಲಿ ಮಾತ್ರ ಬೇಡಿಕೆ ಹೆಚ್ಚಾಗುವ ಎಳನೀರಿನ ದರ ಮಳೆಗಾಲದಲ್ಲೂಈಗ 60 ರೂ. ತಲುಪಿದೆ. ಸಣ್ಣ ಎಳನೀರಿಗೂ ಕನಿಷ್ಠ 50 ರೂ. ಇದೆ. ಎಳನೀರಿನ ಇಳುವರಿ ಕಡಿಮೆಯಾಗಿರುವ ಹಿನ್ನೆಲೆಯಲ್ಲಿ ಸಹಜವಾಗಿ ತೆಂಗಿನಕಾಯಿ, ಎಳನೀರಿನ ಬೆಲೆ ಹೆಚ್ಚಾಗಿದೆ.

ಮಳೆಗಾಲದಲ್ಲೂ ಎಳನೀರಿನ ಬೆಲೆ ಇಳಿಕೆಯಾಗಿಲ್ಲ ಎಂದರೆ ಅದು ನಿಜಕ್ಕೂ ಆಶ್ಚರ್ಯವೇ ಸರಿ. ಅದರಲ್ಲೂ ಗುಣಮಟ್ಟದ ಎಳನೀರು ಎಲ್ಲೂ ಸಿಗುತ್ತಿಲ್ಲ. ಎರಡನೇ ದರ್ಜೆಯ ಎಳನೀರಷ್ಟೇ ಸ್ಥಳೀಯವಾಗಿ ಸಿಗುತ್ತಿದೆ. ಇದರ ಲಾಭ ರೈತರಿಗೆ ಸಿಗದೆ ಮಧ್ಯವರ್ತಿಗಳು, ವ್ಯಾಪಾರಿಗಳ ಪಾಲಾಗುತ್ತಿದೆ.

ವ್ಯಾಪಾರಿಗಳು ರೈತರಿಗೆ 30-33 ರೂ. ನೀಡಿ ತೆಂಗಿನ ತೋಟದಲ್ಲೇ ಎಳನೀರು ಖರೀದಿಸುತ್ತಿದ್ದಾರೆ. ಮರದಿಂದ ಎಳನೀರು ಇಳಿಸುವುದು, ವಾಹನಗಳಿಗೆ ತುಂಬುವುದು, ಸಾಗಣೆ ಖರ್ಚು ಎಲ್ಲವೂ ವ್ಯಾಪಾರಿಗಳದ್ದು. ಈ ಎಲ್ಲಾ ವೆಚ್ಚವನ್ನು ಸೇರಿಸಿ ಪಟ್ಟಣದ ಮುಕ್ತ ಮಾರುಕಟ್ಟೆಯಲ್ಲಿ 50 ರೂ.ಗೆ ಎಳನೀರು ಮಾರಾಟ ಮಾಡುತ್ತಿದ್ದಾರೆ.

ಶ್ರಾವಣ ಮೊದಲು ತೆಂಗಿನಕಾಯಿಗೆ ಅಭಾವ ಶುರುವಾಗಿ ಅದರ ಬೆಲೆ ಹೆಚ್ಚಾಯಿತು. ಪರಿಣಾಮ ತೆಂಗಿನಕಾಯಿಗಾಗಿ ಒಂದಷ್ಟು ರೈತರು ಎಳನೀರು ಕೊಯ್ಲುಮಾಡದೆ ಬಿಟ್ಟಿದ್ದರಿಂದ ಈಗ ತೆಂಗಿನಕಾಯಿ, ಎಳನೀರು ಎರಡಕ್ಕೂ ಅಭಾವ ಸೃಷ್ಟಿಯಾಗಿದೆ. ಫಸಲು ಕಡಿಮೆಯಾಗಿರುವ ಕಾರಣ ಸಹಜವಾಗಿಯೇ ತೆಂಗು ಮತ್ತು ಎಳನೀರಿಗೆ ಬೇಡಿಕೆ ಹೆಚ್ಚಾಗಿದೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ತೆಂಗಿನ ಸಸಿಗಳ ಮಾರಾಟ ಜೋರಾಗಿದೆ. ಅದರಲ್ಲೂ ಎಳನೀರಿಗೆ ಬಂಪರ್ ಬೆಲೆ ಬಂದಿದೆ. ಆದರೆ, ಕಳೆದ ವರ್ಷ ಎಳನೀರಿಗೆ ಹೆಚ್ಚಿನ ಬೇಡಿಕೆ ಇದ್ದಿದ್ದರಿಂದ ಬಹುತೇಕ ರೈತರು ಗರಿಷ್ಠ ಪ್ರಮಾಣದಲ್ಲಿ ಎಳನೀರು ಇಳಿಸಿದ್ದರು. ಜತೆಗೆ, ಬಯಲು ಸೀಮೆ ಭಾಗದಿಂದ ಹೆಚ್ಚಿನ ಬೇಡಿಕೆ ಬಂದ ಹಿನ್ನೆಲೆಯಲ್ಲಿ ಒಳ್ಳೆಯ ಬೆಲೆಯೂ ಸಿಕ್ಕಿದ್ದರಿಂದ ನಿತ್ಯ ಲೋಡ್‌ಗಟ್ಟಲೆ ಎಳನೀರು ಮಾರಾಟ ನಡೆಸಲಾಗಿದೆ. ಸಾಧಾರಣ ಗಾತ್ರದ ಎಳನೀರಿಗೆ 50 ರೂ., ಗುಣಮಟ್ಟದ ದಪ್ಪ ಎಳನೀರಿಗೆ 60 ರೂ. ಇದೆ. ಗಜೇಂದ್ರಗಡ, ಸುತ್ತಲಿನ ಗ್ರಾಮಗಳ ತೋಟ ಬದುವಿನಲ್ಲಿ ಬೆಳೆಯಲಾದ ತೆಂಗಿನ ಗಿಡದಿಂದ ರೈತರು ಮತ್ತು ದಾವಣಗೆರೆಯಿಂದ ತಿಂಗಳಲ್ಲಿ ಒಂದು ಬಾರಿ ತರಿಸಲಾಗುತ್ತಿದೆ. ಎಲ್ಲಾ ಖರ್ಚು ಸೇರಿ ಒಂದು ಎಳನೀರಿಗೆ 40 ರೂ. ಗಿಂತಲೂ ಹೆಚ್ಚು ಖರ್ಚಾಗಿದೆ. ಹೀಗಾಗಿ ಒಂದು ಎಳನೀರಿಗೆ 50 ರಿಂದ 60 ರೂ. ವರೆಗೆ ಮಾರಾಟ ಮಾಡುತ್ತಿದ್ದರೂ ಗಿರಾಕಿಗಳು ಕಡಿಮೆ ಆಗಿದ್ದಾರೆ ಎಳನೀರು ಮಾರಾಟಗಾರ ತೇಜಪ್ಪ ಮಾಳೋತ್ತರ ಹೇಳುತ್ತಾರೆ.

**ಬೆಲೆ ಹೆಚ್ಚಾಗುವ ಆತಂಕ:** ಶ್ರಾವಣ ಕಳೆದ ಪ್ರಯುಕ್ತ ತೆಂಗಿನಕಾಯಿ ಬೆಲೆಯು ಪ್ರಸ್ತುತ ಸ್ವಲ್ಪ ಮಟ್ಟಿಗೆ ತಗ್ಗಿದೆ. ಆದರೆ, ಎಳನೀರಿನ ಬೆಲೆ ಮಾತ್ರ ಏರುಮುಖವಾಗಿದೆ. ಹೀಗಾಗಿ ಎಳನೀರು ಗ್ರಾಹಕರ ಕೈ ಸುಡುತ್ತಿದ್ದು ಜೇಬಿಗೆ ಭಾರವಾಗಿದೆ. ಮಳೆಗಾಲದಲ್ಲೂ ಇಷ್ಟು ಬೆಲೆ ಇರುವ ಎಳನೀರಿನ ಬೆಲೆಯು ಮುಂದಿನ ಬೇಸಿಗೆಗೆ ಇನ್ನಷ್ಟು ಹೆಚ್ಚಾಗಬಹುದೆಂಬ ಆತಂಕವೂ ಗ್ರಾಹಕರನ್ನು ಕಾಡುತ್ತಿದೆ.

**ರೋಗಿಗಳಿಂದ ಹೆಚ್ಚು ಎಳನೀರು ಖರೀದಿ**

ಎಳನೀರು ಕಡಿಮೆ ಬೆಲೆಗೆ ಎಲ್ಲಿಯೂ ದೊರೆಯುತ್ತಿಲ್ಲ. ಸೈಕಲ್, ಕೈ ಗಾಡಿಗಳಲ್ಲಿ ಎಳನೀರನ್ನು ಇಟ್ಟುಕೊಂಡು ಬಸ್ ನಿಲ್ದಾಣ ಎದುರಿಗೆ, ಕೆನರಾ ಬ್ಯಾಂಕ್ ಬಳಿ, ಡಾ.ಅಂಬೇಡ್ಕರ್ ವೃತ್ತ, ಕಿತ್ತೂರ ರಾಣಿ ಚೆನ್ನಮ್ಮಾ ವೃತ್ತಗಳಲ್ಲಿ ಎಳನೀರಿಗೆ ಬೇಡಿಕೆ ಕಡಿಮೆಯಾದರೂ 50 ರೂ.ಗೆ ಎಳನೀರು ಮಾರಾಟ ಮಾಡುತ್ತಿದ್ದಾರೆ. ಈಗ ಹೆಚ್ಚಾಗಿ ರೋಗಿಗಳು ಎಳನೀರು ಖರೀದಿಸುತ್ತಿದ್ದಾರೆ ಎನ್ನುತ್ತಾರೆ ಮಾರಾಟಗಾರರು. ರಾಜ್ಯ ರಾಜಧಾನಿ ಬೆಂಗಳೂರಿನಲ್ಲಿ ಎಳನೀರು ಬೆಲೆ 80 ರೂ. ತಲುಪಿದೆ.

## ಬೆಳೆ ಹಾನಿಗೆ ಪರಿಹಾರಕ್ಕೆ ಆಗ್ರಹ

• ಉದಯವಾಹಿನಿ ಹುಮನಾಬಾದ

ಅತಿವೃಷ್ಟಿಯಿಂದ ಜಿಲ್ಲೆಯ ರೈತರು ಸಂಕಷ್ಟದಲ್ಲಿ ಇದ್ದಾರೆ. ಪ್ರತಿ ಎಕರೆಗೆ ರೂ.25 ಸಾವಿರ ಪರಿಹಾರ ಒದಗಿಸಬೇಕು ಎಂದು ಕರ್ನಾಟಕ ದಲಿತ ಸಂಘರ್ಷ ಸಮಿತಿಯಿಂದ ( ಅಂಬೇಡ್ಕರ್ ವಾದ) ಆಗ್ರಹಿಸಿದೆ. ಈ ಕುರಿತು ಮುಖ್ಯಮಂತ್ರಿಗಳಿಗೆ ಬರೆದ ಮನವಿ ಪತ್ರವನ್ನು ತಹಶೀಲ್ದಾರ್ ಅಂಜುಂ ತಬಸುಮ್ ಅವರಿಗೆ ಸಲ್ಲಿಸಿದರು. ನಂತರ ಸಂಘಟನೆ ತಾಲ್ಲೂಕು ಸಂಚಾಲಕ ರಾಹುಲ್ ಉದ್ದಾ ಮಾತನಾಡಿ, ಮಳೆಯಿಂದ ರೈತರು ಬೆಳೆದ್ದಿದ್ದ ಬೆಳೆಗಳು ಸಂಪೂರ್ಣ ನಾಶವಾಗಿವೆ .

ಸರ್ಕಾರ ರೈತರ ಪ್ರತಿ ಎಕರೆಗೆ 25 ಸಾವಿರ ಹಣ ಖಾತೆಗೆ ನೇರವಾಗಿ ಜಮಾ ಮಾಡಬೇಕು. ಡಿಸಿಸಿ ಬ್ಯಾಂಕ್ ನಿಂದ ಸಾಲ ನೀಡಬೇಕು. ಹಾನಿಯಾದ ಮನೆಗಳನ್ನು ಕಟ್ಟಿಸಿ ಕೊಡಬೇಕು ಎಂದು ಒತ್ತಾಯಿಸಿದರು.

## ಸ್ವಚ್ಛತಾ ಅಭಿಯಾನಕ್ಕೆ ಚಾಲನೆ

• ಉದಯವಾಹಿನಿ ರೋಣ

ಸ್ವಚ್ಛ ಭಾರತ ಮಿಷನ್ ನಡಿ ಗ್ರಾಮೀಣ ಪ್ರದೇಶಗಳಲ್ಲಿ ಸ್ವಚ್ಛತೆಯ ಅರಿವು ಮೂಡಿಸುವ ಅಭಿಯಾನಕ್ಕೆ ರೋಣ ತಾಲ್ಲೂಕಿನಲ್ಲಿ ಮತ್ತಷ್ಟು ವೇಗ ಸಿಕ್ಕಿದೆ. ಈ ಹಿನ್ನೆಲೆಯಲ್ಲಿ ರೋಣ ತಾಲ್ಲೂಕ ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳಾದ ಚಂದ್ರಶೇಖರ ಬಿ. ಕಂದಕೂರ ಅವರು ಹೊಳೆ ಆಲೂರು ಗ್ರಾಮಕ್ಕೆ ಭೇಟಿ ನೀಡಿ ಸ್ವಚ್ಛತಾ ಅಭಿಯಾನದಲ್ಲಿ ಭಾಗವಹಿಸಿ ಗ್ರಾಮಸ್ಥರಲ್ಲಿ ಜಾಗೃತಿ ಮೂಡಿಸಿದರು. ಹೊಳೆ ಆಲೂರ ಗ್ರಾಮದಲ್ಲಿನ ಅಂಗಡಿ ಮುಂಗಟ್ಟುಗಳಿಗೆ ಭೇಟಿ ನೀಡಿ ಸ್ವಚ್ಛತೆಯನ್ನು ಪರಿಶೀಲಿಸಿದರು. ಸ್ವಚ್ಛತಾ ವಾಹನಗಳ ಮೂಲಕ ಕಸದ ಸರಿಯಾದ ಕಸ ವಿಲೇವಾರಿ ವಿಧಾನ, ಕುಡಿಯುವ ನೀರಿನ ಗುಣಮಟ್ಟದ ಕಾಪಾಡುವಿಕೆ ಹಾಗೂ ಪ್ಲಾಸ್ಟಿಕ್ ನಿಷೇಧದ ಬಗ್ಗೆ ವ್ಯಾಪಾರಿಗಳು ಮತ್ತು ಗ್ರಾಹಕರಿಗೆ ಅರಿವು ನೀಡಿದರು. ''ಸ್ವಚ್ಛತೆಯು ನಮ್ಮ ಜವಾಬ್ದಾರಿ ಮಾತ್ರವಲ್ಲ, ಅದು ನಮ್ಮ ಆರೋಗ್ಯ ಮತ್ತು ಪರಿಸರದ ರಕ್ಷಣೆಗೆ ಮೂಲಭೂತ'' ಎಂದು ಒತ್ತಿ ಹೇಳಿದ ಅವರು ಪ್ಲಾಸ್ಟಿಕ್ ಬದಲಿಗೆ ಕಾಗದದ ಚೀಲಗಳು ಹಾಗೂ ಬಟ್ಟೆಯ ಚೀಲಗಳ ಬಳಕೆಯನ್ನು ಉತ್ತೇಜಿಸುವಂತೆ ಗ್ರಾಮಸ್ಥರಿಗೆ ಕರೆ ನೀಡಿದರು.

# ಸೈನಿಕರಂತೆ ಕೆಲಸ ನಿರ್ವಹಿಸುವ ಪತ್ರಿಕಾ ವಿತರಕರು

• ಉದಯವಾಹಿನಿ ಬೀದರ್



ದೇಶದ ಗಡಿ ಭಾಗದಲ್ಲಿ ಬಿಸಿಲು, ಮಳೆ, ಚಳಿ ಲೆಕ್ಕಿಸದೇ ಹಗಲು-ರಾತ್ರಿ ವರ್ಷವಿಡೀ ಕೆಲಸ ನಿರ್ವಹಿಸುವ ಯೋಧರಂತೆ ಪತ್ರಿಕಾ ವಿತರಕರದ್ದು ಕೂಡ ತ್ಯಾಗದ ಕಾರ್ಯ. ಎಂತಹುದೇ ಪ್ರತಿಕೂಲ ಸನ್ನಿವೇಶವಿದ್ದರೂ ತಮ್ಮ ಜವಾಬ್ದಾರಿಯಿಂದ ಹಿಂದಡಿ ಇರಿಸುವುದಿಲ್ಲ, ಸೈನಿಕರಂತೆ ಇವರು ಕೂಡ ಶಿಸ್ತು, ಸಮಯ ಪಾಲನೆ ಹಾಗೂ ಬದ್ಧತೆಗೆ ಹೆಸರಾಗಿದ್ದಾರೆ. ವಾಸ್ತವದಲ್ಲಿ ಇವರೇ ದಿನಪತ್ರಿಕೆಗಳ ಮುಖ್ಯ ಜೀವಾಳ ಎಂದರೂ ತಪ್ಪಾಗಲಾರದು.

ಪತ್ರಿಕಾ ವರದಿಗಾರರು ಹಳ್ಳಿಯಿಂದ ದಿಲ್ಲಿವರೆಗೆ ನಡೆಯುವ ಘಟನೆಗಳ ಕುರಿತು ಸುದ್ದಿ ಸಂಗ್ರಹ ಮಾಡಿ ಡೆಸ್ಕ್‌ಗೆ ಕಳುಹಿಸುತ್ತಾರೆ. ಡೆಸ್ಕ್‌ನಲ್ಲಿ ಉಪಸಂಪಾದಕರು, ಪುಟ ವಿನ್ಯಾಸ ಮಾಡುವವರು ಸುದ್ದಿ, ಚಿತ್ರಗಳನ್ನು ಅಚ್ಚುಕಟ್ಟಾಗಿ ಜೋಡಿಸಿ ಅಂದವಾಗಿ ಪುಟಗಳನ್ನು ಮಾಡುತ್ತಾರೆ. ಬಳಿಕ ಅದನ್ನು ಮುದ್ರಣಕ್ಕೆ ಕಳುಹಿಸಿಕೊಡಲಾಗುತ್ತದೆ. ಬಳಿಕ ಆಯಾ ಜಿಲ್ಲೆ, ತಾಲ್ಲೂಕು, ಹೋಬಳಿ, ಹಳ್ಳಿ ಸೇರಿದಂತೆ ಎಲ್ಲಾ ಕಡೆಗಳಲ್ಲಿರುವ ಏಜೆಂಟರು, ಪತ್ರಿಕಾ ವಿತರಕರಿರುವ ಸ್ಥಳಗಳಿಗೆ ಬಸ್, ವ್ಯಾನ್, ಜೀಪುಗಳಲ್ಲಿ ಪತ್ರಿಕೆಗಳ ಬಂಡಲ್‌ಗಳನ್ನು ಕಳುಹಿಸಿಕೊಡಲಾಗುತ್ತದೆ. ಆನಂತರ ಅವುಗಳನ್ನು ವ್ಯವಸ್ಥಿತವಾಗಿ ಜೋಡಿಸಿಕೊಂಡು, ಆಯಾ ಬಡಾವಣೆಗಳಿಗೆ ಎಷ್ಟು ಪತ್ರಿಕೆಗಳು ಬೇಕೋ ಅಷ್ಟನ್ನು ಪ್ರತ್ಯೇಕವಾಗಿ ವಿಂಗಡಿಸಿ, ಕಳುಹಿಸುವ ವ್ಯವಸ್ಥೆ ಮಾಡುತ್ತಾರೆ. ಜನರೆಲ್ಲ ಗಾಢ ನಿದ್ರೆಯಲ್ಲಿರುವಾಗಲೇ ಏಜೆಂಟರು, ಪತ್ರಿಕಾ ವಿತರಕರ ಕೆಲಸ ಶುರುವಾಗುತ್ತದೆ. ನಿತ್ಯ ತಡರಾತ್ರಿ 2ರಿಂದ 3 ಗಂಟೆಯ ನಡುವೆ ಪತ್ರಿಕೆಗಳು ಬರುತ್ತವೆ. ಅಷ್ಟರಲ್ಲಾಗಲೇ ಅವರು ಕೆಲಸಕ್ಕೆ ಅಣಿಯಾಗಿರುತ್ತಾರೆ. ಎಷ್ಟೇ ಮಳೆ, ಗಾಳಿ, ಚಳಿಯಿದ್ದರೂ ಅದನ್ನು ಲೆಕ್ಕಿಸುವುದಿಲ್ಲ. ನಸುಕಿನ ಜಾವದಲ್ಲೇ ಬೈಸಿಕಲ್, ಬೈಕುಗಳ ಮೇಲೆ ಪ್ರತಿಯೊಂದು ಬಡಾವಣೆಗಳಿಗೆ ತೆರಳಿ ಮನೆಗಳಿಗೆ ಪತ್ರಿಕೆಗಳನ್ನು ತಲುಪಿಸುತ್ತಾರೆ. ನಿತ್ಯವೂ ನಿರ್ದಿಷ್ಟ ಸಮಯದೊಳಗೆ ಪತ್ರಿಕೆಗಳನ್ನು ಮುಟ್ಟಿಸುತ್ತಾರೆ. ಜನ ಇನ್ನೂ ಎಚ್ಚರಗೊಂಡಿರುವುದಿಲ್ಲ, ಅಷ್ಟರೊಳಗೆ ಜನರ ಮನೆಯ ಅಂಗಳದಲ್ಲಿ ಪತ್ರಿಕೆ ಕಾಣಿಸಿಕೊಳ್ಳುತ್ತದೆ. ಇವರ ಅವಿರತ ಶ್ರಮದಿಂದ ಬೆಳ್ಳಂಬೆಳಿಗ್ಗೆ ಜನ ಬಿಸಿ ಬಿಸಿ ಚಹಾ ಹೀರುತ್ತ ಜಗತ್ತಿನಲ್ಲಾಗುವ ವಿದ್ಯಮಾನಗಳನ್ನು ಪತ್ರಿಕೆಗಳ ಮೂಲಕ ತಿಳಿದುಕೊಳ್ಳುತ್ತಾರೆ.

ಬಹುತೇಕ ಏಜೆಂಟರು, ಪತ್ರಿಕಾ ವಿತರಕರು ಇದನ್ನೇ ವೃತ್ತಿ ಮಾಡಿಕೊಂಡು ಬದುಕು ಕಟ್ಟಿಕೊಳ್ಳಲು ಯತ್ನಿಸುತ್ತಿದ್ದಾರೆ. ಮನೆ ಮನೆಗೆ ಪತ್ರಿಕೆಗಳನ್ನು ತಲುಪಿಸುವ ಬಹುತೇಕ ಯುವಕರಂತೂ ಅವರ ಓದಿನ ಖರ್ಚಿಗಾಗಿ ಈ ಕೆಲಸ ನೆಚ್ಚಿಕೊಂಡಿದ್ದಾರೆ. ಬೆಳಿಗ್ಗೆ 5ರಿಂದ 8ರವರೆಗೆ ಕೆಲಸ ಮುಗಿಸಿಕೊಂಡು ಆನಂತರ ಕಾಲೇಜುಗಳಿಗೆ ಹೋಗುತ್ತಾರೆ. ಇತರೆ ಕೆಲಸಗಳನ್ನು ಮಾಡುತ್ತಾರೆ. 'ನಮಗೆ ರಜೆ ಎಂಬುದೇ ಇರುವುದಿಲ್ಲ, ನಮ್ಮ ಸ್ವಂತದ ಬದುಕು ತ್ಯಾಗ ಮಾಡಿ ಪತ್ರಿಕೆಗಳ ಮೂಲಕ ಜನರ ಜ್ಞಾನ ಹೆಚ್ಚಿಸುವ ಕೆಲಸ ಮಾಡುತ್ತಿದ್ದೇವೆ. ಕೋವಿಡ್ ಸಂಕಷ್ಟದ ಸಂದರ್ಭದಲ್ಲೂ ಜೀವ ಲೆಕ್ಕಿಸದೇ ಕೆಲಸ ಮಾಡಿದ್ದೇವೆ. ಆದರೆ, ನಾವು ಕೂಡ ಮುಖ್ಯವಾಹಿನಿಗೆ ಬರುವ ಅಗತ್ಯವಿದೆ. ನಮ್ಮ ಬದುಕು ಅತಂತ್ರವಿದೆ. ನಿಶ್ಚಿತ ಆದಾಯ, ಸಂಧ್ಯಾಕಾಲದಲ್ಲಿ ಜೀವನಾಧಾರಕ್ಕೆ ಯಾವುದೇ ವ್ಯವಸ್ಥೆ ಇಲ್ಲ. ಸರ್ಕಾರ ಈ ನಿಟ್ಟಿನಲ್ಲಿ ಗಂಭೀರವಾಗಿ ಆಲೋಚಿಸಿ, ನಮ್ಮ ಬದುಕು ಕಟ್ಟಿಕೊಡಲು ವ್ಯವಸ್ಥೆ ಮಾಡಬೇಕು' ಎನ್ನುತ್ತಾರೆ ಪತ್ರಿಕಾ ಏಜೆಂಟರು ಹಾಗೂ ವಿತರಕರು.

> ಪತ್ರಿಕಾ ಏಜೆಂಟರು ಹಾಗೂ ವಿತರಕರಿಗೆ ಉಚಿತ ಬಸ್ ಸೌಲಭ್ಯ ಕಲ್ಪಿಸಬೇಕು. ಬ್ಯಾಂಕ್‌ಗಳಲ್ಲಿ ಸುಲಭವಾಗಿ ಸಾಲ ಸೌಲಭ್ಯ ಮಕ್ಕಳ ಓದಿಗೆ ಅನುಕೂಲ ಶೈಕ್ಷಣಿಕ ಸಾಲ ರಿಯಾಯಿತಿ ದರದಲ್ಲಿ ನಿವೇಶನ ಹಾಗೂ ಮನೆ ಖರೀದಿಸಲು ಸರ್ಕಾರ ಅನುಕೂಲ ಮಾಡಿಕೊಡಬೇಕು.
>
> -ಗಣೇಶ್ ಪತ್ರಿಕಾ ವಿತರಕ ಶಿವನಗರ ಬೀದರ್

> ಇಡೀ ಜಗತ್ತಿನಲ್ಲಿ ಆಗುವ ಮಾಹಿತಿಯನ್ನು ಪತ್ರಿಕೆಗಳನ್ನು ತಲುಪಿಸುವ ಮೂಲಕ ಜನರ ಜ್ಞಾನ ಹೆಚ್ಚಿಸುವ ಕೆಲಸ ಮಾಡಲಾಗುತ್ತಿದೆ. ಸರ್ಕಾರ ನಮ್ಮ ಕಲ್ಯಾಣಕ್ಕೂ ವಿವಿಧ ಯೋಜನೆಗಳನ್ನು ಜಾರಿಗೆ ತಂದು ಅನುಷ್ಠಾನಗೊಳಿಸಬೇಕು. ನಮ್ಮನ್ನು ಮುಖ್ಯವಾಹಿನಿಗೆ ತರುವ ಕೆಲಸ ಮಾಡಬೇಕು.
>
> -ಸಂತೋಷ್ ಪತ್ರಿಕಾ ವಿತರಕ ನಂದಿ ಕಾಲೋನಿ

## ಅಮಾನತ್ತುಗೊಂಡ ಅಧಿಕಾರಿಗೆ ಸನ್ಮಾನ



• ಉದಯವಾಹಿನಿ ಅರಸಿಕೆರೆ

ಭ್ರಷ್ಟಾಚಾರದಲ್ಲಿ ತೊಡಗಿ ಅಮಾನತ್ತು ಗೊಂಡಿರುವ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯನ್ನು ವಿಶಿಷ್ಟ ರೀತಿಯಲ್ಲಿ ಸನ್ಮಾನಿಸಿದ ಕೆ ಆರ್ ಎಸ್ ಪಕ್ಷದ ಮುಖಂಡರು ಆಶ್ರಯ ಮನೆ ಹಗರಣ ಹಾಗೂ ಸರ್ಕಾರದ ಬೆಲೆಬಾಳುವ ಆಸ್ತಿಗಳನ್ನು ಖಾತೆ ಮಾಡಿಸಿ ಈ ಸ್ವತ್ತು ನೀಡಿ ಅಪಾರ ಪ್ರಮಾಣದಲ್ಲಿ ಹಣ ಪಡೆದಿದ್ದಾರೆ ಎಂಬ ಆರೋಪದಡಿಯಲ್ಲಿ ಕೆಆರ್‌ಎಸ್ ಪಕ್ಷದ ಮುಖಂಡರು ಹಾಗೂ ರೈತ ಸಂಘದ ಅಧ್ಯಕ್ಷರು ಹಾಸನ ಜಿಲ್ಲೆಯ ಅರಸೀಕೆರೆ ತಾಲ್ಲೂಕಿನ ಬಾಣಾವರ ಗ್ರಾಮ ಪಂಚಾಯಿತಿಯ ಅಭಿವೃದ್ಧಿ ಅಧಿಕಾರಿಯನ್ನು ಭೇಟಿ ಮಾಡಲು ಸನ್ಮಾನಿಸಲು ಬಂದಾಗ ಅವರು ಅಮಾನತುಕೊಂಡಿದ್ದಾರೆ ಎಂಬ ವಿಚಾರವನ್ನು ತಿಳಿದು ಅವರ ಚೇರಿಗೆ ಹೂವಿನ ಹಾರ ಪೇಟ ಶಾಲು ಹೊದಿಸಿ ಸನ್ಮಾನಿಸಿದರು. ಇಂಥ ಭ್ರಷ್ಟ ಅಧಿಕಾರಿ ಲಂಚ ಹೊಡೆದು ತಿನ್ನುವ ಅಧಿಕಾರಿಗಳಿಗೆ ಮಾದರಿ ಯಾಗಿದ್ದಾರೆಂದು ತಿಳಿಸಿದರು.

## ಕುಡಿಯುವ ನೀರು ಸರಬರಾಜುಗೆ ವಿದ್ಯುತ್ ಸಂಪರ್ಕ ಕಲ್ಪಿಸಲು ಒತ್ತಾಯ

• ಉದಯವಾಹಿನಿ, ಚಿಂಚೋಳಿ

ಮತಕ್ಷೇತ್ರದ ರುಮ್ಮನಗೂಡ ಗ್ರಾಮ ಪಂಚಾಯತನ ಸಾಸರಗಾಂವ ತಾಂಡಾದಲ್ಲಿ ನಿವಾಸಿಗಳಿಗೆ ಕುಡಿಯುವ ನೀರಿಗಾಗಿ ವಿದ್ಯುತ್ ಸಂಪರ್ಕ ಕಲ್ಪಿಸಿಕೊಡುವಂತೆ ಅನೇಕ ಬಾರಿ ಜೇಸ್ಕಾಂ ಇಲಾಖೆ ಸಂಬಂಧಪಟ್ಟ ಅಧಿಕಾರಿಗಳಿಗೆ ಮೌಖಿಕವಾಗಿ ಹೇಳಿದರೂ ವಿದ್ಯುತ್ ಸಂಪರ್ಕ ಕಲ್ಪಿಸದೆ ಕುಂಟುನೇಪ ಹೇಳುತ್ತಾ ನಿರ್ಲಕ್ಷ್ಯ ಧೋರಣೆ ತೋರುತ್ತಿದ್ದಾರೆ ಎಂದು ರುಮ್ಮನಗೊಡ ಗ್ರಾಪಂ ಸಾಸರಗಾಂವ ಸದಸ್ಯ ಚಂದ್ರಕಾಂತ ರೇವಗ್ಗಿ ಆರೋಪಿಸಿದ್ದಾರೆ.



ಕುಡಿಯುವ ನೀರಿಗಾಗಿ ಮೊದಲ ಆದ್ಯತೆ ನೀಡುವಂತೆ ಸರ್ಕಾರಗಳ ಆದೇಶವಿದ್ದರೂ ಕೂಡ ಗ್ರಾಪಂ. ಸದಸ್ಯರು ಸಾರ್ವಜನಿಕರಸಮಸ್ಯೆಗೆ ಪರಿಹಾರ ಮಾಡೋಣವೆಂದರೆ ಜೇಸ್ಕಾಂ ಇಲಾಖೆಯವರು ನಿರ್ಲಕ್ಷ್ಯ ಧೋರಣೆ ತೋರುವುದರಿಂದ ತಾಂಡಾದ ನಿವಾಸಿಗಳಿಗೆ ಕುಡಿಯುವ ನೀರಿಗಾಗಿ ಪರದಾಡುವ ಪರಿಸ್ಥಿತಿ ನಿರ್ಮಾಣವಾಗಿದೆ.


ಕಳೆದ ಒಂದು ವರ್ಷದಿಂದ ವಿದ್ಯುತ್ ಸಂಪರ್ಕ ನೀಡುವಂತೆ ಹೇಳುತ್ತಿದರೂ ಜೇಸ್ಕಾಂ ಅಧಿಕಾರಿಗಳು ಸಿಬ್ಬಂದಿ ವರ್ಗದವರು ಉಡಾಫೆ ಉತ್ತರ ನೀಡುತ್ತಾ ಬರುತ್ತಿದ್ದಾರೆ ಇದರಿಂದ ತಾಂಡಾದ ನಿವಾಸಿಗಳು ನೀರಿಗಾಗಿ ಪರಿತಪ್ಪಿಸುತ್ತಿದ್ದಾರೆ,ಒಂದೆರಡು ದಿನದಲ್ಲಿ ಜೇಸ್ಕಾಂ ಅಧಿಕಾರಿಗಳು ವಿದ್ಯುತ್ ಸಂಪರ್ಕ ಕಲ್ಪಿಸಿಕೊಟ್ಟರೆ ಸರಿ ಇಲ್ಲಾದಿದ್ದರೆ ಬರುವ ದಿನಗಳಲ್ಲಿ ಸಾರ್ವಜನಿಕರ ಜೋತೆಯಲ್ಲಿ ಗ್ರಾಮ ಪಂಚಾಯತ್ ಅಧ್ಯಕ್ಷರು ಸದಸ್ಯರು ಒಗ್ಗೂಡಿ ಜೇಸ್ಕಾಂ ಇಲಾಖೆಗೆ ಮುತ್ತಿಗೆ ಹಾಕಲಾಗುವುದು ಎಂದು ಸಾಸರಗಾಂವ ಗ್ರಾಪಂ ಸದಸ್ಯ ಚಂದ್ರಕಾಂತ ರೇವಗ್ಗಿ ತಿಳಿಸಿದ್ದಾರೆ.

# ಆಡಳಿತ ಪಕ್ಷದ ತಾಳಕ್ಕೆ ವಿರೋಧ ಪಕ್ಷ ಕುಣಿತ

• ಉದಯವಾಹಿನಿ ಸಿಂಧನೂರು

ಸಿಂಧನೂರು ಆಡಳಿತ ಪಕ್ಷದಿಂದ ತಾಲ್ಲೂಕು ನಲ್ಲಿ ಯಾವುದೇ ಅಭಿವೃದ್ಧಿ ಇಲ್ಲದೇ. ತಾಲ್ಲೂಕಿನ ಜನರು ಸಮಸ್ಯೆಗಳನ್ನು ಎದುರಿಸುತ್ತಾರೆ. ಆದರೆ ಆಡಳಿತ ಪಕ್ಷದ ತಾಳಕ್ಕೆ ತಕ್ಕಂತೆ ಹೆಜ್ಜೆ ಹಾಕುತ್ತಿರುವ ವಿರೋಧ ಪಕ್ಷದ ನಾಯಕರು ಆಟಕ್ಕುಂಟು ಲೆಕ್ಕಕ್ಕಿಲ್ಲ ಎಂಬಂತಾಗಿದೆ. ಸಾರ್ವಜನಿಕರು ಆಕ್ರೋಶವನ್ನು ವ್ಯಕ್ತಪಡಿಸಿದರು. ರಾಜ್ಯದಲ್ಲಿ ರಾಜ್ಯ ಸರ್ಕಾರದ ವಿರುದ್ಧ ವಿರೋಧ ಪಕ್ಷದ ಸ್ಥಾನದಲ್ಲಿ ಇರುವ ಬಿಜೆಪಿ ಹಾಗೂ ಜೆಡಿಎಸ್ ಪಕ್ಷಗಳು ನಾಯಕರು ರಾಜಕೀಯ ಹೊಂದಾಣಿಕೆ ಮಾಡಿಕೊಂಡು ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸುತ್ತಿದ್ದಾರೆ.

ಆದರೆ ತಾಲ್ಲೂಕಿನಲ್ಲಿ ಆಡಳಿತ ಪಕ್ಷದ ಜನಪ್ರತಿನಿಧಿಗಳು ಅಧಿಕಾರವನ್ನು ನಡೆಸುತ್ತಿರುವಾಗ ತಾಲೂಕಿನ ಬಗ್ಗೆ ಕಾಳಜಿ ವಹಿಸಿ ಅಭಿವೃದ್ಧಿಯತ್ತ ಗಮನವನ್ನು ಹರಿಸಬೇಕು.ಆದರೆ ಕಾಂಗ್ರೆಸ್ ಪಕ್ಷ ಅಧಿಕಾರ ಬಂದು ಎರಡೂವರೆ ವರ್ಷಗಳ ಕಾಲ ಕಳೆಯುತ್ತಾ ಬಂದರೂ ತಾಲ್ಲೂಕು ಯಾವುದೇ ರೀತಿಯಲ್ಲಿ ಅಭಿವೃದ್ಧಿಯತ್ತ ಸಾಗುತ್ತಿಲ್ಲ. ಎಂದು ನಗರ ಹಾಗೂ ಗ್ರಾಮೀಣ ಪ್ರದೇಶದ ಜನರು ಬೀದಿ ಬೀದಿಗಳಲ್ಲಿ ಹಳ್ಳಿಗಳಲ್ಲಿ ಮಾತನಾಡುತ್ತಿದ್ದಾರೆ. ತಾಲ್ಲೂಕಿನಲ್ಲಿ ಜನರು ಸಮಸ್ಯೆ ಅಭಿವೃದ್ಧಿ ಆಗುತ್ತದೆ ಅಥವಾ ಇಲ್ಲವೋ ಎಂಬುವುದನ್ನು ವಿರೋಧ ಪಕ್ಷದ ನಾಯಕರು ಧ್ವನಿ ಎತ್ತುವ ಕೆಲಸ ಮಾಡಬೇಕಾಗಿದ್ದು ಅವರು ಕಾಯಕ. ಆದರೆ ಅದನ್ನು ಬಿಟ್ಟು. ಹೊಂದಾಣಿಕೆ ಮಾಡಿ ಕೊಂಡು. ಏನನ್ನೂ ಮಾಡದೆ ಆಡಳಿತದ ಪಕ್ಷದ ತಾಳಕ್ಕೆ ತಕ್ಕಂತೆ ತಕಥೈ ತಕಥೈ ಎಂದು ಕುಣಿಯುತ್ತಾ ಹೊರಟಿದ್ದಾರಲ್ಲ. ಇವರುಗಳಿಗೆ ಏನಾದರೂ ಮಾನ ಮರ್ಯಾದೆ ನಾಚಿಕೆ ಇದೆಯೇ ಎಂದು ವಿರೋಧ ಪಕ್ಷದ ನಾಯಕರುಗಳ ವಿರುದ್ಧ ಸಾರ್ವಜನಿಕರು ಆಗ್ರಹಿಸಿದ್ದಾರೆ.




ಉದಯವಾಹಿನಿ ಚಿತ್ರ

> ರೈತರು ಈ ಮುಂಗಾರು ಮಳೆ ಚೆನ್ನಾಗಿ ಯಾಗದೆ ಈ ಬೆಳೆಗಳು ಸಮೃದ್ಧವಾಗಿ ಬೆಳೆಯುತ್ತವೆ ಎಂದು ಕೊಂಡಾಗ ಯೂರಿಯಾ ರಸಗೊಬ್ಬರಗಳು ತಾಲ್ಲೂಕಿನಲ್ಲಿ ಕೊರತೆಯಿಂದ ರೈತರು ಸಂಕಷ್ಟ ಎದುರಿಸುತ್ತಿದ್ದಾರೆ. ಇಲ್ಲಿನ ಆದರೆ ರಾಜಕಾರಣಿಗಳು ದೊಡ್ಡ ದೊಡ್ಡ ಕಾರ್ಯಕ್ರಮಗಳಲ್ಲಿ ರೈತರು ಈ ದೇಶದ ಬೆನ್ನೆಲುಬು ದೇಶಕ್ಕೆ ಅನ್ನ ನೀಡುವ ಅನ್ನದಾತ ಎಂದು ದೊಡ್ಡದಾಗಿ ಭಾಷಣ ಮಾಡುತ್ತಾರೆ. ಅವರು ಸಂಕಷ್ಟವನ್ನು ನಿರ್ವಹಣೆ ಮಾಡುವುದಕ್ಕೆ ಮುಂದಾಗಿ.
>
> -ರಮೇಶ ಪಾಟೀಲ್ ಬೇರ್ಗಿ
> ಕರ್ನಾಟಕ ರಾಜ್ಯ ರೈತ ಸಂಘದ ತಾಲ್ಲೂಕು ಅಧ್ಯಕ್ಷ

> ಕೋಟ್ ತಾಲ್ಲೂಕಿನಲ್ಲಿ ಏನಾದರೂ ದೊಡ್ಡ ಕಾರ್ಯಕ್ರಮಗಳು ನಡೆಸುವುದಕ್ಕೆ ಜನಪ್ರತಿನಿಧಿಗಳು ಪಕ್ಷಾತೀತವಾಗಿ ಆಧಿಕಾರಿಗಳು ಒಂದಾಗುತ್ತೀರಲ್ಲ,ಆದರೆ ಅಭಿವೃದ್ಧಿ ವಿಚಾರದಲ್ಲಿ ಬೀದಿ ಬೀದಿಯ ವ್ಯಾಪಾರಸ್ಥರನ್ನು ಬೀದಿಗೆ ತಳ್ಳಿ ಅವರು ಹೊಟ್ಟೆ ಮೇಲೆ ಬರೆ ಎಳೆದಿದ್ದಾರೆ. ಅವರಿಗೆ ವ್ಯಾಪಾರ ಇಲ್ಲದೆ ಕುಟುಂಬಗಳು ಬೀದಿಗೆ ಬಂದು ಅನಾರೋಗ್ಯಕ್ಕೆ ತುತ್ತಾಗಿ ಕೆಲವರು ಮರಣ ಹೊಂದಿದ್ದಾರೆ. ನೊಂದವರಿಗೆ ನ್ಯಾಯ ಒದಗಿಸುವ ನಿಟ್ಟನಲ್ಲಿ ರಾಜಕಾರಣಿಗಳು ಯಾಕೆ ಒಂದಾಗುತ್ತಿಲ್ಲ. ಎಂಬುದು ಒಂದು ಪ್ರಶ್ನೆ, ಆಡಳಿತ ಪಕ್ಷದ ತಾಳಕ್ಕೆ ವಿರೋಧ ಪಕ್ಷದ ನಾಯಕರು ಹಾಗೂ ಅಧಿಕಾರಿಗಳ ಕುಣಿಯುತ್ತಾರೆ.
>
> ಡಿ -ಎಚ್ ಪೂಜಾರ,
> ಕರ್ನಾಟಕ ರಾಜ್ಯ ರೈತ ಸಂಘದ ರಾಜ್ಯಾಧ್ಯಕ್ಷ

## ತಾದಲಾಪೂರ ಗ್ರಾಮಕ್ಕೆ ನೂತನ ವಿದ್ಯುತ್ ಪರಿವರ್ತಕ ಅಳವಡಿಸಲು: ಸತೀಶರೆಡ್ಡಿ ಮನವಿ



• ಉದಯವಾಹಿನಿ,ಚಿಂಚೋಳಿ

ತಾಲ್ಲೂಕಿನ ತಾದಲಾಪೂರ ಗ್ರಾಮದಲ್ಲಿ 1200ಕ್ಕೂ ಹೆಚ್ಚು ಜನಸಂಖ್ಯೆವುಳ್ಳ ಗ್ರಾಮವಿದ್ದು ಒಂದೇ ವಿದ್ಯುತ್ ಪರಿವರ್ತಕ ಇರುವುದರಿಂದ ವೋಲ್ಟೇಜ್ ಸಮಸ್ಯೆ ಕಾಡುತ್ತಿದೆ ಅದಕಾರಣ ಗ್ರಾಮಕ್ಕೆ ಮತ್ತೊಂದು ನೂತನ ವಿದ್ಯುತ್ ಪರಿವರ್ತಕ ಅಳವಡಿಸಿ ಗ್ರಾಮಸ್ಥರಿಗೆ ಅನುಕೂಲ ಕಲ್ಪಿಸಿಕೊಡಬೇಕು ಎಂದು ಬಿಜೆಪಿ ಯುವ ಮೋರ್ಚಾದ ತಾಲ್ಲೂಕಾಧ್ಯಕ್ಷ ಸತೀಶರೆಡ್ಡಿ ತಾದಲಾಪೂರ ಜೇಸ್ಕಾಂ ಎಇಇ ಕಾಮಣ್ಣ ಇಂಜೇಳಿಯವರಿಗೆ ಮನವಿ ಸಲ್ಲಿಸಿ ಒತ್ತಾಯಿಸಿದ್ದಾರೆ. ತಾದಲಾಪೂರ ಗ್ರಾಮದಲ್ಲಿ ಒಂದೇ ವಿದ್ಯುತ್ ಪರಿವರ್ತಕ ಇರುವುದರಿಂದ ವೋಲ್ಟೇಜ್ ಸಮಸ್ಯೆ ಆಗುತ್ತಿದ್ದು ಇದರಿಂದ ಕುಡಿಯುವ ನೀರಿನ ಸರಬರಾಜು ಮೋಟರ್ ಪದೇಪದೇ ಸುಟ್ಟು ಹೋಗುತ್ತಿದೆ, ಮನೆಗಳಲ್ಲಿನ ಫ್ಯಾನ್,ಟಿವಿ,ಸುಟ್ಟು ಹೋಗುತ್ತಿವೆ ಆದಕಾರಣ ಇನ್ನೊಂದು ಹೊಸ ವಿದ್ಯುತ್ ಪರಿವರ್ತಕ ಅಳವಡಿಸಿ ಗ್ರಾಮಸ್ಥರಿಗೆ ಅನುಕೂಲ ಕಲ್ಪಿಸಿ ಕೊಡಬೇಕು ಎಂದು ಅವರು ಒತ್ತಾಯಿಸಿದರು, ಬಿಜೆಪಿ ಮುಖಂಡ ಶ್ರೀನಿವಾಸ ಚಿಂಚೋಳಿಕರ್ ಇದ್ದರು.

## ಸರ್ಕಾರಿ ಶಾಲೆಗಳ ಸಬಲೀಕರಣ ನಮ್ಮೆಲ್ಲರ ಹೊಣೆ : ಟಿ. ಹೆಚ್.ಎಂ. ಬಸವರಾಜ್

• ಉದಯವಾಹಿನಿ ಬಳ್ಳಾರಿ,

ದೇಶ ಅಭಿವೃದ್ಧಿಯಾಗಬೇಕಾದರೆ ಸರ್ಕಾರಿ ಶಾಲೆಗಳು ಅಭಿವೃದ್ಧಿ ಆಗಬೇಕು ಆ ಕೆಲಸವನ್ನು ಎಲ್ಲಾ ಜನಪ್ರತಿನಿಧಿಗಳು ಶ್ರದ್ದೆಯಿಂದ ಮಾಡಬೇಕಾಗಿದೆ. ಸರ್ಕಾರಿ ಶಾಲೆಗಳ ಸಬಲೀಕರಣ ಪ್ರತಿಯೊಬ್ಬ ಜನಪ್ರತಿನಿಧಿಯ ಕರ್ತವ್ಯವಾಗಿದೆ ಅದನ್ನು ಕಾಳಜಿಯಿಂದ ಮಾಡಬೇಕು ಎಂದು ಟಿ ಹೆಚ್ ಎಂ ಸಾಂಸ್ಕೃತಿಕ ಕಲಾ ಟ್ರಸ್ಟ್ ನ ಅಧ್ಯಕ್ಷ ಟಿ.ಹೆಚ್. ಎಂ. ಬಸವರಾಜ್ ಹೇಳಿದ್ದಾರೆ. ಅವರು ತಾಲ್ಲೂಕಿನ ಹಂದಿಹಾಳು ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಮಕ್ಕಳಿಗೆ ಉಚಿತ ಟೈ ಬೆಲ್ಟ್ ವಿತರಣೆ ಮಾಡಿ ಮಾತನಾಡಿದರು. ಸರ್ಕಾರಿ ಶಾಲೆಗಳ ಶಿಕ್ಷಕರಿಗೆ ಒಳ್ಳೆಯ ಸಂಬಳ ಮತ್ತು ಶಾಲೆಗಳಿಗೆ ಅಗತ್ಯವಾದ ಮೂಲಭೂತ ಸೌಕರ್ಯಗಳನ್ನು ಒದಗಿಸಿದಲ್ಲಿ ಗ್ರಾಮೀಣ ಭಾಗದ ಶಾಲೆಗಳಿಂದ ದೊಡ್ಡಮಟ್ಟದ ಪ್ರತಿಭೆಗಳು ಹೊರಬರಲು ಸಾಧ್ಯವಾಗುತ್ತದೆ ಎಂದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಕೊರಲಗುಂದಿ ಸಮೂಹ ಸಂಪನ್ಮೂಲ ಕೇಂದ್ರದ ಸಂಪನ್ಮೂಲ ವ್ಯಕ್ತಿ ಬಿ.ಪಿ ರವಿಚಂದ್ರ, ಟಿ.ಎಚ್.ಎಂ ಸಾಂಸ್ಕೃತಿಕ ಕಲಾ ಟ್ರಸ್ಟ್ ಕೆಲಸವನ್ನು ಶ್ಲಾಘಿಸಿದರು. ಮತ್ತೊಬ್ಬ ಅತಿಥಿ ಹಂದಿಹಾಳ್ ಸರ್ಕಾರಿ ಪ್ರೌಢಶಾಲೆಯ ಮುಖ್ಯ ಗುರು ವೈ.ಕವಿತ ಮಾತನಾಡಿ, ಗ್ರಾಮೀಣ ಭಾಗದ ಶಾಲೆಗಳು ಅಭಿವೃದ್ಧಿ ಕಾಣಲು ಸರ್ಕಾರದ ಯೋಜನೆಗಳ ಜೊತೆಗೆ ಇಂಥ ದಾನಿಗಳ ಸಹಕಾರವು ಅಗತ್ಯ ಎಂದರು.

ಅಧ್ಯಕ್ಷತೆ ವಹಿಸಿದ್ದ ಶಾಲೆಯ ಎಸ್ ಡಿ ಎಂ ಸಿ ಅಧ್ಯಕ್ಷ ಬಿ.ವೆಂಕಟೇಶ್ ಮಾತನಾಡಿ ಟಿ.ಹೆಚ್. ಎಂ ಸಾಂಸ್ಕೃತಿಕ ಕಲಾ ಟ್ರಸ್ಟ್ ಮಕ್ಕಳಿಗೆ ಮಹತ್ತರವಾದ ಕೆಲಸ ಮಾಡುತ್ತಿದೆ ಎಂದರು.



ಉದಯವಾಹಿನಿ ಚಿತ್ರ

# ಗುಮ್ಮಗೋಳ: ನನಸಾಗುವುದೇ ನಿರಾಶ್ರಿತರ ಸೂರಿನ ಕನಸು?

### ಹೊಸಗ್ರಾಮಕ್ಕೆ ತೆರಳಿರುವ ಹಲವು ಬಡ ಕುಟುಂಬಗಳು ಮೂಲಸೌಲಭ್ಯಗಳಿಲ್ಲದೇ ಈಗಲೂ ಸರ್ಕಾರಿ ಶಾಲೆಯಲ್ಲಿ ಆಶ್ರಯ

• ಉದಯವಾಹಿನಿ ಮುಂಡರಗಿ

ತಾಲ್ಲೂಕಿನ ಹಮ್ಮಿಗಿ ಗ್ರಾಮದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಶಿಂಗಟಾಲೂರ ಏತ ನೀರಾವರಿ ಯೋಜನೆಯ ಹಿನ್ನೀರಿನಲ್ಲಿ ತಾಲ್ಲೂಕಿನ ಗುಮ್ಮಗೋಳ ಗ್ರಾಮ ಮುಳುಗಡೆಯಾಗಲಿದ್ದು, ಗ್ರಾಮದ ಸ್ಥಳಾಂತರಕ್ಕೆ ಸರ್ಕಾರ ಈವರೆಗೂ ಅಗತ್ಯ ಕ್ರಮ ಕೈಗೊಳ್ಳದಿರುವುದರಿಂದ ಗುಮ್ಮಗೋಳ ಗ್ರಾಮಸ್ಥರು ಅತಂತ್ರರಾಗಿದ್ದಾರೆ.

ಹಮ್ಮಿಗಿ ಗ್ರಾಮದ ಬ್ಯಾರೇಜ್‌ನಲ್ಲಿ ಪ್ರತಿವರ್ಷ ಗರಿಷ್ಠ 3 ಟಿಎಂಸಿ ಅಡಿ ನೀರು ಸಂಗ್ರಹಿಸಿಕೊಳ್ಳಬಹುದಾಗಿದೆ. ಆದರೆ, ಗುಮ್ಮಗೋಳ ಗ್ರಾಮವನ್ನು ಸಮರ್ಪಕವಾಗಿ ಸ್ಥಳಾಂತರಿಸದೆ ಇರುವುದರಿಂದ 3 ಟಿಎಂಸಿ ಅಡಿ ಬದಲಾಗಿ ಪ್ರತಿವರ್ಷ ಕೇವಲ 1.9 ಟಿಎಂಸಿ ಅಡಿ ನೀರನ್ನಷ್ಟೇ ಬಳಸಿಕೊಳ್ಳಬೇಕಾಗಿದೆ. ಗುಮ್ಮಗೋಳ ಗ್ರಾಮ ಸ್ಥಳಾಂತರಗೊಂಡರೆ ನಮ್ಮ ಪಾಲಿನ ಸಂಪೂರ್ಣ



ಉದಯವಾಹಿನಿ ಚಿತ್ರ

ನೀರನ್ನು ಬಳಸಿಕೊಳ್ಳಬಹುದಾಗಿದೆ.

ಮುಳುಗಡೆಯಾಗಲಿರುವ ಗುಮ್ಮಗೋಳ ಗ್ರಾಮದ ಜನತೆಗೆ ಮನೆಗಳನ್ನು ನಿರ್ಮಿಸಿಕೊಳ್ಳಲು ದಶಕದ ಹಿಂದೆ ಸೂಕ್ತ ನಿವೇಶನ ಹಾಗೂ ಮನೆ ಕಟ್ಟಿಕೊಳ್ಳಲು ಹಣ ನೀಡಿತ್ತು. ಮನೆ ನಿರ್ಮಿಸಿಕೊಳ್ಳಲು ಸರ್ಕಾರ ನೀಡಿರುವ ಹಣ ಅನ್ಯಕಾರ್ಯಗಳಿಗೆ ಖರ್ಚಾಗಿ ಹೋಗಿದ್ದು, ಸರ್ಕಾರವೇ ಗ್ರಾಮಸ್ಥರಿಗೆ ಮನೆಗಳನ್ನು ನಿರ್ಮಿಸಿಕೊಡಬೇಕು ಎಂದು ಗ್ರಾಮಸ್ಥರು ಬೇಡಿಕೆಯಿಟ್ಟರು. ಸರ್ಕಾರ ,ಗ್ರಾಮಸ್ಥರ ನಡುವೆ ಹಲವು ವರ್ಷಗಳಿಂದ ಈ ಕುರಿತು ಹಗ್ಗ ಜಗ್ಗಾಟ ಮುಂದುವರಿದಿದೆ. ಅಂದು ಹಳೆಗ್ರಾಮ ತೊರೆದು ಹೊಸಗ್ರಾಮಕ್ಕೆ ತೆರಳಿರುವ ಹಲವು ಬಡ ಕುಟುಂಬಗಳು ಮೂಲಸೌಲಭ್ಯಗಳಿಲ್ಲದೇ ಈಗಲೂ ಸರ್ಕಾರಿ ಶಾಲೆಯಲ್ಲಿ ಆಶ್ರಯ ಪಡೆದಿದ್ದಾರೆ ಅಲ್ಲಿ ನೀರು, ವಿದ್ಯುತ್, ಶಾಲೆ ಮೊದಲಾದ ಸೌಲಭ್ಯಗಳಿಲ್ಲವಾದ್ದರಿಂದ ನಿರಾಶ್ರಿತರು ನಿತ್ಯ ಹಲವು ತೊಂದರೆಗಳನ್ನು ಅನುಭವಿಸುತ್ತಿದ್ದಾರೆ.

ಮನೆಗಳನ್ನು ನಿರ್ಮಿಸಿಕೊಡಬೇಕು ಎಂದು ಹಲವಾರು ಬಾರಿ ಪ್ರತಿಭಟನೆ ನಡೆಸಿದ್ದೇವೆ. ಆದರೂ ನಮ್ಮ ಬೇಡಿಕೆಗಳು ಈಡೇರಿಲ್ಲ. ಹಲವು ಕಾರಣಗಳಿಂದ ಗ್ರಾಮ ಪಂಚಾಯಿತಿಯವರು ಅಲ್ಲಿ ಸೌಲಭ್ಯಗಳನ್ನು ಪೂರೈಸುತ್ತಿಲ್ಲ. ಹೀಗಾಗಿ ಅಲ್ಲಿರುವ ಜನರು ಕ್ರಿಮಿ, ಕೀಟ, ವಿಷ ಜಂತುಗಳೊಂದಿಗೆ ವಾಸಿಸಬೇಕಾಗಿದೆ ಎಂದು ಅಲವತ್ತುಕೊಂಡಿದ್ದಾರೆ.

**ಭಾಗಶಃ ಸ್ಥಳಾಂತರಗೊಂಡ ಬಿದರಳ್ಳಿ**

ತಾಲ್ಲೂಕಿನ ಬಿದರಳ್ಳಿ ಗ್ರಾಮ ಹಿನ್ನೀರಿನಲ್ಲಿ ಮುಳುಗಡೆಯಾಗಲಿದ್ದು ಅಲ್ಲಿರುವ ಗ್ರಾಮಸ್ಥರು ಈಗ ಭಾಗಶಃ ಹೊಸಬಿದರಳ್ಳಿ ಗ್ರಾಮಕ್ಕೆ ಸ್ಥಳಾಂತರಗೊಂಡಿದ್ದಾರೆ. ಹೊಸಬಿದರಳ್ಳಿ ಗ್ರಾಮದಲ್ಲಿ ಸರ್ಕಾರ ಅಗತ್ಯ ಸೌಲಭ್ಯಗಳನ್ನು ಒದಗಿಸಿದೆ. ಗ್ರಾಮದ ರೇಣುಕಾಂಬಾ ದೇವಸ್ಥಾನ ಸೇರಿದಂತೆ ಹಲವು ಕುಟುಂಬಗಳು ಈಗಲೂ ಹಳೆಬಿದರಳ್ಳಿ ಗ್ರಾಮದಲ್ಲಿ ವಾಸಿಸುತ್ತಿವೆ. ಹಿನ್ನೀರಿನಿಂದ ಅಷ್ಟೊಂದು ತೀವ್ರತೆಗೆ ಒಳಗಾಗದ ತಾಲ್ಲೂಕಿನ ವಿಠಲಾಪೂರ ಗ್ರಾಮದ ಸ್ಥಳಾಂತರಕ್ಕೆ ಸರ್ಕಾರ ಈಗ ಕ್ರಮ ಕೈಗೊಂಡಿದೆ.

> ಹೊಸಗುಮ್ಮಗೋಳ ಗ್ರಾಮದಲ್ಲಿ ಹತ್ತಾರು ಬಡ ಕುಟುಂಬಗಳು ಹಲವು ವರ್ಷಗಳಿಂದ ಅತಂತ್ರರಾಗಿ ಬದುಕುತ್ತಿದ್ದು ಸರ್ಕಾರ ಅಗತ್ಯ ಸೌಲಭ್ಯಗಳನ್ನು ನೀಡಿ ಗ್ರಾಮಸ್ಥರಿಗೆ ನೆರವಾಗಬೇಕು
>
> -ಹನುಮಂತ ಬೆಂಡಿಕಾಯಿ
> ಗುಮ್ಮಗೋಳ ಗ್ರಾಮದ ನಿರಾಶ್ರಿತ

# ಮೇಘಾ ಶೆಣೋಯ್ ನಿಶ್ಚಿತಾರ್ಥ



ಜೀ ಕನ್ನಡ ವಾಹಿನಿಯಲ್ಲಿ ಪ್ರಸಾರ ಕಾಣಿಸುತ್ತಿರುವ 'ಅಮೃತಧಾರೆ' ಧಾರಾವಾಹಿ ಗಮನ ಸೆಳೆಯುತ್ತಿದೆ. ಈ ಧಾರಾವಾಹಿಯಲ್ಲಿ ಸುಧಾ ಹೆಸರಿನ ಪಾತ್ರ ಮಾಡುತ್ತಿರುವ ಮೇಘಾ ಶೆಣೋಯ್ ಅವರ ನಿಶ್ಚಿತಾರ್ಥ ಇತ್ತೀಚೆಗೆ ನೆರವೇರಿದೆ. ಆ ಫೋಟೋಗಳನ್ನು ಅವರು ಸೋಶಿಯಲ್ ಮೀಡಿಯಾದಲ್ಲಿ ಹಂಚಿಕೊಂಡಿದ್ದಾರೆ. ಜೀ ಕನ್ನಡ ವಾಹನಿಯಲ್ಲಿ ಪ್ರಸಾರ ಕಾಣುತ್ತಿರುವ 'ಅಮೃತಧಾರೆ' ಧಾರಾವಾಹಿಯಲ್ಲಿ ಸುಧಾ ಹೆಸರಿನ ಪಾತ್ರವನ್ನು ಮೇಘಾ ಶೆಣೋಯ್ ಅವರು ನಿರ್ವಹಿಸುತ್ತಿದ್ದಾರೆ. ಅವರಿಗೆ ಈಗ ನಿಶ್ಚಿತಾರ್ಥ ನೆರವೇರಿದೆ. ಆ ಫೋಟೋಗಳನ್ನು ಅವರು ಸೋಶಿಯಲ್ ಮೀಡಿಯಾದಲ್ಲಿ ಹಂಚಿಕೊಂಡಿದ್ದಾರೆ.

'ಅಮೃತಧಾರೆ' ಧಾರಾವಾಹಿಯಲ್ಲಿ ಕಥಾ ನಾಯಕ ಗೌತಮ್ ದೀವಾನ್ ತಂಗಿ ಪಾತ್ರದಲ್ಲಿ ಮೇಘಾ ಕಾಣಿಸಿಕೊಂಡಿದ್ದಾರೆ. ತಮ್ಮ ಸರಳ ನಟನೆಯ ಮೂಲಕ ಅವರು ಎಲ್ಲರ ಗಮನ ಸೆಳೆದರು. ಈಗ ಅವರ ನಿಶ್ಚಿತಾರ್ಥ ನೆರವೇರಿದೆ. ಮೇಘಾ ವಿವಾಹ ಆಗುತ್ತಿರುವ ಹುಡುಗನ ಹೆಸರು ಭರತ್. ಇಬ್ಬರದ್ದೂ ಒಳ್ಳೆಯ ಜೋಡಿ ಎಂದು ಅನೇಕರು ಹೇಳಿದ್ದಾರೆ. ಈ ಫೋಟೋಗಳಿಗೆ ಫ್ಯಾನ್ಸ್ ಕಡೆಯಿಂದ ಭರ್ಜರಿ ಲೈಕ್ಸ್ ಸಿಗುತ್ತಾ ಇದೆ. ಮೇಘಾ ಅವರು ಮಾಡೆಲ್ ಆಗಿ ಗಮನ ಸೆಳೆದವರು. ಅವರು 'ಅಮೃತಧಾರೆ' ಧಾರಾವಾಹಿಯಲ್ಲಿ ಒಂದು ಪಾತ್ರ ಮಾಡಿದ್ದಾರೆ.

ಅವರು ಈಗ ನಿಶ್ಚಿತಾರ್ಥ ಮಾಡಿಕೊಂಡಿದ್ದಕ್ಕೆ ಎಲ್ಲರೂ ಶುಭ ಕೋರುತ್ತಾ ಇದ್ದಾರೆ. ಮೇಘಾ ಶೆಣೋಯ್ ವಿವಾಹ ದಿನಾಂಕ ಇನ್ನಷ್ಟೇ ಅಧಿಕೃತವಾಗಬೇಕಿದೆ.

# ಒಟಿಟಿಯಲ್ಲಿ ಬರಲು ಕೊತ್ತಲವಾಡಿ ರೆಡಿ



ಪುಷ್ಪಾ ಅರುಣ್ ಕುಮಾರ್ ನಿರ್ಮಿಸಿರುವ 'ಕೊತ್ತಲವಾಡಿ' ಚಿತ್ರವು ಆಗಸ್ಟ್ 1 ರಂದು ಚಿತ್ರಮಂದಿರಗಳಲ್ಲಿ ಬಿಡುಗಡೆಯಾತ್ತು. ಈಗ ಸಿನಿಮಾ ಅಮೆಜಾನ್ ಪ್ರೈಮ್ ಒಟಿಟಿಯಲ್ಲಿ ಬಿಡುಗಡೆಯಾಗುತ್ತಿದೆ.

ರಾಕಿಂಗ್ ಸ್ಟಾರ್ ಯಶ್ ಅವರ ತಾಯಿಯ ನಿರ್ಮಾಣದ ಈ ಚಿತ್ರವು ಕನ್ನಡದ ಜೊತೆಗೆ ತಮಿಳು, ತೆಲುಗು, ಹಿಂದಿ ಮತ್ತು ಮಲಯಾಳಂ ಭಾಷೆಗಳಲ್ಲಿ ಲಭ್ಯವಾಗಲಿದೆ. ಪೃಥ್ವಿ ಅಂಬರ್ ಮುಖ್ಯ ಪಾತ್ರದಲ್ಲಿದ್ದಾರೆ ಮತ್ತು ರಘು ನಿಡುವಳ್ಳಿ ಅವರ ಸಂಭಾಷಣೆ ಚಿತ್ರದ ಹೈಲೈಟ್ ಆಗಿದೆ. ರಾಕಿಂಗ್ ಸ್ಟಾರ್ ಯಶ್ ತಾಯಿ ಪುಷ್ಪಾ ಅರುಣ್‌ಕುಮಾರ್ ನಿರ್ಮಾಣದ 'ಕೊತ್ತಲವಾಡಿ' ಸಿನಿಮಾ ಆಗಸ್ಟ್ 1ರಂದು ಚಿತ್ರಮಂದಿರದಲ್ಲಿ ರಿಲೀಸ್ ಆಯಿತು. ನಿರ್ಮಾಣದಲ್ಲಿ ಪುಷ್ಪಾ ಅವರಿಗೆ ಇದು ಮೊದಲ ಅನುಭವ. ಈಗ ಈ ಚಿತ್ರ ಒಟಿಟಿಯಲ್ಲಿ ರಿಲೀಸ್ ಆಗಲು ಸಿದ್ಧವಾಗಿದೆ. ಈ ಸಿನಿಮಾನ ಒಟಿಟಿಯಲ್ಲಿ ಪ್ರೇಕ್ಷಕರು ಯಾವ ರೀತಿಯಲ್ಲಿ ಸ್ವೀಕರಿಸುತ್ತಾರೆ ಎಂಬುದನ್ನು ಕಾದು ನೋಡಬೇಕಿದೆ. ಪುಷ್ಪಾ ಅವರು 'ಪಿಎ ಪ್ರೊಡಕ್ಷನ್ಸ್ ಲಾಂಛನ' ಆರಂಭಿಸಿದ್ದಾರೆ. ಈ ನಿರ್ಮಾಣ ಸಂಸ್ಥೆ ಮೂಲಕ ಹೊಸ ಪ್ರತಿಭೆಗಳಿಗೆ ಅವಕಾಶ ಕೊಡೋ ಗುರಿಯನ್ನು ಅವರು ಹೊಂದಿದ್ದಾರೆ. ಈ ನಿರ್ಮಾಣ ಸಂಸ್ಥೆ ಅಡಿಯಲ್ಲಿ ಮೂಡಿ ಬಂದ ಮೊದಲ ಚಿತ್ರ 'ಕೊತ್ತಲವಾಡಿ' ಸಿನಿಮಾ ಈಗ ಒಟಿಟಿಯಲ್ಲಿ ಬರಲು ರೆಡಿ ಆಗಿದೆ. ಸೆಪ್ಟೆಂಬರ್ 5ರಿಂದ ಈ ಚಿತ್ರವನ್ನು ಅಮೇಜಾನ್ ಪ್ರೈಮ್‌ನಲ್ಲಿ ವೀಕ್ಷಿಸಬಹುದಾಗಿದೆ. 'ಕೊತ್ತಲವಾಡಿ' ಥಿಯೇಟರ್‌ಗಳಲ್ಲಿ ಕನ್ನಡದಲ್ಲಿ ಮಾತ್ರ ರಿಲೀಸ್ ಆಗಿತ್ತು. ಆದರೆ, ಒಟಿಟಿಯಲ್ಲಿ ಹಲವು ಭಾಷೆಗಳಲ್ಲಿ ಈ ಸಿನಿಮಾ ವೀಕ್ಷಣೆಗೆ ಲಭ್ಯವಿರಲಿದೆ.



ಸಿನಿ ವಾಹಿನಿ

# ರಮ್ಯಾ - ರಕ್ಷಿತ್ ವಿವಾದ ಮುನ್ನೆಲೆಗೆ



ಜಾನ್ವಿಯ ಮುಖದಲ್ಲಿ ಹಿಂಜರಿಕೆ

'ಹಾಸ್ಟೆಲ್ ಹುಡುಗರು ಬೇಕಾಗಿದ್ದಾರೆ' ಸಿನಿಮಾದ ಬಳಿಕ ರಮ್ಯಾ ಹಾಗೂ ರಕ್ಷಿತ್ ಶೆಟ್ಟಿ ನಡುವೆ ವಿವಾದ ಭುಗಿಲೆದ್ದಿದೆ. ಪರಸ್ಪರರು ಕಾನೂನು ಹೋರಾಟ ನಡೆಸುತ್ತಿದ್ದು, ಪ್ರಕರಣ ನ್ಯಾಯಾಲಯದಲ್ಲಿದೆ. ಈ ನಡುವೆ ಈ ಇಬ್ಬರೂ ಒಟ್ಟಿಗೆ ಒಂದೇ ವೇದಿಕೆಯಲ್ಲಿ ಕಾಣಿಸಿಕೊಂಡಿದ್ದಾರೆ. ವಿಶೇಷವೆಂದರೆ ಇಬ್ಬರೂ ಒಟ್ಟಿಗೆ ನಗು-ನಗುತ್ತಾ ಜೊತೆಯಾಗಿ ಫೋಟೊ ಸಹ ಕ್ಲಿಕ್ಕಿಸಿಕೊಂಡಿದ್ದಾರೆ. ಸಿನಿಮಾ ತಾರೆಯರು ಬೇರೆ ಬೇರೆ ಕಾರ್ಯಕ್ರಮಗಳಿಗೆ ಅತಿಥಿಗಳಾಗಿ ಹೋಗುವುದು ಸಾಮಾನ್ಯ. ಅದರಲ್ಲೂ ವಿದೇಶಗಳಲ್ಲಿ ನಡೆಯುವ ಕನ್ನಡಪರ ಕಾರ್ಯಕ್ರಮಗಳಿಗೆ ಸಿನಿಮಾ ನಟ-ನಟಿಯರಿಗೆ ಹೆಚ್ಚಿನ ಆಹ್ವಾನಗಳು ಬರುತ್ತಲೇ ಇರುತ್ತವೆ. ಇತ್ತೀಚೆಗೆ ಅಮೆರಿಕದಲ್ಲಿ ನಾವಿಕ ಕನ್ನಡ ಸಮ್ಮೇಳನ ನಡೆದಿತ್ತು. ಕಾರ್ಯಕ್ರಮದಲ್ಲಿ ಕೆಲವು ಕನ್ನಡದ ನಟ-ನಟಿಯರು ಅತಿಥಿಗಳಾಗಿ ಭಾಗವಹಿಸಿದ್ದರು. ಆದರೆ ವಿಶೇಷ ಎನಿಸಿದ್ದು, ರಮ್ಯಾ ಮತ್ತು ರಕ್ಷಿತ್ ಶೆಟ್ಟಿ ಅವರು ಸಹ ಕಾರ್ಯಕ್ರಮದಲ್ಲಿ ಒಂದೇ ವೇದಿಕೆಯಲ್ಲಿ ಕಾಣಿಸಿಕೊಂಡಿದ್ದು.

'ಹಾಸ್ಟೆಲ್ ಹುಡುಗರು ಬೇಕಾಗಿದ್ದಾರೆ' ಸಿನಿಮಾದ ಬಳಿಕ ರಮ್ಯಾ ಹಾಗೂ ರಕ್ಷಿತ್ ಶೆಟ್ಟಿ ನಡುವೆ ವಿವಾದ ಭುಗಿಲೆದ್ದಿದೆ. ಪರಸ್ಪರರು ಕಾನೂನು ಹೋರಾಟ ನಡೆಸುತ್ತಿದ್ದು, ಪ್ರಕರಣ ನ್ಯಾಯಾಲಯದಲ್ಲಿದೆ. ಈ ನಡುವೆ ಈ ಇಬ್ಬರೂ ಒಟ್ಟಿಗೆ ಒಂದೇ ವೇದಿಕೆಯಲ್ಲಿ ಕಾಣಿಸಿಕೊಂಡಿದ್ದಾರೆ. ವಿಶೇಷವೆಂದರೆ ಇಬ್ಬರೂ ಒಟ್ಟಿಗೆ ನಗು-ನಗುತ್ತಾ ಜೊತೆಯಾಗಿ ಫೋಟೊ ಸಹ ಕ್ಲಿಕ್ಕಿಸಿಕೊಂಡಿದ್ದಾರೆ. ರಮ್ಯಾ ಅವರು 'ಹಾಸ್ಟೆಲ್ ಹುಡುಗರು ಬೇಕಾಗಿದ್ದಾರೆ' ಸಿನಿಮಾದ ಅತಿಥಿ ಪಾತ್ರದಲ್ಲಿ ನಟಿಸಿದ್ದರು. ಆ ಸಿನಿಮಾದ ಟ್ರೈಲರ್ ನೋಡಿ ಖುಷಿಯಾದ ರಕ್ಷಿತ್ ಶೆಟ್ಟಿ ಆ ಸಿನಿಮಾ ಅನ್ನು ಪ್ರೆಸೆಂಟ್ ಮಾಡಿದ್ದರು. ಸಿನಿಮಾದ ವಿತರಣೆಯನ್ನೂ ಮಾಡಿ, ಸಿನಿಮಾದ ಪ್ರಚಾರ ಇನ್ನಿತರೆಗಳ ಮೇಲೆ ಬಂಡವಾಳ ಹೂಡಿದ್ದರು. ಸಿನಿಮಾ ಬಿಡುಗಡೆ ಆಗಿ ಹಿಟ್ ಎನಿಸಿಕೊಂಡಿತು. ಆದರೆ ರಮ್ಯಾ ಅವರು ಸಿನಿಮಾ ತಂಡದ ವಿರುದ್ಧ ಪ್ರಕರಣ ದಾಖಲಿಸಿದರು.

ಸಿನಿಮಾ ಬಿಡುಗಡೆ ಆಗುವ ಮುಂಚೆ, ರಮ್ಯಾ, ತಮ್ಮ ದೃಶ್ಯಗಳನ್ನು ಬಳಸದಂತೆ ಚಿತ್ರತಂಡದ ಬಳಿ ವಿನಂತಿ ಮಾಡಿದ್ದರು. ಆದರೆ ಚಿತ್ರತಂಡದವರು ರಮ್ಯಾರ ಮನವಿಗೆ ವಿರುದ್ಧವಾಗಿ ನಿಲವು ತಳೆದರು.

# ಇಕ್ಕಟ್ಟಿನಲ್ಲಿ ಸಿಲುಕಿದ ಮಲಯಾಳಂ ಸ್ಟಾರ್ ನಟ



ಇತ್ತೀಚೆಗೆ ಬಿಡುಗಡೆ ಆದ 'ಕೂಲಿ' ಸಿನಿಮಾ ಸೇರಿದಂತೆ ಹಲವಾರು ಮಲಯಾಳಂ ಸಿನಿಮಾಗಳಲ್ಲಿ ನೆನಪುಳಿವ ಪಾತ್ರಗಳಲ್ಲಿ ನಟಿಸಿರುವ ನಟ ಸೌಬಿನ್ ಅವರು ವಂಚನೆ ಪ್ರಕರಣದಲ್ಲಿ ಸಿಲುಕಿಕೊಂಡಿದ್ದು, ಇತ್ತೀಚೆಗೆ ನ್ಯಾಯಾಲಯ ನೀಡಿರುವ ಆದೇಶದಂತೆ ವಿದೇಶ ಪ್ರಯಾಣವನ್ನೂ ಮಾಡದಂತಾಗಿದ್ದಾರೆ. ಇತ್ತೀಚೆಗೆ ಬಿಡುಗಡೆ ಆದ ರಜನೀಕಾಂತ್ ನಟನೆಯ 'ಕೂಲಿ' ಸಿನಿಮಾನಲ್ಲಿ ಹಲವಾರು ಸ್ಟಾರ್ ನಟರು ಅತಿಥಿ ಪಾತ್ರಗಳಲ್ಲಿ ನಟಿಸಿದ್ದರು. ಆದರೆ ಎಲ್ಲರಿಗಿಂತಲೂ ಹೆಚ್ಚು ಶೈನ್ ಆಗಿದ್ದು ಮಾತ್ರ ಮಲಯಾಳಂ ನಟ ಸೌಬಿನ್. ಅತ್ಯುತ್ತಮ ನಟರಾಗಿರುವ ಸೌಬಿನ್, ಮಲಯಾಳಂನ ಸ್ಟಾರ್ ನಟರುಗಳಲ್ಲಿ ಒಬ್ಬರು. ನಟರಾಗಿರುವ ಜೊತೆಗೆ ನಿರ್ಮಾಪಕರೂ ಹೌದು. ಆದರೆ ಈಗ ವಂಚನೆ ಪ್ರಕರಣವೊಂದರಿಂದಾಗಿ ಇಕ್ಕಟ್ಟಿಗೆ ಸಿಲುಕಿಕೊಂಡಿದ್ದಾರೆ. ಸೌಬಿನ್ ನಟಿಸಿ ನಿರ್ಮಾಣ ಮಾಡಿದ್ದ 'ಮಂಜ್ಞುಮೆಲ್ ಬಾಯ್ಸ್' ಸಿನಿಮಾ ಬಾಕ್ಸ್ ಆಫೀಸ್‌ನಲ್ಲಿ ದಾಖಲೆಯನ್ನೇ ಬರೆದಿತ್ತು. 2024 ರ ಫೆಬ್ರವರಿಯಲ್ಲಿ ಬಿಡುಗಡೆ ಆಗಿದ್ದ 'ಮಂಜ್ಞುಮೆಲ್ ಬಾಯ್ಸ್' ಸಿನಿಮಾಕ್ಕೆ ಕೇವಲ 20 ಕೋಟಿ ಖರ್ಚು ಮಾಡಲಾಗಿತ್ತು. ಆದರೆ ಈ ಸಿನಿಮಾ ಬಾಕ್ಸ್ ಆಫೀಸ್‌ನಲ್ಲಿ 200 ಕೋಟಿಗೂ ಹೆಚ್ಚಿನ ಹಣವನ್ನು ಗಳಿಕೆ ಮಾಡಿತು. ಸಿನಿಮಾಕ್ಕೆ ಸೌಬಿನ್ ಶಾಹಿರ್, ಬಾಬು ಶಾಹಿರ್ ಮತ್ತು ಶಾನ್ ಆಂಟೊನಿ ಬಂಡವಾಳ ಹೂಡಿದ್ದು, ಭಾರಿ ಮೊತ್ತದ ಲಾಭವನ್ನೇ ಸಿನಿಮಾನಿಂದ ಗಳಿಕೆ ಮಾಡಿದರು.

ಆದರೆ ಯುಎಇ ಮೂಲದ ಹೂಡಿಕೆದಾರರೊಬ್ಬರು ಸೌಬಿನ್ ಹಾಗೂ ಇತರೆ ನಿರ್ಮಾಪಕರುಗಳ ವಿರುದ್ಧ ವಂಚನೆ, ನಂಬಿಕೆ ದ್ರೋಹದ ಪ್ರಕರಣ ದಾಖಲು ಮಾಡಿದರು. ಕಳೆದ ವರ್ಷವೇ ದೂರು ದಾಖಲಾಗಿದ್ದು ಪ್ರಕರಣ ಈಗ ಸೌಬಿನ್ ವಿರುದ್ಧ ತಿರುಗುವ ಸೂಚನೆಗಳು ದೊರೆತಿವೆ.

# ಫ್ಯಾಮಿಲಿ ಕೋರ್ಟ್ ಮೆಟ್ಟಿಲೇರಿದ ಕೃಷ್ಣ, ಮಿಲನಾ

ವಿಚ್ಛೇದನದ ಬಗ್ಗೆ ಏನಾದರೂ ಗುಮಾನಿ

ಯಾವುದೇ ಸೆಲೆಬ್ರಿಟಿಗಳು ಫ್ಯಾಮಿಲಿ ಕೋರ್ಟ್‌ನಲ್ಲಿ ಕಾಣಿಸಿಕೊಂಡರೆ ಅಭಿಮಾನಿಗಳಿಗೆ ಅಚ್ಚರಿ ಆಗುವುದು ಸಹಜ. ಡಾರ್ಲಿಂಗ್ ಕೃಷ್ಣ ಮತ್ತು ಮಿಲನಾ ನಾಗರಾಜ್ ಅವರ ವಿಚಾರದಲ್ಲೂ ಹಾಗೆಯೇ ಆಗಿದೆ. ಫೋಟೋ ನೋಡಿ ಶಾಕ್ ಆಗಿದೆ. ಮಾಸ್ಕ್ ಧರಿಸಿರುವ ಡಾರ್ಲಿಂಗ್ ಕೃಷ್ಣ ಅವರು ಫ್ಯಾಮಿಲಿ ಕೋರ್ಟ್ ಆವರಣದಲ್ಲಿ ನಡೆದು ಬರುತ್ತಿರುವ ಫೋಟೋ ವೈರಲ್ ಆಗುತ್ತಿದೆ. ಕನ್ನಡ ಚಿತ್ರರಂಗದಲ್ಲಿ ನಟ ಡಾರ್ಲಿಂಗ್ ಕೃಷ್ಣ ಮತ್ತು ನಟಿ ಮಿಲನಾ ನಾಗರಾಜ್ ಅವರು ಕ್ಯೂಟ್ ಜೋಡಿ ಎನಿಸಿಕೊಂಡಿದ್ದಾರೆ. ಹಲವು ವರ್ಷಗಳ ಕಾಲ ಪರಸ್ಪರ ಪ್ರೀತಿಸಿದ್ದ ಅವರು 2021ರಲ್ಲಿ ಮದುವೆ ಆದರು. ಈ ದಂಪತಿಗೆ ಒಂದು ಮುದ್ದಾದ ಹೆಣ್ಣು ಮಗು ಇದೆ. ಅವರಿಬ್ಬರ ಸಂಸಾರದಲ್ಲಿ ಎಲ್ಲವೂ ಚೆನ್ನಾಗಿಯೇ ಇದೆ. ಆದರೆ ಏಕಾಏಕಿ ಅವರು ಫ್ಯಾಮಿಲಿ ಕೋರ್ಟ್‌ನಲ್ಲಿ ಕಾಣಿಸಿಕೊಂಡಿದ್ದಾರೆ! ಆ ಜಾಗದಲ್ಲಿ ಅವರನ್ನು ಕಂಡು ಎಲ್ಲರಿಗೂ ಶಾಕ್ ಆಗಿದೆ. ಅಷ್ಟಕ್ಕೂ ಮಿಲನಾ ನಾಗರಾಜ್ ಮತ್ತು ಡಾರ್ಲಿಂಗ್ ಕೃಷ್ಣ ಅವರು ಫ್ಯಾಮಿಲಿ ಕೋರ್ಟ್ ಮೆಟ್ಟಿಲೇರಲು ಕಾರಣ ಏನು ವಿಚ್ಛೇದನದ ಬಗ್ಗೆ ಏನಾದರೂ ಗುಮಾನಿ ಇದೆಯಾ ಎಲ್ಲದಕ್ಕೂ ಇಲ್ಲಿದೆ ಉತ್ತರ.. ಡಾರ್ಲಿಂಗ್ ಕೃಷ್ಣ ಅವರು ಮಾಸ್ಕ್ ಧರಿಸಿ ಫ್ಯಾಮಿಲಿ ಕೋರ್ಟ್‌ನಲ್ಲಿ ಕಾಣಿಸಿಕೊಂಡಿರುವ ಫೋಟೋ ಲಭ್ಯವಾಗಿದೆ. ಗುರುತು ಸಿಗಬಾರದು ಎಂಬ ಕಾರಣಕ್ಕೆ ಅವರು ಮಾಸ್ಕ್ ಧರಿಸಿದ್ದಾರೆ. ಆದರೂ ಕೂಡ ಅದು ಡಾರ್ಲಿಂಗ್ ಕೃಷ್ಣ ಎಂಬುದು ಗೊತ್ತಾಗುತ್ತಿದೆ. ಅಂದಹಾಗೆ, ಡಾರ್ಲಿಂಗ್ ಕೃಷ್ಣ ಅವರು ಫ್ಯಾಮಿಲಿ ಕೋರ್ಟ್‌ನಲ್ಲಿ ಕಾಣಿಸಿಕೊಂಡಿರುವುದು ಸಿನಿಮಾ ಸಲುವಾಗಿ ಎನ್ನಲಾಗಿದೆ! ನಟನಾಗಿ ಮಾತ್ರವಲ್ಲದೇ ನಿರ್ದೇಶಕನಾಗಿ ಕೂಡ ಡಾರ್ಲಿಂಗ್ ಕೃಷ್ಣ ಅವರು ಫೇಮಸ್ ಆಗಿದ್ದಾರೆ.

# ವಿಚಾರಣೆಗೆ ಬರುವಂತೆ ಶಿಖರ್ ಧವನ್‌ಗೆ ಇಡಿ ಸಮನ್ಸ್

ಕಳೆದ ವರ್ಷ ಅಂತಾರಾಷ್ಟ್ರೀಯ ಕ್ರಿಕೆಟ್ ವಿದಾಯ ಹೇಳಿ ವೈಯಕ್ತಿಕ ಜೀವನದ ಕಡೆ ಗಮನಹರಿಸಿರುವ ಟೀಂ ಇಂಡಿಯಾದ ಮಾಜಿ ಆರಂಭಿಕ ಆಟಗಾರ ಶಿಖರ್ ಧವನ್ ಅವರಿಗೆ ಜಾರಿ ನಿರ್ದೇಶನಾಲಯ ಸಮನ್ಸ್ ಜಾರಿ ಮಾಡಿದೆ. ಬೆಟ್ಟಿಂಗ್ ಆಯಪ್ ಪ್ರಚಾರಕ್ಕೆ ಸಂಬಂಧಿಸಿದ ಪ್ರಕರಣದಲ್ಲಿ ಧವನ್ ಅವರನ್ನು ಜಾರಿ ನಿರ್ದೇಶನಾಲಯ ವಿಚಾರಣೆಗೆ ಕರೆದಿದೆ. ವಾಸ್ತವವಾಗಿ ಶಿಖರ್ ಧವನ್ ಸೋಶಿಯಲ್ ಮೀಡಿಯಾದಲ್ಲಿ ಆನ್‌ಲೈನ್ ಬೆಟ್ಟಿಂಗ್ ಪ್ಲಾಟ್‌ಫಾರ್ಮ್ 1xBetನ ಪ್ರಚಾರ ಮಾಡಿದ್ದರು. ಹೀಗಾಗಿ ಈ ವಿಚಾರಕ್ಕೆ ಸಂಬಂಧಿಸಿದಂತೆ ಸ್ಪಷ್ಟೀಕರಣ ನೀಡಲು ಶಿಖರ್ ಧವನ್ ಅವರನ್ನು ವಿಚಾರಣೆಗೆ ಕರೆಯಲಾಗಿದೆ ಎಂದು ವರದಿಯಾಗಿದೆ. ವಾಸ್ತವವಾಗಿ ಶಿಖರ್ ಧವನ್‌ಗೂ ಮುನ್ನ ಟೀಂ ಇಂಡಿಯಾದ ಮಾಜಿ ಕ್ರಿಕೆಟಿಗರಾದ ಸುರೇಶ್ ರೈನಾ ಮತ್ತು ಹರ್ಭಜನ್ ಸಿಂಗ್ ಅವರನ್ನು ಸಹ ಇಡಿ ವಿಚಾರಣೆಗೆ ಒಳಪಡಿಸಿತ್ತು.

**ಹಲವು ಸ್ಟಾರ್‌ಗಳ ತನಿಖೆ ನಡೆದಿದೆ:** ಕಳೆದ ವರ್ಷದಿಂದ, ಅಕ್ರಮ ಬೆಟ್ಟಿಂಗ್ ಆಯಪ್‌ಗಳನ್ನು ಪ್ರಚಾರ ಮಾಡಿದ್ದಕ್ಕಾಗಿ ಅನೇಕ ಬಾಲಿವುಡ್ ಮತ್ತು ದಕ್ಷಿಣ ಭಾರತದ ಚಲನಚಿತ್ರ ನಟರು ಮತ್ತು ಕ್ರಿಕೆಟಿಗರು ತನಿಖೆಗೆ ಒಳಗಾಗಿದ್ದಾರೆ. ಈ ಪಟ್ಟಿಯಲ್ಲಿ ವಿಜಯ್ ದೇವರಕೊಂಡ, ರಾಣಾ ದಗ್ಗುಬಾಟಿ, ಪ್ರಕಾಶ್ ರಾಜ್, ಹರ್ಭಜನ್ ಸಿಂಗ್, ಊರ್ವಶಿ ರೌಟೇಲಾ ಮತ್ತು ಸುರೇಶ್ ರೈನಾ ಸೇರಿದ್ದಾರೆ. ಈಗ ಶಿಖರ್ ಧವನ್ ಅವರ ಹೆಸರೂ ಇದಕ್ಕೆ ಸೇರ್ಪಡೆಯಾಗಿದೆ. ಇತ್ತೀಚೆಗೆ, ಭಾರತದ ಮಾಜಿ ಕ್ರಿಕೆಟಿಗರಾದ ಸುರೇಶ್ ರೈನಾ ಮತ್ತು ಹರ್ಭಜನ್ ಸಿಂಗ್ ಅವರು ಇಡಿ ಮುಂದೆ ತಮ್ಮ ಹೇಳಿಕೆಗಳನ್ನು ದಾಖಲಿಸಿದ್ದರು. ಈಗ ಈ ಪ್ರಕರಣದಲ್ಲಿ ಶಿಖರ್ ಧವನ್ ಅವರಿಗೆ ಇಡಿ ಸಮನ್ಸ್ ಜಾರಿ ಮಾಡಿದೆ.

**ಕೋಟ್ಯಾಂತರ ರೂಪಾಯಿ ವಂಚನೆ:** ಇಡಿ, ಅಕ್ರಮ ಬೆಟ್ಟಿಂಗ್ ಅಪ್ಲಿಕೇಶನ್‌ಗಳಿಗೆ ಸಂಬಂಧಿಸಿದ ಹಲವು ಪ್ರಕರಣಗಳ ತನಿಖೆ ನಡೆಸುತ್ತಿದೆ. ಇಂತಹ ಬೆಟ್ಟಿಂಗ್ ಅಪ್ಲಿಕೇಶನ್‌ಗಳು ಕಾನೂನುಬಾಹಿರ ಮಾತ್ರವಲ್ಲ, ಅವುಗಳ ಮೂಲಕ ದೊಡ್ಡ ಪ್ರಮಾಣದ ಹಣ ವರ್ಗಾವಣೆ ಚಟುವಟಿಕೆಗಳು ಸಹ ನಡೆಯುತ್ತಿವೆ ಎಂಬುದು ತನಿಖೆಯಿಂದ ತಿಳಿದುಬಂದಿದೆ. ಈ ಅಪ್ಲಿಕೇಶನ್‌ಗಳು ಲಕ್ಷಾಂತರ ಜನರನ್ನು ಮತ್ತು ಹೂಡಿಕೆದಾರರಿಗೆ ಕೋಟ್ಯಂತರ ರೂಪಾಯಿ ವಂಚಿಸಿದೆ ಅಥವಾ ಭಾರಿ ಪ್ರಮಾಣದ ತೆರಿಗೆಯನ್ನು ತಪ್ಪಿಸಿದೆ ಎಂದು ಆರೋಪಿಸಲಾಗಿದೆ.

**ಶಿಖರ್ ಧವನ್ ವೃತ್ತಿಜೀವನ:** ಶಿಖರ್ ಧವನ್ 2022ರಲ್ಲಿ ತಮ್ಮ ಕೊನೆಯ ಅಂತರರಾಷ್ಟ್ರೀಯ ಕ್ರಿಕೆಟ್ ಪಂದ್ಯವನ್ನು ಆಡಿದ್ದರು, ನಂತರ ಅವರಿಗೆ ಟೀಂ ಇಂಡಿಯಾ ಪರ ಆಡಲು ಅವಕಾಶ ಸಿಗಲಿಲ್ಲ. ಅದೇ ಸಮಯದಲ್ಲಿ, 2024 ರ ಐಪಿಎಲ್‌ನಲ್ಲಿ ಆಡಿದ ನಂತರ ಧವನ್ ಎಲ್ಲಾ ಸ್ವರೂಪಗಳಿಂದ ನಿವೃತ್ತಿ ಘೋಷಿಸಿದ್ದರು.

ಧವನ್ ಭಾರತೀಯ ಕ್ರಿಕೆಟ್‌ನ ಅತ್ಯುತ್ತಮ ಎಡಗೈ ಆರಂಭಿಕ ಬ್ಯಾಟ್ಸ್‌ಮನ್‌ಗಳಲ್ಲಿ ಒಬ್ಬರಾಗಿದ್ದು, ಐಸಿಸಿ ಪಂದ್ಯಾವಳಿಗಳಲ್ಲಿ ಅವರ ಪ್ರದರ್ಶನ ಅತ್ಯುತ್ತಮವಾಗಿದೆ.






## ಐಪಿಎಲ್‌ಗೆ ಜಿಎಸ್‌ಟಿ ಶಾಕ್:
# ಟಿಕೆಟ್ ದರ ಮತ್ತಷ್ಟು ದುಬಾರಿ



ಯುಎಇ ವಿರುದ್ಧ ಮೊದಲ ಪಂದ್ಯ

ಕೇಂದ್ರ ಸರ್ಕಾರವು ಜಿಎಸ್‌ಟಿ ದರಗಳಲ್ಲಿ ಮಹತ್ವದ ಪರಿಷ್ಕರಣೆ ಘೋಷಿಸಿದೆ. ಈ ಹಿಂದಿನ ಶೇ 12 ಮತ್ತು 28ರ ಜಿಎಸ್‌ಟಿ ದರಗಳ ಸ್ಲ್ಯಾಬ್‌ಗಳನ್ನು ರದ್ದುಗೊಳಿಸಿ, ಶೇ 5 ಮತ್ತು 18ರ ಸ್ಲ್ಯಾಬ್‌ಗಳನ್ನು ಮಾತ್ರ ಉಳಿಸಿಕೊಳ್ಳಲಾಗಿದೆ. ಇದರಿಂದ ಹಲವು ವಸ್ತುಗಳ ಬೆಲೆಗಳಲ್ಲಿ ಇಳಿಕೆಯಾಗಲಿದೆ. ಆದರೆ ಇದೇ ವೇಳೆ ಐಪಿಎಲ್ ಟಿಕೆಟ್‌ಗಳ ಮೇಲೆ ಜಿಎಸ್‌ಟಿ ದರಗಳನ್ನು ಹೆಚ್ಚಿಸಲಾಗಿದೆ. ಕೇಂದ್ರ ಸರ್ಕಾರ ಸರಕು ಮತ್ತು ಸೇವಾ ತೆರಿಗೆಯನ್ನು ಪರಿಷ್ಕರಣೆ ಮಾಡಿದೆ.

ಈ ಪರಿಷ್ಕರಣೆಯಿಂದಾಗಿ ಹಲವು ವಸ್ತುಗಳ ಬೆಲೆಯಲ್ಲಿ ಭಾರೀ ಇಳಿಕೆ ಕಂಡು ಬರಲಿದೆ. ಆದರೆ ಇತ್ತ ಇದೇ ಪರಿಷ್ಕರಣೆಯಿಂದಾಗಿ ಇಂಡಿಯನ್ ಪ್ರೀಮಿಯರ್ ಲೀಗ್‌ನ ಟಿಕೆಟ್‌ಗಳ ಬೆಲೆ ಮತ್ತಷ್ಟು ದುಬಾರಿಯಾಗಲಿದೆ. ಹೌದು, ಕೇಂದ್ರ ಸರ್ಕಾರ ಜಿಎಸ್‌ಟಿ ಸ್ಲ್ಯಾಬ್‌ಗಳಲ್ಲಿ ಪರಿಷ್ಕರಣೆ ಮಾಡಿದ್ದು, ಶೇ 12 ಮತ್ತು ಶೇ 28ರ ಸ್ಲ್ಯಾಬ್ ಜಿಎಸ್‌ಟಿ ತೆರಿಗೆಗಳನ್ನು ರದ್ದು ಮಾಡಲಾಗಿದೆ.

ಅಲ್ಲದೆ ಶೇ 5 ಮತ್ತು ಶೇ 18ರ ತೆರಿಗೆ ಸ್ಲ್ಯಾಬ್‌ಗಳನ್ನು ಮಾತ್ರ ಉಳಿಸಿಕೊಳ್ಳಲಾಗಿದೆ. ಇದರಿಂದ ಅನೇಕ ವಸ್ತುಗಳ ಬೆಲೆಗಳು ಕಡಿಮೆಯಾಗಲಿದೆ. ಆದರೆ ಇದೇ ವೇಳೆ ಐಪಿಎಲ್ ಟಿಕೆಟ್‌ಗಳ ಮೇಲಿನ ಜಿಎಸ್‌ಟಿ ದರವನ್ನು ಹೆಚ್ಚಿಸಲಾಗಿದೆ. ಅಂದರೆ ಕಳೆದ ಬಾರಿಗಿಂತ ಇನ್ಮುಂದೆ ಐಪಿಎಲ್ ಟಿಕೆಟ್ ಮೇಲೆ ಶೇ.12 ರಷ್ಟು ಜಿಎಸ್‌ಟಿ ದರ ಹೆಚ್ಚಾಗಲಿದೆ.

ಈ ಹಿಂದೆ, 1000 ರೂ. ಮೌಲ್ಯದ ಐಪಿಎಲ್ ಟಿಕೆಟ್‌ಗಳ ಮೇಲೆ 28% ಜಿಎಸ್‌ಟಿ ವಿಧಿಸಲಾಗುತ್ತಿತ್ತು.

ಇದರಿಂದಾಗಿ ಟಿಕೆಟ್‌ನ ಒಟ್ಟು ಬೆಲೆ 1280 ರೂ.ಗಳಾಗುತ್ತಿದ್ದರು. ಇದೀಗ ಐಪಿಎಲ್ ಟಿಕೆಟ್‌ಗಳ ಮೇಲೆ ಶೇ.40 ರಷ್ಟು ಜಿಎಸ್‌ಟಿ ವಿಧಿಸಲಿದ್ದಾರೆ ಎಂದು ವರದಿಯಾಗಿದೆ.

ಅದರಂತೆ ಮುಂದಿನ ಸೀಸನ್ ಐಪಿಎಲ್ ವೇಳೆ ಟಿಕೆಟ್ ದರಗಳು ಮತ್ತಷ್ಟು ದುಬಾರಿಯಾಗಲಿದೆ. ಅಂದರೆ 1000 ರೂ. ಟಿಕೆಟ್ ಖರೀದಿಸಿದರೆ, ಅದರ ಮೇಲೆ ಶೇ.40 ರಷ್ಟು ಜಿಎಸ್‌ಟಿ ವಿಧಿಸಲಾಗುತ್ತದೆ. ಇದರಿಂದ 1000 ರೂ. ಟಿಕೆಟ್ ದರವು 1400 ರೂ. ಆಗಲಿದೆ ಎಂದು ವರದಿಯಾಗಿದೆ. ಇದೇ ರೀತಿ ಅತೀ ಕಡಿಮೆ ಟಿಕೆಟ್ ದರವಾಗಿರುವ 500 ರೂ.ಗಳ ಟಿಕೆಟ್‌ನ ಹೊಸ ಬೆಲೆಯು 700 ರೂ. ಆಗಲಿದೆ. ಇದಕ್ಕೂ ಮುನ್ನ 500 ರೂ. ಟಿಕೆಟ್ ದರವು ಜಿಎಸ್‌ಟಿ ಸೇರಿ 640 ರೂ.ಗೆ ಮಾರಾಟ ಮಾಡಲಾಗುತ್ತಿತ್ತು. ಇನ್ನು 2000 ರೂ.ಗಳ ಟಿಕೆಟ್‌ಗೆ 2560 ರೂ.ಗಳ ಬದಲಿಗೆ 2800 ರೂ.ಗಳನ್ನು ಪಾವತಿಸಬೇಕಾಗುತ್ತದೆ. ಅಂದರೆ ಹೊಸ ಜಿಎಸ್‌ಟಿ ಪರಿಷ್ಕರಣೆಯಿಂದಾಗಿ ಇಂಡಿಯನ್ ಪ್ರೀಮಿಯರ್ ಲೀಗ್ ಸೀಸನ್-19 ರ ಟಿಕೆಟ್ ದರಗಳು ಮತ್ತಷ್ಟು ಹೆಚ್ಚಾಗಲಿರುವುದು ಖಚಿತ. ಈ ದರವನ್ನು ಕಡಿಮೆ ಮಾಡಲು ಐಪಿಎಲ್ ಫ್ರಾಂಚೈಸಿಗಳು ಮುಂದಾಗಲಿದ್ದಾರಾ ಕಾದು ನೋಡಬೇಕಿದೆ.

**ಅಭಿಮಾನಿಗಳ ಕೊರತೆ ಆತಂಕ:** ಐಪಿಎಲ್ ಟಿಕೆಟ್‌ಗಳ ಬೆಲೆಯು ದುಬಾರಿಯಾದರೆ ಅಭಿಮಾನಿಗಳ ಕೊರತೆ ಕಂಡು ಬರುವ ಸಾಧ್ಯತೆ ಹೆಚ್ಚು. ಇದೀಗ ಪರಿಷ್ಕೃತ ಜಿಎಸ್‌ಟಿ ದರದ ಬೆನ್ನಲ್ಲೇ ಕ್ರೀಡಾಂಗಣಕ್ಕೆ ಅಭಿಮಾನಿಗಳು ಬರುವುದು ಕಡಿಮೆಯಾಗಲಿದೆಯಾ ಎಂಬ ಆತಂಕವೊಂದು ಶುರುವಾಗಿದೆ. ಹೀಗಾಗಿಯೇ ಮುಂಬರುವ ಐಪಿಎಲ್‌ಗೂ ಮುನ್ನ ಟಿಕೆಟ್ ದರಗಳ ಬಗ್ಗೆ ಫ್ರಾಂಚೈಸಿಗಳ ನಡುವೆ ಚರ್ಚೆ ನಡೆಯುವ ಸಾಧ್ಯತೆ ಇದೆ. ಮತ್ತೊಂದೆಡೆ ಮಾನ್ಯತೆ ಪಡೆದ ಕ್ರೀಡಾಕೂಟದ ಟಿಕೆಟ್‌ನ ಬೆಲೆ 500 ರೂ. ಆಗಿದ್ದರೆ, ಅದರ ಮೇಲೆ ಯಾವುದೇ ಜಿಎಸ್‌ಟಿ ಇರುವುದಿಲ್ಲ ಎಂದು ಸರ್ಕಾರ ತಿಳಿಸಿದೆ. ಐನೂರಕ್ಕಿಂತ ಹೆಚ್ಚಿನ ಬೆಲೆಯ ಟಿಕೆಟ್‌ಗಳಿಗೆ ಶೇ. 18 ರಷ್ಟು ಜಿಎಸ್‌ಟಿ ವಿಧಿಸಲಾಗುತ್ತದೆ. ಇದಲ್ಲದೆ, ಬೆಟ್ಟಿಂಗ್, ಜೂಜು, ಲಾಟರಿ, ಕುದುರೆ ರೇಸಿಂಗ್ ಮತ್ತು ಆನ್‌ಲೈನ್ ಮನಿ ಗೇಮ್ ಚಟುವಟಿಕೆಗಳ ಮೇಲೆ ಶೇ. 40 ರಷ್ಟು ಜಿಎಸ್‌ಟಿ ವಿಧಿಸಲು ಜಿಎಸ್‌ಟಿ ಕೌನ್ಸಿಲ್ ನಿರ್ಧರಿಸಿದೆ.

# ಒಂದಂಕಿಗೆ ಸುಸ್ತಾದ ಜೈಸ್ವಾಲ್



ಏಷ್ಯಾಕಪ್ ತಂಡದಿಂದ ವಂಚಿತರಾದ ಯುವ ಆಟಗಾರ ಯಶಸ್ವಿ ಜೈಸ್ವಾಲ್ ಅವರು ದುಲೀಪ್ ಟ್ರೋಫಿಯಲ್ಲಿ ನಿರಾಶಾದಾಯಕ ಆರಂಭವನ್ನು ಕಂಡಿದ್ದಾರೆ. ಪಶ್ಚಿಮ ವಲಯ ತಂಡದ ಪರ ಆಡಿದ ಅವರು ಕೇವಲ 4 ರನ್‌ಗಳಿಗೆ ಔಟ್ ಆದರು. ಶ್ರೇಯಸ್ ಅಯ್ಯರ್ ಕೂಡ ನಿರೀಕ್ಷೆಗೆ ತಕ್ಕಂತೆ ಆಡಲಿಲ್ಲ. ಎರಡನೇ ಇನ್ನಿಂಗ್ಸ್‌ನಲ್ಲಿ ಇಬ್ಬರಿಂದಲೂ ಉತ್ತಮ ಪ್ರದರ್ಶನದ ನಿರೀಕ್ಷೆ ಇದೆ. ಏಷ್ಯಾಕಪ್ ತಂಡದಲ್ಲಿ ಸ್ಥಾನ ಪಡೆಯಲು ವಿಫಲವಾದ ನಿರಾಶೆಯಲ್ಲಿದ್ದ ಟೀಂ ಇಂಡಿಯಾದ ಯುವ ಆರಂಭಿಕ ಆಟಗಾರ ಯಶಸ್ವಿ ಜೈಸ್ವಾಲ್ ಇಂದಿನಿಂದ ಆರಂಭವಾಗಿರುವ ದುಲೀಪ್ ಟ್ರೋಫಿ ಸೆಮಿಫೈನಲ್ ಪಂದ್ಯದಲ್ಲಿ ಪಶ್ಚಿಮ ವಲಯ ತಂಡದ ಪರ ಕಣಕ್ಕಿಳಿದಿದ್ದರು. ಆದರೆ ಈ ಪಂದ್ಯದ ಮೊದಲ ಇನ್ನಿಂಗ್ಸ್‌ನಲ್ಲಿ ಜೈಸ್ವಾಲ್‌ಗೆ ಒಂದಂಕಿಯನ್ನೂ ದಾಟಲು ಸಾಧ್ಯವಾಗಲಿಲ್ಲ. ದುಲೀಪ್ ಟ್ರೋಫಿಯ ಸೆಮಿಫೈನಲ್ ಪಂದ್ಯ ಪಶ್ಚಿಮ ವಲಯ ಹಾಗೂ ಕೇಂದ್ರ ವಲಯ ತಂಡಗಳ ನಡುವೆ ನಡೆಯುತ್ತಿದೆ. ಈ ಪಂದ್ಯದಲ್ಲಿ ಪಶ್ಚಿಮ ವಲಯ ತಂಡದ ಪರ ಆರಂಭಿಕನಾಗಿ ಕಣಕ್ಕಿಳಿದಿದ್ದ ಯಶಸ್ವಿ ಜೈಸ್ವಾಲ್ ಮೊದಲ ಇನ್ನಿಂಗ್ಸ್‌ನಲ್ಲಿ ಕೇವಲ 3 ಎಸೆತಗಳನ್ನು ಎದುರಿಸಿ 4 ರನ್ ಕಲೆಹಾಕಿ ಖಲೀಲ್ ಅಹ್ಮದ್ ಅವರ ಬೌಲಿಂಗ್‌ನಲ್ಲಿ ಎಲ್ಬಿಡಬ್ಲ್ಯು ಔಟ್ ಆದರು. ಬೆಂಗಳೂರಿನಲ್ಲಿ ನಡೆಯುತ್ತಿರುವ ದುಲೀಪ್ ಟ್ರೋಫಿಯ ಎರಡನೇ ಸೆಮಿಫೈನಲ್ ಪಂದ್ಯದಲ್ಲಿ, ಶಾರ್ದೂಲ್ ಠಾಕೂರ್ ನಾಯಕತ್ವದ ಪಶ್ಚಿಮ ವಲಯ ತಂಡಕ್ಕೆ ಕೆಟ್ಟ ಆರಂಭ ಸಿಕ್ಕಿತು. ತಂಡದ ಇಬ್ಬರು ಆರಂಭಿಕರು 10 ರನ್‌ಗಳ ಒಳಗೆ ಪೆವಿಲಿಯನ್‌ಗೆ ಮರಳಿದರು. ಇಂಗ್ಲೆಂಡ್‌ನಲ್ಲಿ ಅದ್ಭುತ ಪ್ರದರ್ಶನ ನೀಡಿದ್ದ ಯಶಸ್ವಿ ಜೈಸ್ವಾಲ್ ಕೇವಲ 3 ಎಸೆತಗಳಲ್ಲಿ 4 ರನ್ ಗಳಿಸಿ ಪೆವಿಲಿಯನ್‌ಗೆ ಮರಳಿದರೆ, ಮತ್ತೊಬ್ಬ ಆರಂಭಿಕ ಹಾರ್ವಿಕ್ ದೇಸಾಯಿ 1 ರನ್‌ಗೆ ಔಟಾದರು. ಇಂಗ್ಲೆಂಡ್ ವಿರುದ್ಧದ ಟೆಸ್ಟ್ ಸರಣಿಯಲ್ಲಿ ಯಶಸ್ವಿ ಜೈಸ್ವಾಲ್ ಉತ್ತಮ ಪ್ರದರ್ಶನ ನೀಡಿದರು.

## ಎಲ್ಲಾ ಮಾದರಿಯ ಕ್ರಿಕೆಟ್‌ಗೆ
# ವಿದಾಯ ಹೇಳಿದ
## ಟೀಮ್ ಇಂಡಿಯಾ ಆಟಗಾರ



ಅಮಿತ್ ಮಿಶ್ರಾ ಭಾರತ ಪರ 22 ಟೆಸ್ಟ್, 36 ಏಕದಿನ ಹಾಗೂ 10 ಟಿ20 ಪಂದ್ಯಗಳನ್ನಾಡಿದ್ದಾರೆ. ಈ ವೇಳೆ ತಮ್ಮ ಸ್ಪಿನ್ ಮೋಡಿಯೊಂದಿಗೆ 156 ವಿಕೆಟ್‌ಗಳನ್ನು ಕಬಳಿಸಿದ್ದಾರೆ. ಈ ಮೂಲಕ ಭಾರತ ಪರ ಅಂತಾರಾಷ್ಟ್ರೀಯ ಕ್ರಿಕೆಟ್‌ನಲ್ಲಿ 150 ಕ್ಕಿಂತ ಹೆಚ್ಚು ವಿಕೆಟ್ ಪಡೆದ ಬೌಲರ್‌ಗಳ ಪಟ್ಟಿಯಲ್ಲಿ ಸ್ಥಾನ ಪಡೆದಿದ್ದಾರೆ. ಟೀಮ್ ಇಂಡಿಯಾ ಆಟಗಾರ ಅಮಿತ್ ಮಿಶ್ರಾ, ಎಲ್ಲಾ ಮಾದರಿಯ ಕ್ರಿಕೆಟ್‌ಗೆ ವಿದಾಯ ಹೇಳಿದ್ದಾರೆ. ಇದರೊಂದಿಗೆ 15 ವರ್ಷಗಳ ಸುದೀರ್ಘ ವೃತ್ತಿಜೀವನ ಅಂತ್ಯಗೊಂಡಂತಾಗಿದೆ. 2010 ರಲ್ಲಿ ಭಾರತದ ಪರ ಸ್ಪಿನ್ನರ್ ಆಗಿ ಪಾದಾರ್ಪಣೆ ಮಾಡಿದ ಅಮಿತ್ ಮಿಶ್ರಾ 2017 ರವರೆಗೆ ಟೀಮ್ ಇಂಡಿಯಾವನ್ನು ಪ್ರತಿನಿಧಿಸಿದ್ದರು. 2017 ರಲ್ಲಿ ಟೀಮ್ ಇಂಡಿಯಾದಿಂದ ಹೊರಬಿದ್ದರೂ ಅಮಿತ್ ಮಿಶ್ರಾ, ದೇಶೀಯ ಕ್ರಿಕೆಟ್ ಹಾಗೂ ಇಂಡಿಯನ್ ಪ್ರೀಮಿಯರ್ ಲೀಗ್‌ಗಳಲ್ಲಿ ತೊಡಗಿಸಿಕೊಂಡಿದ್ದರು. ಇದೀಗ 42ನೇ ವಯಸ್ಸಿನಲ್ಲಿ ಎಲ್ಲಾ ಮಾದರಿಯ ಕ್ರಿಕೆಟ್‌ಗೆ ಗುಡ್ ಬೈ ಹೇಳಲು ನಿರ್ಧರಿಸಿದ್ದಾರೆ. ಈ ಬಗ್ಗೆ ಸೋಷಿಯಲ್ ಮೀಡಿಯಾ ಪೋಸ್ಟ್ ಹಂಚಿಕೊಂಡಿರುವ ಅಮಿತ್ ಮಿಶ್ರಾ, ನನ್ನ ಕ್ರಿಕೆಟ್ ಜೀವನದ ಈ 25 ವರ್ಷಗಳು ಸ್ಮರಣೀಯ. ಇಷ್ಟು ದಿನ ನನ್ನೊಂದಿಗಿದ್ದ ಬಿಸಿಸಿಐ, ಆಡಳಿತ, ಹರಿಯಾಣ ಕ್ರಿಕೆಟ್ ಸಂಘ, ಸಹಾಯಕ ಸಿಬ್ಬಂದಿ, ನನ್ನ ಸಹೋದ್ಯೋಗಿಗಳು ಮತ್ತು ನನ್ನ ಕುಟುಂಬ ಸದಸ್ಯರಿಗೆ ನಾನು ತುಂಬಾ ಕೃತಜ್ಞನಾಗಿದ್ದೇನೆ. ಇಷ್ಟು ವರ್ಷಗಳ ಸ್ಮರಣೀಯ ನೆನಪುಗಳೊಂದಿಗೆ ಎಲ್ಲಾ ಮಾದರಿಯ ಕ್ರಿಕೆಟ್‌ಗೆ ವಿದಾಯ ಹೇಳುತ್ತಿರುವುದಾಗಿ ಅಮಿತ್ ಮಿಶ್ರಾ ತಿಳಿಸಿದ್ದಾರೆ. ಅಮಿತ್ ಮಿಶ್ರಾ ಭಾರತದ ಪರ 22 ಟೆಸ್ಟ್ ಪಂದ್ಯಗಳಲ್ಲಿ ಕಣಕ್ಕಿಳಿದಿದ್ದರು. ಈ ವೇಳೆ 40 ಇನಿಂಗ್ಸ್‌ಗಳಲ್ಲಿ ಬೌಲಿಂಗ್ ಮಾಡಿರುವ ಅವರು 76 ವಿಕೆಟ್ ಪಡೆದಿದ್ದಾರೆ. ಇನ್ನು ಏಕದಿನ ಕ್ರಿಕೆಟ್‌ನಲ್ಲಿ 36 ಪಂದ್ಯಗಳಲ್ಲಿ ಭಾರತವನ್ನು ಪ್ರತಿನಿಧಿಸಿದ್ದ ಅವರು 34 ಇನಿಂಗ್ಸ್‌ಗಳ ಮೂಲಕ 64 ವಿಕೆಟ್ ಕಬಳಿಸಿದ್ದಾರೆ. ಹಾಗೆಯೇ ಟಿ20 ಕ್ರಿಕೆಟ್‌ನಲ್ಲಿ ಟೀಮ್ ಇಂಡಿಯಾ ಪರ 10 ಪಂದ್ಯಗಳನ್ನಾಡಿದ್ದಾರೆ.

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966